ಸಂಪುಟ: 14 Volume | ಸಂಚಿಕೆ: 27 Issue | ಪುಟಗಳು 08 Pages | ಶುಕ್ರವಾರ 01 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ಗಟ್ಟಿಯಾವುದು, ಜಳ್ಳುಯಾವುದು ಎಂಬುದನ್ನು ತಿಳಿದು ಶಾಶ್ವತವಾದ ಸತ್ಯವನ್ನು ಹುಡುಕುವುದು ನಮ್ಮ ಧರ್ಮವಾಗಬೇಕು.

–ಬಿ.ಎಂ.ಶ್ರೀ

ಗಮನ ಸೆಳೆದ ರಂಗೋಲಿ 6

ಹಗಲು ನಿರಂತರ ವಿದ್ಯುತ್, ಟಿಸಿ ಸರಿಪಡಿಸಲು ಆಗ್ರಹ 7

ವೃತ್ತಿಯಲ್ಲಿ ಸೇವಾ ಮನೋಭಾವ ಬಹುಮುಖ್ಯ 8



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಸದಾಶಿವ ನಗರದಲ್ಲಿರುವ ದಿವಂಗತ ರಾಮಕೃಷ್ಣ ಹೆಗಡೆ ಅವರ ನಿವಾಸಕ್ಕೆ ಭೇಟಿ ನೀಡಿ ಶ್ರೀಮತಿ ಶಕುಂತಲಾ ಹೆಗಡೆ ಅವರ ಆರೋಗ್ಯ ವಿಚಾರಿಸಿದರು. ಹೆಗಡೆ ಅವರ ಪುತ್ರಿಯರಾದ ಮಮತಾ, ಸಮತಾ, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ಮಾಜಿ ಸಚಿವ ಬಿ.ಎಲ್. ಶಂಕರ್ ಹಾಜರಿದ್ದರು.

## 14 ಲಕ್ಷ ಬೆಲೆಯ ಚಿನ್ನಾಭರಣ ವಶಕ್ಕೆ

**ಕಲಬುರಗಿ:** ಇಲ್ಲಿನ ದೇವಾನಗರದಲ್ಲಿ ನಡೆದ ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂತಾರಾಜ್ಯ ಕಳ್ಳನೊಬ್ಬನನ್ನು ಬಂಧಿಸಿ 14 ಲಕ್ಷ ರೂ.ಮೌಲ್ಯದ ಚಿನ್ನಾಭರಣ ವಶಕ್ಕೆ ಪಡೆಯಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದ್ದಾರೆ.

ನಗರದ ಪೊಲೀಸ್ ಆಯುಕ್ತರ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೆಲಂಗಾಣ ರಾಜ್ಯದ ಮೆಡಿಚಲ್ ಮಲ್ಕಾಜಗಿರಿಯ ಕೀಸರ ಮಂಡಲ ನಾಗವರಂನ ಶಿವಪ್ರಸಾದ ಆದಿನಾರಾಯಣ ಮಂತ್ರಿ ಅಲಿಯಾಸ್ ಮಂತ್ರಿ ಶಂಕರ (61) ಎಂಬಾತನನ್ನು ಬಂಧಿಸಿ 14 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವಿವರಿಸಿದ್ದಾರೆ.



ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆ, ಭದ್ರಾ ಮೇಲ್ದಂಡೆ ಯೋಜನೆ ಹಾಗೂ ಮೇಕೆದಾಟು ಸಮತೋಲನ ಜಲಾಶಯ ಮತ್ತು ಕುಡಿಯುವ ನೀರಿನ ಯೋಜನೆಗಳ ಪ್ರಗತಿ ಕುರಿತು ವಿಧಾನಸೌಧದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸಭೆಯಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್, ಸಚಿವರಾದ ಡಾ. ಜಿ. ಪರಮೇಶ್ವರ, ಈಶ್ವರ್ ಖಂಡ್ರೆ, ಕೃಷ್ಣಬೈರೇಗೌಡ, ಜಲ ಸಂಪನ್ಮೂಲ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಮತ್ತಿತರರು ಭಾಗವಹಿಸಿದ್ದರು.



ಹುಮನಾಬಾದ ಪಟ್ಟಣದಲ್ಲಿ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯನ್ನು ಅಲ್ಲಂ ಶ್ರೀನಿವಾಸ್ ರೆಡ್ಡಿರವರು ಓದುತ್ತಿರುವುದನ್ನು ಕಾಣಬಹುದು. ಈ ಸಂದರ್ಭದಲ್ಲಿ ಆದರ್ಶರೆಡ್ಡಿ ಇದ್ದರು.

## ಎರಡೂ ರಾಜ್ಯದಲ್ಲಿ ಸರ್ಕಾರ: ಬಿಜೆಪಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ಬಿಜೆಪಿ ಸರಕಾರ ರಚನೆ ಆಗುವುದು ಖಚಿತ ಎಂದು ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಇಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಅವರು ಮಾತನಾಡಿ, ಬಂಗಾಳದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮೇಲೆ ಜನತೆ ವಿಶ್ವಾಸ ಇಟ್ಟಿದ್ದಾರೆ. ಅಸ್ಸಾಂನಲ್ಲಿ ಜನತೆ ಮೂರನೇ ಬಾರಿ ಸೇವೆ ಮಾಡುವ ಅವಕಾಶ ನೀಡಲಿದ್ದಾರೆ. ಬಂಗಾಳದಲ್ಲಿ ಈ ಬಾರಿ ರಾಷ್ಟ್ರವಾದಿಗಳ ಸರಕಾರ ರಚನೆ ಆಗಲಿದೆ ಎಂದು ನುಡಿದಿದ್ದಾರೆ.

ಪಾಂಡಿಚೇರಿಯಲ್ಲಿ ಎನ್ಡಿಎ ಸರಕಾರ ಬರಲಿದೆ. ತಮಿಳುನಾಡಿನಲ್ಲಿ ಒಳ್ಳೆಯದೇ ಆಗಲಿದೆ. ಕೇರಳದಲ್ಲಿ



ಬಿಜೆಪಿ ಪ್ರಮುಖ ಶಕ್ತಿಯಾಗಿ ಹೊರಹೊಮ್ಮುತ್ತದೆ ಎಂದು ವಿವರಿಸಿದ್ದಾರೆ.

## 2,016 ಕೋಟಿ ರೂ. ವಹಿವಾಟು..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸರಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತವು (ಕೆ.ಎಸ್.ಡಿ.ಎಲ್) 2025–26ನೇ ಸಾಲಿನಲ್ಲಿ ಇದೇ ಮೊಟ್ಟಮೊದಲ ಬಾರಿಗೆ 2,016 ಕೋಟಿ ರೂ. ವಹಿವಾಟು ನಡೆಸಿ, 507 ಕೋಟಿ ರೂ. ನಿವ್ವಳ ಲಾಭ ದಾಖಲಿಸಿರುವುದು ಅಭೂತಪೂರ್ವ ಸಾಧನೆಯಾಗಿದೆ. ಇದರ ಶ್ರೇಯಸ್ಸು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರ ದೂರಗಾಮಿ ಚಿಂತನೆಗಳಿಗೆ ಸಲ್ಲುತ್ತದೆ. ಇದಕ್ಕಾಗಿ ಅವರು ಅಭಿನಂದನಾರ್ಹರು ಎಂದು ಸರಕಾರಿ ಸಾಬೂನು ಕಾರ್ಖಾನೆ ಕಾರ್ಮಿಕರ ಸಂಘವು ಹೇಳಿದೆ.ತಮ್ಮ ಅಧ್ಯಕ್ಷ ಮೈಕೇಲ್ ಫರ್ನಾಂಡಿಸ್ ನೇತೃತ್ವದಲ್ಲಿ ಸಚಿವರನ್ನು ಇಲ್ಲಿನ ಅವರ ನಿವಾಸದಲ್ಲಿ



ಭೇಟಿಯಾದ ಸಂಘದ ಪದಾಧಿಕಾರಿಗಳು, ಇದಕ್ಕಾಗಿ ಸಚಿವರನ್ನು ಅಭಿನಂದಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಫರ್ನಾಂಡಿಸ್ ಅವರು, ಸಾಬೂನು ಕಾರ್ಖಾನೆಯು ತನ್ನ 110 ವರ್ಷಗಳ ಇತಿಹಾಸದಲ್ಲಿ ಕಳೆದ ಹಣಕಾಸು ವರ್ಷದಲ್ಲಿ ಇದೇ ಮೊದಲ ಬಾರಿಗೆ 2 ಸಾವಿರ ಕೋಟಿ ರೂ. ಗಳಿಗೂ ಹೆಚ್ಚಿನ ವಹಿವಾಟು ನಡೆಸಿದ್ದು, 47,494 ಮೆಟ್ರಿಕ್ ಟನ್ ಉತ್ಪಾದನೆ ದಾಖಲಿಸಿದೆ ಎಂದಿದ್ದಾರೆ.

# ಕುರ್ಚಿ ಕದನಕ್ಕೆ ಬ್ರೇಕ್

### ಬದಲಾವಣೆ ವದಂತಿಗೆ ಹೈಕಮಾಂಡ್ ತೆರೆ | ನಾಯಕತ್ವ ಬದಲಾವಣೆಯ ವಿಚಾರಕ್ಕೂ ಶೀಘ್ರ ಇತಿಶ್ರೀ: ಖರ್ಗೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರ್ಗಿ

ರಾಜ್ಯದಲ್ಲಿ ಸದ್ಯಕ್ಕೆ ಸಿಎಂ ಬದಲಾವಣೆ ಇಲ್ಲ, ನಾಯಕತ್ವ ಬದಲಾವಣೆಯ ಗೊಂದಲ ಶೀಘ್ರದಲ್ಲಿಯೇ ಬಗೆಹರಿಯಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಈ ಮೂಲಕ ಕಳೆದ ಒಂದು ವರ್ಷದಿಂದ ಕೇಳಿಬರುತ್ತಿದ್ದ ಸಿಎಂ ಬದಲಾವಣೆ ವದಂತಿಗೆ ಹೈಕಮಾಂಡ್ ತೆರೆ ಎಳೆದಂತಾಗಿದೆ.

**ಬದಲಾವಣೆ ಬಗ್ಗೆ ಗೊಂದಲ ನಿಜ:** ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಗೊಂದಲಗಳಿರುವುದು ನಿಜ, ಅದು ಶೀಘ್ರವೇ ಬಗೆಹರಿಯಲಿದೆ. ನಾನು ಸಿಎಂ ಆಗಬೇಕೆಂದು ಕೆಲವರು ಹೇಳುತ್ತಾರೆ, ಆದರೆ ಕಾಂಗ್ರೆಸ್ ಪಕ್ಷದಲ್ಲಿ ಸಿದ್ಧಾಂತ ಮತ್ತು ದಶಕಗಳ ದುಡಿಮೆ ಮುಖ್ಯ ಎಂದರು.

**ವರಿಷ್ಠರ ಜತೆ ಚರ್ಚಿಸಿ ತೀರ್ಮಾನ:** ಪ್ರಸ್ತುತ ರಾಜ್ಯದಲ್ಲಿ ಮುಖ್ಯಮಂತ್ರಿಗಳಿದ್ದಾರೆ, ಚೆನ್ನಾಗಿ ಕೆಲಸ ಮಾಡಿಕೊಂಡು ಹೋಗುತ್ತಿದ್ದಾರೆ. ಹೀಗಾಗಿ ಸಿಎಂ ಬದಲಾವಣೆ ಚರ್ಚೆ ಸದ್ಯಕ್ಕೆ ಉದ್ಭವಿಸುವುದಿಲ್ಲ. ಒಂದು ವೇಳೆ ಅಂತಹ ಸಂದರ್ಭ ಬಂದರೆ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಯವರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತೇವೆ. ಅದಕ್ಕೆ ಸಮಯ ಹಿಡಿಯುತ್ತದೆ, ಆ ಸಮಯ ಬಂದಾಗ ನೋಡೋಣ ಎದು ವಿವರಿಸಿದ್ದಾರೆ.



### ಪಕ್ಷದ ಸಿದ್ಧಾಂತ ಪ್ರಕಾರ ನಿರ್ಣಯ

ಕರ್ನಾಟಕದಲ್ಲಿ ಸಿಎಂ ಬದಲಾವಣೆ ಮಾಡಬೇಕೆಂದು ಸೋನಿಯಾ ಗಾಂಧಿಯವರು, ರಾಹುಲ್ ಗಾಂಧಿಯವರು ನಿರ್ಣಯ ತೆಗೆದುಕೊಂಡರೆ ಸಮಯ ಹಿಡಿಯುತ್ತದೆ. ನಾನು ಸಿಎಂ ಆದರೆ ಉತ್ತಮ ಎಂದು ಅವರು ಹೇಳುತ್ತಾರೆ, ನೀವು ಹೇಳುತ್ತೀರಿ. ಆದರೆ ನಮ್ಮ ಹಣೆಬರಹ ಅನ್ನೋಕಿಂತ ಪಕ್ಷದ ಸಿದ್ಧಾಂತ ಪ್ರಕಾರ ನಿರ್ಣಯ ತೆಗೆದುಕೊಳ್ಳುತ್ತಾರೆ, ಅದನ್ನು ಸೋನಿಯಾ ಗಾಂಧಿ ನಿರ್ಧರಿಸುತ್ತಾರೆ ಎಂದಿದ್ದಾರೆ ಖರ್ಗೆ.

### ಫಲಿತಾಂಶಕ್ಕೆ ದಿನಗಣನೆ

ಪಂಚ ರಾಜ್ಯಗಳ ಚುನಾವಣೆ ಹಾಗೂ ಕರ್ನಾಟಕದಲ್ಲಿ ಉಪಚುನಾವಣೆ ಮುಗಿದು ಫಲಿತಾಂಶಕ್ಕೆ ದಿನಗಣನೆ ಆರಂಭವಾಗಿರುವ ಸಂದರ್ಭದಲ್ಲಿ ಕಾಂಗ್ರೆಸ್‌ನಲ್ಲಿ ಕಳೆದೊಂದು ವಾರದಿಂದ ಚಟುವಟಿಕೆ ಗರಿಗೆದರಿದೆ. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ ಕೆ ಶಿವಕುಮಾರ್ ಬಣದ ಸಚಿವರು, ಶಾಸಕರು ಹೇಳಿಕೆಗಳನ್ನು ನೀಡುತ್ತಾ ಹೈಕಮಾಂಡ್ ಏನು ತೀರ್ಮಾನ ಕೈಗೊಳ್ಳುತ್ತದೆ ಎಂದು ಕಾತರದಿಂದ ಕಾಯುತ್ತಿದ್ದಾರೆ.

### ಖರ್ಗೆ ಬಳಿ ಪ್ರಸ್ತಾಪ?

ನಾಯಕತ್ವ ಬದಲಾವಣೆ ಅನಿವಾರ್ಯವಾದರೆ, ಪಕ್ಷದ ಸರಕಾರದ ಸ್ಥಿರತೆ ಮತ್ತು ಒಗ್ಗಟ್ಟು ಕಾಯ್ದುಕೊಂಡು ಹೋಗಬೇಕು ಎಂದು ಮಹದೇವಪ್ಪ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಲಹೆ ನೀಡಿದ್ದಾರೆ. ಜೂನ್‌ನಲ್ಲಿ ರಾಜ್ಯಸಭೆ ಅವಧಿಯೂ ಮುಗಿಯುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಕ್ಕೆ ಮರಳಿದರೆ ಪಕ್ಷದ ಎಲ್ಲರಿಗೂ ಖುಷಿ. ದಲಿತ ಸಮುದಾಯದ ನಿರೀಕ್ಷೆಯೂ ಕೈಗೂಡಿದಂತಾಗುತ್ತದೆ ಎಂಬ ಪ್ರಸ್ತಾಪ ಮುಂದಿಟ್ಟಿದ್ದಾರೆ ಎನ್ನಲಾಗಿದೆ.

### ಅಹಿಂದಕ್ಕೆ ಜಾರಕಿ ಪಟ್ಟು

ದಲಿತ ಸಮಾವೇಶದ ಪ್ರಸ್ತಾಪದ ಮಧ್ಯೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅಹಿಂದ ಅಸ್ತ್ರಪ್ರಯೋಗಿಸಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಗಾದಿ ಮೇಲೆ ಕಣ್ಣಿಟ್ಟಿರುವ ಜಾರಕಿಹೊಳಿ ಹುಬ್ಬಳ್ಳಿಯಲ್ಲಿ ಅಹಿಂದ ಸಮಾವೇಶದ ಪ್ರಸ್ತಾಪವನ್ನು ಎಐಸಿಸಿ ವರಿಷ್ಠರ ಮುಂದಿಟ್ಟಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರಿಗೆ ರಾಜಕೀಯ ಔನ್ನತ್ಯ ತಂದುಕೊಟ್ಟ 'ಅಹಿಂದ'ಕ್ಕೆ ನೈಜ ಉತ್ತರಾಧಿಕಾರಿಯಾಗಲು ಜಾರಕಿಹೊಳಿ ಬಯಸಿದ್ದಾರೆ.

### ಡಿಸಿಎಂ ಹೊಸ ಅಸ್ತ್ರ

ದಲಿತ ಸಮಾವೇಶ, ಅಹಿಂದ ಸಮಾವೇಶ ಯಾವುದೇ ಆಗುವುದಾದರೂ ಅದು ಪಕ್ಷದ ವೇದಿಕೆಯಲ್ಲೇ ಆಗಬೇಕು. ವ್ಯಕ್ತಿಕೇಂದ್ರಿತವಾಗಿ ಇಂತಹ ಸಮಾವೇಶಗಳು ನಡೆಯಲು ಅವಕಾಶ ಕೊಡಬಾರದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೊಸ ಅಸ್ತ್ರ ಇರಿಸಿದ್ದಾರೆ. ಈ ಬೆಳವಣಿಗೆಗಳು ರಾಜ್ಯ ರಾಜಕೀಯ ಬೆಳವಣಿಗೆಗಳನ್ನು ಬಹು ಆಯಾಮಗಳತ್ತ ಕೊಂಡೊಯ್ಯುತ್ತಿದ್ದು, ಮೇನಲ್ಲಿ ಈ ಚಟುವಟಿಕೆಗಳು ಜೋರಾಗುವ ಸುಳಿವು ಇದೆ.

## ಕಲಬುರ್ಗಿ ಕೊನೆ ಸ್ಥಾನ, ಸುಧಾರಣೆ?

• ಮಲ್ಲಮ್ಮ ನುಡಿ ವಾರ್ತೆ ಸೇಡಂ

ವಿದ್ಯಾರ್ಥಿ ಜೀವನದ ಪ್ರಮುಖ ಘಟ್ಟವಾದ ಎಸ್.ಎಸ್.ಎಲ್ ಸಿ ಫಲಿತಾಂಶ ಪ್ರಕಟವಾಗಿದೆ. 35 ಶೈಕ್ಷಣಿಕ ಜಿಲ್ಲೆಗಳ ಪೈಕಿ ಕಲಬುರಗಿ ಕಟ್ಟಕಡೆಯ 35 ನೇ ಸ್ಥಾನ ಪಡೆದಿದೆ. ಶಿಕ್ಷಣ ಸುಧಾರಣೆಗೆ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಆಸಕ್ತಿ ಇಲ್ಲ ಎಂಬುದು ಕಾಣುತ್ತಿದ್ದೆ ಎಂದು ಕಲಬುರಗಿ ಜಿಲ್ಲಾ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೇದಾರ ಹೇಳಿದ್ದಾರೆ.

ಪ್ರಮುಖವಾಗಿ ಹೆಚ್ಚಿನ ಪ್ರಮಾಣದಲ್ಲಿರುವ ಶಿಕ್ಷಕರ ಕೊರತೆಯು ಫಲಿತಾಂಶ ಪ್ರಮಾಣ ಕುಸಿಯಲು ಮುಖ್ಯ ಕಾರಣ ಶಿಕ್ಷಣ ಸುಧಾರಣೆಗೆ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಆಸಕ್ತಿ ಇಲ್ಲ ಎಂಬುದು ಈ ಎಸ್ ಎಸ್ ಎಲ್ ಸಿ ಫಲಿತಾಂಶ ಸಾಬೀತುಪಡಿಸುತ್ತಿದೆ. ಈ ಭಾಗದ ಪ್ರತಿನಿಧಿಗಳು ಸಂಬಂಧವಿಲ್ಲದ ವಿಷಯಗಳನ್ನೆಲ್ಲ ಮಾತನಾಡುತ್ತಾರೆ. ಶೈಕ್ಷಣಿಕ ಸಮಸ್ಯೆಗಳ ಕುರಿತಾಗಿ ಧ್ವನಿ ಎತ್ತಿದ್ದೇ ಅಪರೂಪ. ಬರೀ ಬಾಯಿ ಮಾತಲ್ಲಿ ಶಿಕ್ಷಣ ಸುಧಾರಣೆ ಆಗಬೇಕು ಎಂದರೆ ಸಾಲದು. ಆಡಳಿತಾತ್ಮಕವಾಗಿ ಬದಲಾವಣೆಗೆ ನಾಂದಿ ಹಾಡಬೇಕು ಎಂದು ಒತ್ತಾಯಿಸಿದ್ದಾರೆ.

## ಪ್ರಿಯಾಂಕ್ ವಿರುದ್ಧ ಜಗದೇವ ಕಿಡಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರ ಕುರಿತು ಜಿಲ್ಲೆಯಲ್ಲಿ ಬಿಜೆಪಿ ನಾಯಕರು ಪ್ರಚಾರಕ್ಕಾಗಿ ಬಾಯಿಗೆ ಬಂದಂತೆ ಸುಳ್ಳು ಅಪಾದನೆ ಮಾಡುವದನ್ನು ಬಿಟ್ಟು ಅಭಿವೃದ್ಧಿ ಕಾರ್ಯಕ್ಕೆ ಸಹಕಾರ ನೀಡಲಿ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಜಗದೇವ ಗುತ್ತೇದಾರ ಕಾಳಗಿ ತಿಳಿಸಿದ್ದಾರೆ. ಬಿಜೆಪಿಯವರ ಸುಳ್ಳು ಆರೋಪವನ್ನು ಅವರು ಖಂಡಿಸಿದ್ದಾರೆ. ಸರ್ಕಾರದಿಂದ ಅರ್ಹರಿಗೆ ಎಸ್.ಟಿ ಪ್ರಮಾಣ ಪತ್ರ ನೀಡಲು ನಮ್ಮ ಕಾಂಗ್ರೆಸ್ ಸರ್ಕಾರ ಪ್ರಾಮಾಣಿಕ ಪ್ರಯುತ್ನ ಮಾಡಿದೆ. ಆದರೆ ರಾಜಕೀಯ ಪ್ರೇರಿತವಾಗಿ ಬಿಜೆಪಿ ಯವರು ಹೋರಾಟ ನಡೆಸುತ್ತಿದ್ದಾರೆ. ಅರ್ಹ ಸಮುದಾಯದವರಿಗೆ ಎಸ್.ಟಿ. ಪ್ರಮಾಣ ಪತ್ರ ನೀಡಲು ಪ್ರಯತ್ನ ಮಾಡಿದಾಗಲೂ ಕೆಲವು ಸಂಸ್ಥೆಗಳು ಸತ್ಯ ಅರಿಯದೆ ಗೊಂದಲ ಮೂಡಿಸುತ್ತಿರುವುದು ನೋಡಿದರೆ ಇದು ರಾಜಕೀಯ ಪ್ರೇರಿತ ಎಂಬುದು ಸ್ಪಷ್ಟವಾಗಿ ಕಂಡುಬರುತ್ತದೆ.

## ಗೋಡೆ ಕುಸಿತ, ಮೃತರ ಸಂಖ್ಯೆ 10ಕ್ಕೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಗರದಲ್ಲಿ ಸುರಿದ ಭಾರಿ ಮಳೆಯ ಅವಾಂತರಕ್ಕೆ ಮೃತರ ಸಂಖ್ಯೆ 10ಕ್ಕೆ ಏರಿಕೆಯಾಗಿದೆ.

ಮನೆಯ ಮೇಲ್ಚಾವಣಿ, ಸಿಮೆಂಟ್ ಇಟ್ಟಿಗೆ ಬಿದ್ದು ವ್ಯಕ್ತಿಯೊಬ್ಬ ಮೃತಪಟ್ಟಿದ್ದಾನೆ.

ಮೃತ ವ್ಯಕ್ತಿಯನ್ನು ಮಂಜುನಾಥ್ ಎಂದು ಗುರುತಿಸಲಾಗಿದ್ದು, ಮನೆಯ ಮೇಲಿನ ಶೀಟ್ ಹಾರದಂತೆ ಕಲ್ಲು ಇಡಲಾಗಿತ್ತು. ಭಾರೀ ಗಾಳಿ–ಮಳೆಗೆ ಶೀಟ್ ಬಿದ್ದಿದ್ದು, ಈ ವೇಳೆ ಶೀಟ್ ಮೇಲಿಟ್ಟಿದ್ದ ಕಲ್ಲು ಮನೆಯಲ್ಲಿ ಮಲಗಿದ್ದ ಮಂಜುನಾಥ್ ಅವರ ಮೇಲೆ ಬಿದ್ದಿದೆ. ಪರಿಣಾಮ ಮಂಜುನಾಥ್ ಅವರು ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ ಇದೀಗ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ಸ್ಥಳಾಂತರ ಮಾಡಲಾಗಿದೆ.

ಇಡೀ ಬೆಂಗಳೂರಿನಾದ್ಯಂತ ಅಪಾಯಕಾರಿಯಾಗಿರುವ ಕಾಂಪೌಂಡ್ ಗಳ ಪಕ್ಕ ಇರುವ ಬೀದಿ ಬದಿ ವ್ಯಾಪಾರಿಗಳನ್ನು ತೆರವುಗೊಳಿಸಿ ಎಂದು ಸೂಚನೆ ನೀಡಲಾಗಿದೆ. ಇಂತಹ ಪ್ರದೇಶಗಳನ್ನು ಗುರುತಿಸಿ ಎಂದು ಈಗಾಗಲೇ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.



> ವಾಜಪೇಯಿ (ಬೌರಿಂಗ್) ಆಸ್ಪತ್ರೆಯ ಕಾಂಪೌಂಡ್ ಪಕ್ಕದಲ್ಲಿ ಮಣ್ಣಿನ ರಾಶಿ ಹಾಕಿದ್ದಾರೆ. ಇದರ ಒತ್ತಡ ತಾಳಲಾರದೆ ಕಾಂಪೌಂಡ್ ಕುಸಿದಿದೆ. ಈ ರಸ್ತೆಯಲ್ಲಿಯೂ ಯಾವ ವ್ಯಾಪಾರಿಗಳನ್ನು ಕೂರಿಸಬಾರದು ಎಂದು ಅಧಿಕಾರಿಗಳಿಗೆ ತಿಳಿಸಿದ್ದೇನೆ. ಬೆಂಗಳೂರಿನ ಎಲ್ಲಾ ರಸ್ತೆಗಳಲ್ಲಿ ಇರುವ ದುರ್ಬಲ ಮರಗಳು, ಕೊಂಬೆಗಳನ್ನು ಕತ್ತರಿಸಲಾಗುವುದು. ಈಗಾಗಲೇ ಕೆಲಸ ಪ್ರಾರಂಭವಾಗಿದೆ.
>
> –ಡಿಕೆ ಶಿವಕುಮಾರ್, ಉಪಮುಖ್ಯಮಂತ್ರಿ

**ಮಾಡುತ್ತಿದ್ದವರಿಗೆ ತಕ್ಕ ಪರಿಹಾರ**

ಬೌರಿಂಗ್ ಆಸ್ಪತ್ರೆಯ ಕಂಪೌಂಡ್ ಕುಸಿತ ಪ್ರಕರಣ ಬಗ್ಗೆ ಮಾತನಾಡಿದ ಅವರು, ಅದು ಹಳೆಯ ಕಾಂಪೌಂಡ್ ಆಗಿತ್ತು. ಎರಡನೆಯದಾಗಿ, ಅದನ್ನು ಸರಿಯಾಗಿ ನಿರ್ಮಿಸಲಾಗಿರಲಿಲ್ಲ. ಕೆಲವೆಡೆ ಮಣ್ಣಿನ ಗೋಡೆಗಳು, ಇನ್ನೂ ಕೆಲವೆಡೆ ಇಟ್ಟಿಗೆಯ ಗೋಡೆಗಳು ಇರುವುದನ್ನು ನಾನು ಗಮನಿಸಿದ್ದೇನೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ.

## ಕೊಲೆ ಆರೋಪಿಗಳಿಗೆ ಗಲ್ಲು ಶಿಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಬಿಜೆಪಿ ಯುವ ಮೋರ್ಚಾದ ನಗರ ಘಟಕದ ಅಧ್ಯಕ್ಷ ವೆಂಕಟೇಶ ಕುರುಬರ್ ಅಲಿಯಾಸ್ ಜೆಎನ್ಎನ್ ವೆಂಕಿ ಕೊಲೆ ಪ್ರಕರಣದಲ್ಲಿ ಭಾಗಿಯಾಗಿದ್ದ ಆರು ಜನ ಅಪರಾಧಿಗಳಿಗೆ ಗಲ್ಲು ಶಿಕ್ಷೆ ವಿಧಿಸಿ ಇಲ್ಲಿನ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಮಹತ್ವದ ತೀರ್ಪು ಪ್ರಕಟಿಸಿದೆ.

ಪ್ರಕರಣ ಸಂಬಂಧ ವಿಚಾರಣೆ ನಡೆಸಿದ ನ್ಯಾಯಾಧೀಶ ಸದಾನಂದ ನಾಗಪ್ಪ ನಾಯ್ಕ್ ಅವರು ಶಿಕ್ಷೆ ತೀರ್ಪು ಪ್ರಕಟಿಸಿದರು. ರವಿ, ಮೈಲಾರಿ, ಧನರಾಜ್, ಭೀಮಾ, ಸಲೀಂ ಮತ್ತು ಗಂಗಾಧರ ಗೌಳಿ ಶಿಕ್ಷೆಗೊಳಗಾದ ಅಪರಾಧಿಗಳು.

ಮೊದಲಿಗೆ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಸಿಟಿವಿಯ ಫೂಟೇಜ್ಗಳನ್ನು ಪರಿಶೀಲಿಸಿದ ನ್ಯಾಯಾಧೀಶ ಸದಾನಂದ ನಾಗಪ್ಪ ನಾಯ್ಕ್, ಅಪರಾಧಿಗಳು ಈ ಹಿಂದೆ ವಿವಿಧ ಪ್ರಕರಣಗಳಲ್ಲಿ ಭಾಗಿಯಾದ ಹಿನ್ನೆಲೆಯ ಬಗ್ಗೆಯೂ ಪರಿಶೀಲನೆ ನಡೆಸಿದ್ದಾರೆ. ವೆಂಕಟೇಶ್ ಅವರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದ ಪ್ರಕರಣ ಸಂಬಂಧ ಆರು ಜನ ಅರೋಪಿಗಳನ್ನು ದೋಷಿ ಎಂದು ಈ ಹಿಂದೆ ಕೋರ್ಟ್ ತೀರ್ಪು ನೀಡಿ, ಶಿಕ್ಷೆ ಪ್ರಮಾಣ ಕಾಯ್ದಿರಿಸಿತ್ತು. ಅಂತೆಯೇ ಇಂದು ನ್ಯಾಯಾಧೀಶರು, ಆರು ಜನರಿಗೆ ಮರಣದಂಡನೆ ವಿಧಿಸಿ ತೀರ್ಪು ನೀಡಿದ್ದಾರೆ.

### ಅಂದು ಮಾರಕಾಸ್ತ್ರಗಳಿಂದ ಭೀಕರ ದಾಳಿ

ಅಕ್ಟೋಬರ್ 7 2025 ರ ತಡರಾತ್ರಿ ಊಟ ಮುಗಿಸಿಕೊಂಡು ಸ್ನೇಹಿತರೊಂದಿಗೆ ದ್ವಿಚಕ್ರ ವಾಹನದಲ್ಲಿ ವೆಂಕಟೇಶ ತೆರಳುತ್ತಿದ್ದ ಸಂದರ್ಭದಲ್ಲಿ ಕಾರಿನಲ್ಲಿ ಹಿಂಬಾಲಿಸಿದ ಯುವಕರ ಗುಂಪು, ದ್ವಿಚಕ್ರ ವಾಹನಕ್ಕೆ ಗುದ್ದಿ ಬೀಳಿಸಿದ್ದರು.ಬಳಿಕ ಕೆಳಕ್ಕೆ ಬಿದ್ದ ವೆಂಕಟೇಶನ ಮೇಲೆ ಮಾರಕಾಯುಧಗಳಿಂದ ದಾಳಿ ಮಾಡಿ ಮನಬದಂತೆ ಕೊಚ್ಚಿ ಕೊಲೆ ಮಾಡಿದ್ದರು.




**ಸಭ್ಯ ನಾಗರಿಕ ಸಮಾಜದ ಇಂತಹ ಕೃತ್ಯ ಒಪ್ಪದು**

ಗಂಗಾವತಿಯ ರೈಲ್ವೆ ನಿಲ್ದಾಣದ ಬಳಿ ನಡೆದಿದ್ದ ಮಾರುತಿ ಎಂಬ ಯುವಕನ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ ಪ್ರಕರಣದಲ್ಲಿ ವೆಂಕಟೇಶ ಪ್ರತ್ಯಕ್ಷ ಸಾಕ್ಷಿಯಾಗಿದ್ದರು. ಅಲ್ಲದೇ ಮಾರುತಿ ಚಿಕಿತ್ಸೆಗೆ ಕೊನೆಯವರೆಗೂ ಬೆಂಬಲವಾಗಿ ನಿಂತಿದ್ದ ಎಂಬ ಕಾರಣಕ್ಕೆ ವೆಂಕಟೇಶನನ್ನು ಕೊಲೆ ಮಾಡಿದ್ದೀರಿ. ಸಭ್ಯ ನಾಗರಿಕ ಸಮಾಜದ ಇಂತಹ ಕೃತ್ಯಗಳನ್ನು ಒಪ್ಪುವುದಿಲ್ಲ. ಅಪರಾಧ ಕೃತ್ಯಗಳ ಹಿನ್ನೆಲೆ ಪರಿಗಣಿಸಿ ಗಲ್ಲು ಶಿಕ್ಷೆ ವಿಧಿಸಲಾಗಿದೆ ಎಂದು ನ್ಯಾಯಾಧೀಶರು ತೀರ್ಪು ಪ್ರಕಟಿಸಿದರು.

**ಕಲಬುರಗಿ ಮೂಲದ ಖ್ಯಾತ ಚಿತ್ರಕಲಾವಿದ ಎಂ.ಜಿ. ದೊಡ್ಡಮನಿ ಅವರಿಗೆ ಕರ್ನಾಟಕ ಲಲಿತಕಲಾ ಅಕಾಡೆಮಿಯ 'ಗೌರವ ಪ್ರಶಸ್ತಿ 2024-25' ನೀಡಿದೆ**

# ಮಕ್ಕಳಿಗೆ ಉಚಿತ ಆಧಾರ್

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಜಿಲ್ಲೆಯಾದ್ಯಂತ 5 ರಿಂದ 17 ವರ್ಷ ವಯೋಮಿತಿಯ ಮಕ್ಕಳಿಗೆ ಕಡ್ಡಾಯ ಬಯೋಮೆಟ್ರಿಕ್ ಅಪ್ಡೇಟ್ ಮಾಡಿಸಲು ಜಿಲ್ಲೆಯ ಎಲ್ಲಾ ಆಧಾರ್ ಕೇಂದ್ರಗಳಲ್ಲಿ ಉಚಿತವಾಗಿ ಅವಕಾಶ ಕಲ್ಪಿಸಲಾಗಿದೆ.

ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೆಪ್ಟೆಂಬರ್ 30 ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಮಕ್ಕಳ ಆಧಾರ್ ಕಾರ್ಡ್ನಲ್ಲಿ ಬಯೋಮೆಟ್ರಿಕ್ ಮಾಹಿತಿಯನ್ನು ನವೀಕರಿಸುವುದರಿಂದ ಶಾಲಾ ದಾಖಲಾತಿ,

ಸ್ಪರ್ಧಾತ್ಮಕ ಪರೀಕ್ಷೆಗಳು, ಸರ್ಕಾರಿ ವಿವಿಧ ಯೋಜನೆಗಳು, ವಿದ್ಯಾರ್ಥಿ ವೇತನ ಸೇರಿದಂತೆ ಶೈಕ್ಷಣಿಕ ಸವಲತ್ತುಗಳ ಲಾಭ ಪಡೆಯಲು ಅಪ್ಡೇಟ್ ಮಾಡುವುದು ಅತ್ಯಗತ್ಯವಾಗಿದೆ.

ಹಾಗಾಗಿ ಪೋಷಕರು ಕೂಡಲೇ ತಮ್ಮ ಮಕ್ಕಳ ಆಧಾರ್ ಕಾರ್ಡ್ ಹಾಗೂ ಅಗತ್ಯ ದಾಖಲೆಗಳೊಂದಿಗೆ ಹತ್ತಿರದ ಆಧಾರ್ ಕೇಂದ್ರಗಳಿಗೆ ಭೇಟಿ ನೀಡಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು.

ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳು ಮಕ್ಕಳಿಗೆ ಸರಿಯಾದ ಸಮಯಕ್ಕೆ ತಲುಪುವಂತೆ ಮಾಡಲು ಪೋಷಕರು ಈ ಜವಾಬ್ದಾರಿಯನ್ನು ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

# ಬೀದರ್ ಮಾದರಿಯಲ್ಲಿ ಕೊಪ್ಪಳ ಜಿಲ್ಲೆಯಲ್ಲೂ ಕಾರ್ಮಿಕ ಸಹಕಾರ ಸಂಘ ಸ್ಥಾಪನೆಗೆ ಸಿದ್ಧತೆ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ವರ ಗುತ್ತಿಗೆ ನೌಕರರಿಗಾಗಿ ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚನೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೊಪ್ಪಳ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚಿಸುವ ಬಗ್ಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರದ ವಿವಿಧ ಇಲಾಖೆಗಳು ಮತ್ತು ಇಲಾಖೆಗಳ ಅಧೀನದಲ್ಲಿ ಬರುವ ನಿಗಮ ಮಂಡಳಿ ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರಿಗೆ ಸಂಬಂಧಿಸಿದಂತೆ, ಕೊಪ್ಪಳ ಜಿಲ್ಲೆಯಲ್ಲೂ ಸಹ ಬೀದರ್ ಮಾದರಿಯಲ್ಲಿ ಸಂಘವನ್ನು ಸ್ಥಾಪಿಸಿ, ಈ ಸಂಘದ ಮೂಲಕ ಹೊರಗುತ್ತಿಗೆ ನೌಕರರನ್ನು ವಿವಿಧ ಇಲಾಖೆಗಳಿಗೆ ನಿಯೋಜಿಸಿದ್ದಲ್ಲಿ ಹೊರಗುತ್ತಿಗೆ ನೌಕರರ ವೇತನ ಪಾವತಿ ಹಾಗೂ ಶಾಸನಾತ್ಮಕವಾಗಿ ನೀಡಬೇಕಾದ ಸೌಲಭ್ಯಗಳ ಕುರಿತಾದ ಸಮಸ್ಯೆಯನ್ನು ಪರಿಹರಿಸಲು ಅನುಕೂಲವಾಗಲಿದೆ ಎಂದರು.

ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚಿಸಿ, ಅದರಲ್ಲಿ ಒಂದು ಸಾವಿರ ಹೊರಗುತ್ತಿಗೆ ನೌಕರರನ್ನು ನೋಂದಾಯಿಸಲು ಅವಕಾಶವಿದ್ದು, ಈ ಬಗ್ಗೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಮುಖ್ಯಸ್ಥರಿಗೆ ಕಾರ್ಮಿಕ ಇಲಾಖೆಯಿಂದ ಸೂಕ್ತ ಮಾಹಿತಿ ನೀಡುವಂತಾಗಬೇಕು. ಈ ಸಭೆಯ ನಡಾವಳಿ ಮತ್ತು ಸರ್ಕಾರದ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ ಎಲ್ಲಾ ಅಧಿಕಾರಿಗಳನ್ನೊಳಗೊಂಡು ಕೊಪ್ಪಳ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ರಚಿಸಲು ಬೈಲಾ ಸಿದ್ಧಪಡಿಸಿ ಮುಂದಿನ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಕಾರ್ಮಿಕ ಇಲಾಖೆ ಮತ್ತು ಸಹಕಾರಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ಸ್ಥಾಪನೆಗೆ ಮಾತ್ರ ಪ್ರಸ್ತುತ ಅವಕಾಶವಿದ್ದು, ಉಳಿದಂತೆ ನ್ಯಾಯಾಲಯಗಳಲ್ಲಿ ವಿವಿಧ ಸಂಸ್ಥೆ ಹಾಗೂ ಸಂಘಟನೆಗಳಿಂದ ರಿಟ್ ಪಿಟೀಷನಗಳು ದಾಖಲಾಗಿರುವುದರಿಂದ ಈ ಪ್ರಕರಣಗಳ ತಿರ್ಪಿನ್ನು ಆಧರಿಸಿ ಸಹಕಾರ ಸಂಘದ ಕಾರ್ಯ ಚಟುವಟಿಕೆ ಮುಂದುವರೆಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಲ್ಲಾ ಅಧಿಕಾರಿಗಳಿಗೆ ಮತ್ತು ಕಾರ್ಮಿಕರ ಪ್ರತಿನಿಧಿಗಳಿಗೆ ಸ್ಪಷ್ಟಪಡಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತವನ್ನು ರಚಿಸಲು ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ತಮ್ಮ ಇಲಾಖೆವಾರು ಹಾಗೂ ಅಧೀನ ನಿಗಮ ಮಂಡಳಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಹೊರಗುತ್ತಿಗೆ ಕಾರ್ಮಿಕರ ವಿವರ ಹಾಗೂ ಏಜನ್ಸಿ ಮತ್ತು ಟೆಂಡರ್ ಅವಧಿಯ ಸರಿಯಾಗಿ ಮಾಹಿತಿ ನೀಡಬೇಕೆಂದು ಇಲಾಖಾ ಮುಖ್ಯಸ್ಥರಿಗೆ ಸೂಚನೆ ನೀಡಿದರು. ಕೊಪ್ಪಳ ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಸುಧಾ ಗರಗ ಅವರು ಮಾತನಾಡಿ, ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ ಸಂಘಕ್ಕೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಡಳಿತ ಮಂಡಳಿ ಇರಲಿದ್ದು, ಕಾರ್ಯದರ್ಶಿಗಳಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಬಾಲಕಾರ್ಮಿಕ ಯೋಜನಾ ಸೋಸೈಟಿಯ ನಿರ್ದೇಶಕರು ಮತ್ತು ಯೋಜನಾ ನಿರ್ದೇಶಕರು ಹಾಗೂ ಐದು ಜನ ಚುನಾಯಿತ ಸದಸ್ಯರು ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತಕ್ಕೆ ನಿರ್ದೇಶಕರಾಗುತ್ತಾರೆ. ಎಲ್ಲಾ ಕಾರ್ಮಿಕರು ಸದಸ್ಯರಾಗಿರುತ್ತಾರೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೋಸೈಟಿಯ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರ ಅವರು, ಸಹಕಾರ ಸಂಘ ರಚನೆಯ ಉದ್ದೇಶ, ಸರ್ಕಾರದ ನೀಡಿದ ನಿರ್ದೇಶನಗಳ ಕುರಿತು ಮತ್ತು ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳ ಕುರಿತು ಸಭೆಗೆ ತಿಳಿಸಿದರು. ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪರಶುರಾಮ್ ಶೆಟ್ಟಪ್ಪನವರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಟಿ.ಲಿಂಗರಾಜು, ಡಾ. ಬಿ.ಆರ್ ಅಂಬೇಡ್ಕರ್ ನಿಗಮದ ವ್ಯವಸ್ಥಾಕರಾದ ಪುಷ್ಪಲತಾ, ಕೊಪ್ಪಳ ವೃತ್ತದ ಕಾರ್ಮಿಕ ನಿರೀಕ್ಷಕರಾದ ಮಂಜುಳಾ ವಿಶ್ವನಾಥ, ಗಂಗಾವತಿ ವೃತ್ತದ ಕಾರ್ಮಿಕ ನಿರೀಕ್ಷಕರಾದ ಅಶೋಕ ಮಣಿಗಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಹೊರಗುತ್ತಿಗೆ ಕಾರ್ಮಿಕರ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

# ಸರಕಾರ ರೈತರ ನೆರವಿಗೆ ಬರುವುದು ಅತಿ ಅವಶ್ಯಕ

**ರೈತರು ದೇಶದ ಬೆನ್ನೆಲುಬು ಎನ್ನುವುದು ಕೇವಲ ಮಾತಲ್ಲ— ಇದು ನಿಜವಾದ ಸತ್ಯ. ರೈತರು ಉಳಿದರೆ ದೇಶದ ಆರ್ಥಿಕತೆ ಉಳಿಯುತ್ತದೆ, ಆಹಾರ ಭದ್ರತೆ ಬಲವಾಗುತ್ತದೆ. ಆದರೆ ಇಂದಿನ ಪರಿಸ್ಥಿತಿಯಲ್ಲಿ ರೈತರು ಅನೇಕ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಅಕಾಲಿಕ ಮಳೆ, ಬರ, ಬೆಳೆ ಹಾನಿ, ಸಾಲದ ಬಾಧೆ, ಮಾರುಕಟ್ಟೆ ಅಸ್ಥಿರತೆ—ಇವುಗಳೆಲ್ಲ ರೈತರ ಬದುಕನ್ನು ಕಠಿಣಗೊಳಿಸುತ್ತಿವೆ.**

**ಇಂತಹ ಸಂದರ್ಭದಲ್ಲಿ ಸರಕಾರದ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ರೈತರಿಗೆ ತಕ್ಷಣ ಪರಿಹಾರ ನೀಡುವುದು, ಬೆಳೆ ಹಾನಿಗೆ ಸಮರ್ಪಕ ಪರಿಹಾರ ಘೋಷಿಸುವುದು, ಬೆಳೆ ವಿಮೆ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವುದು ಅವಶ್ಯಕ. ಬಹುತೇಕ ಸಂದರ್ಭಗಳಲ್ಲಿ ಪರಿಹಾರ ಘೋಷಣೆಗಳು ಕಾಗದದಲ್ಲೇ ಉಳಿಯುತ್ತವೆ; ಅವು ರೈತರ ಕೈಗೆ ತಲುಪುವಲ್ಲಿ ವಿಳಂಬವಾಗುತ್ತದೆ. ಈ ವಿಳಂಬವೇ ರೈತರ ಸಂಕಷ್ಟವನ್ನು ಇನ್ನಷ್ಟು ಗಂಭೀರಗೊಳಿಸುತ್ತದೆ.**

**ಇನ್ನೊಂದೆಡೆ, ಕೃಷಿ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಸಿಗದಿರುವುದು ರೈತರ ಆರ್ಥಿಕ ಸ್ಥಿತಿಯನ್ನು ಕುಗ್ಗಿಸುತ್ತದೆ. ಕನಿಷ್ಠ ಬೆಂಬಲ ಬೆಲೆ (ಒಐಕ) ಎಲ್ಲಾ ಬೆಳೆಗಳಿಗೆ ಖಚಿತವಾಗಿ ಜಾರಿಯಾಗಬೇಕು. ಮಧ್ಯವರ್ತಿಗಳ ಹಾವಳಿ ಕಡಿಮೆ ಮಾಡುವ ಮೂಲಕ ರೈತರಿಗೆ ನೇರವಾಗಿ ಲಾಭ ತಲುಪುವ ವ್ಯವಸ್ಥೆ ರೂಪಿಸಬೇಕು.**

**ಹಾಗೆಯೇ, ಕೃಷಿಗೆ ಸಂಬಂಧಿಸಿದ ಮೂಲಸೌಕರ್ಯ—ನೀರಾವರಿ, ವಿದ್ಯುತ್, ಸಂಗ್ರಹಣಾ ಸೌಲಭ್ಯ, ತಂತ್ರಜ್ಞಾನ—ಇವುಗಳನ್ನು ಸುಧಾರಿಸುವುದು ಅಗತ್ಯ.**

**ಯುವಕರು ಕೃಷಿಯತ್ತ ಮುಖ ಮಾಡುವಂತೆ ಪ್ರೋತ್ಸಾಹ ನೀಡಿದರೆ ಮಾತ್ರ ಕೃಷಿ ಕ್ಷೇತ್ರದಲ್ಲಿ ಹೊಸ ಚೈತನ್ಯ ಮೂಡುತ್ತದೆ. ಸರಕಾರವು ಕೇವಲ ಘೋಷಣೆಗಳಿಗೆ ಸೀಮಿತವಾಗದೆ, ನೆಲಮಟ್ಟದಲ್ಲಿ ಕಾರ್ಯನಿರ್ವಹಿಸಬೇಕು. ರೈತರ ಸಮಸ್ಯೆಗಳನ್ನು ಮನಗಂಡು ತ್ವರಿತ ಕ್ರಮ ಕೈಗೊಂಡಾಗ ಮಾತ್ರ ರೈತರಿಗೆ ನಿಜವಾದ ನೆರವು ದೊರೆಯುತ್ತದೆ.**

**ರೈತರ ಕಷ್ಟವನ್ನು ಅರ್ಥಮಾಡಿಕೊಂಡು ಅವರಿಗೆ ಬೆಂಬಲ ನೀಡುವುದು ನಮ್ಮ ಎಲ್ಲರ ಕರ್ತವ್ಯ. ರೈತನು ಬಲವಾದರೆ ದೇಶ ಬಲವಾಗುತ್ತದೆ—ಇದು ಕೇವಲ ನುಡಿ ಅಲ್ಲ, ರಾಷ್ಟ್ರದ ಭವಿಷ್ಯದ ದಿಕ್ಕು.**

### ಬೀದರ ಜಿಲ್ಲಾ ಸಕಲ ಮರಾಠಾ ಸಮಾಜ ವತಿಯಿಂದ ಡಾ.ಅಂಬೇಡ್ಕರ್ ಜಯಂತಿ ಆಚರಣೆ

# ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ದೇಶದ ಆಸ್ತಿ: ಸಂತೋಷ ಲಾಡ್

• ಮಲ್ಲಮ್ಮ ನುಡಿ ವಾರ್ತೆ ಬೀದರ



ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎಂಬ ನೀತಿಯನ್ನು ನೀಡಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೇವಲ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಕ್ಕೆ ಮಾತ್ರ ಸೀಮಿತವಲ್ಲ. ಅವರು ಇಡೀ ದೇಶದ ಆಸ್ತಿಯಾಗಿದ್ದಾರೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದರು.

ನಗರದ ಅಂಬೇಡ್ಕರ್ ವೃತ್ತದ ಸಮೀಪ ಬೀದರ ಜಿಲ್ಲಾ ಸಕಲ ಮರಾಠಾ ಸಮಾಜದ ವತಿಯಿಂದ ಆಯೋಜಿಸಿದ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಉದ್ಘಾಟಿಸಿ ಮಾತನಾಡಿದರು.

ಅಂಬೇಡ್ಕರರು 56 ವಿಷಯಗಳನ್ನು 9 ಭಾಷೆಗಳಲ್ಲಿ ಅಧ್ಯಯನ ಮಾಡಿ ಸುಮಾರು 34 ಪದವಿಗಳನ್ನು ಪಡೆದುಕೊಂಡ ಮಹಾನ್ ತತ್ವಜ್ಞಾನಿಯಾಗಿದ್ದರು. ಹರಿದು ಹಂಚಿಹೋಗಿದ್ದ ಭಾರತದ ಕಾನೂನು ಸುವ್ಯವಸ್ಥೆಯನ್ನು ಸಂವಿಧಾನದ ಮೂಲಕ ಒಂದು ಚೌಕಟ್ಟನ್ನು ಹಾಕಿಕೊಟ್ಟ ಅಖಂಡ ಭಾರತದ ಮಹಾನಾಯಕ ಅಂಬೇಡ್ಕರ್ ಅವರಾಗಿದ್ದಾರೆ ಎಂದರು. ಸಯ್ಯಾಜಿರಾವ ಗಾಯಕವಾಡ ಮತ್ತು ಶಾಹು ಮಹಾರಾಜ್ ಇವರಿಬ್ಬರು ಅಂಬೇಡ್ಕರ್ ಅವರನ್ನು ಅಧ್ಯಯನ ಮಾಡಲು ವಿದೇಶಕ್ಕೆ ಕಳುಹಿಸಿದ್ದರು. ಹೀಗಾಗಿ ಈ ಮೂವರ ಮಧ್ಯೆ ಅವಿನಾಭಾವ ಸಂಬಂಧವಿತ್ತು. ಈ ಕಾರಣಕ್ಕಾಗಿಯೇ 60 ದೇಶದ ಸಂವಿಧಾನ ಅಧ್ಯಯನ ಮಾಡಿದ ಅಂಬೇಡ್ಕರರು ಬೃಹತ್ ಸಂವಿಧಾನ ರಚನೆ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಲಾಡ್ ತಿಳಿಸಿದರು.

ಲಂಡನ್‌ನಲ್ಲಿ ಕಾರ್ಲ್‌ಮಾರ್ಕ್ಸ್ ಪುತ್ಥಳಿ ಪಕ್ಕದಲ್ಲೇ ಡಾ. ಅಂಬೇಡ್ಕರರ ಮೂರ್ತಿ ಇದೆ. ಅಂತಹ ಮಹಾನ್ ವ್ಯಕ್ತಿತ್ವ ಅಂಬೇಡ್ಕರ್ ಅವರಲ್ಲಿತ್ತು. ಉಚಿತ ಶಿಕ್ಷಣ ಇಡೀ ದೇಶದ ಜನತೆಗೆ ನೀಡಬೇಕೆಂಬ ಪರಿಕಲ್ಪನೆ ಕೊಟ್ಟವರೇ ಅಂಬೇಡ್ಕರರು. ಸ್ಥಳೀಯವಾಗಿ ನ್ಯಾಯ ಸಿಗದೇ ಇದ್ದಾಗ ಕಲಂ 32ರ ಪ್ರಕಾರ ಸುಪ್ರಿಂ ಕೋರ್ಟ್ಗೆ ಹೋಗಿ ನ್ಯಾಯ ಪಡೆದುಕೊಳ್ಳುವ ಹಕ್ಕು ಡಾ.ಬಾಬಾ ಸಾಹೇಬರು ಈ ದೇಶದ ನಾಗರಿಕರಿಗೆ ನೀಡಿದ್ದಾರೆ ಎಂದು ಸಂತೋಷ ಲಾಡ್ ಪ್ರತಿಪಾದಿಸಿದರು.

ಹಿಂದೆ ಸಮಾಜದಲ್ಲಿ ಅಸ್ಪೃಶ್ಯತೆ ಆಚರಣೆ ಜಾರಿಯಲ್ಲಿತ್ತು. ಚೌಡಾರ್ ಕೆರೆಯಲ್ಲಿ ನಾಯಿ ನರಿ ಹಂದಿ ಕುರಿಗಳು ನೀರು ಕುಡಿಯಬಹುದಿತ್ತು. ಆದರೆ ಮನುಷ್ಯರಾದ ದಲಿತ ಸಮಾಜದವರು ನೀರು ಕುಡಿಯುವಂತಿರಲಿಲ್ಲ. ಇಂತಹ ಸಂದರ್ಭದಲ್ಲಿ ಡಾ. ಬಾಬಾ ಸಾಹೇಬರು ಹೋರಾಟ ಮಾಡಿ ಚೌಡಾರ್ ಕೆರೆ ನೀರು ಕುಡಿಯಲು ಅವಕಾಶ ಮಾಡಿಕೊಟ್ಟಿದ್ದಾರೆ ಎಂದರು. ಸತಿಸಹಗಮನ ಪದ್ಧತಿ ಆಚರಣೆಯಲ್ಲಿದ್ದ ಭಾರತದ ಮಹಿಳೆಗೆ ಪಿತ್ರಾರ್ಜಿತ, ಗಂಡನ ಆಸ್ತಿಯಲ್ಲಿ ಹಕ್ಕಿದೆ ಎಂದು ಪ್ರತಿಪಾದಿಸಿದವರೇ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು. ಹಿಂದೂ ಕೋಡ್ ಬಿಲ್ ಜಾರಿಗೆ ತಂದು ಎಲ್ಲರಿಗೂ ಅನುಕೂಲ ಮಾಡಿಕೊಟ್ಟಿದ್ದಾರೆ. ಮಹಿಳೆಯರು ಯಾವ ದೇವರಿಗೆ ದೀಪ ಹಚ್ಚುತ್ತಾರೋ ಇಲ್ಲವೋ ಗೊತ್ತಿಲ್ಲ. ಆದರೆ ಪ್ರತಿದಿನ ಅಂಬೇಡ್ಕರ್ ಅವರ ಮುಂದೆ ಒಂದು ಜ್ಯೋತಿ ಹಚ್ಚಲೇಬೇಕು ಎಂದು ಸಂತೋಷ ಲಾಡ್ ಹೇಳಿದರು. ಬಾಬಾ ಸಾಹೇಬರ ಅನುಯಾಯಿಗಳು ಅವರ ವಿಚಾರಗಳನ್ನು ಪ್ರತಿ ಮನೆಮನೆಗಳಿಗೆ ತಲುಪಿಸುವ ಕಾರ್ಯ ಮಾಡಬೇಕೆಂದು ಜನತೆಗೆ ಲಾಡ್ ಸಲಹೆ ನೀಡಿದರು.

ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹಿಂಖಾನ್ ಮಾತನಾಡಿ ತಮ್ಮ ತಮ್ಮ ಸಮಾಜದ ನಾಯಕರ ಜಯಂತಿ ಆಚರಣೆ ಮಾಡುವುದು ಸಹಜ. ಆದರೆ ಡಾ. ಅಂಬೇಡ್ಕರರ ಜಯಂತಿಯನ್ನು ಇಂದು ಮರಾಠಾ ಹಾಗೂ ದಲಿತ ಸಮುದಾಯದವರು ಕೂಡಿ ಆಚರಣೆ ಮಾಡುತ್ತಿರುವುದು ಶ್ಲಾಘನೀಯ. ಇದೇ ರೀತಿ ಎಲ್ಲರೂ ಆಚರಣೆ ಮಾಡಿದರೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಮಾನತೆ ಮೂಡುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ದಾದಾ ಮಹಾರಾಜ್ ನಗರಕರ್ ಮಾತನಾಡಿ ಮರಾಠಾ ಸಮಾಜ ಹಾಗೂ ದಲಿತ ಸಮುದಾಯ ಒಂದಾಗಿರಬೇಕು. ಭಿನ್ನಾಭಿಪ್ರಾಯ ಇರಬಾರದು. ಐಕ್ಯತೆಯಿಂದ ಸಾಗಿದರೆ ಸಹೋದರತ್ವ ಮೂಡುತ್ತದೆ. ಡಾ.ಅಂಬೇಡ್ಕರ್ ಜಯಂತಿ ಆಚರಣೆ ಮಾಡಿದಂತೆ ಎಲ್ಲಾ ಸಮಾಜದ ಮಹಾತ್ಮರ ಜಯಂತಿ ಮುಂದಿನ ದಿನಗಳಲ್ಲಿ ಆಚರಣೆ ಮಾಡಲಾಗುವುದು ಎಂದರು.

ಮೆಹಕರ್‌ನ ಶ್ರೀ ರಾಜಶೇಖರ ಶಿವಾಚಾರ್ಯರು ಮಾತನಾಡಿದರು. ಇದೇ ವೇಳೆ ಪೂಜ್ಯ ಭಂತೆ ವರಜ್ಯೋತಿ, ಪೂಜ್ಯಶ್ರೀ ಬೆಲ್ದಾಳ ಸಿದ್ಧರಾಮ ಶರಣರು, ಫಾದರ್ ಕ್ಲೇರಿ ಡಿಸೋಜಾ, ಶ್ರೀ ರಾಜಗುರು ಮಹಾರಾಜ್ ಸಾನಿಧ್ಯವಹಿಸಿದ್ದರು. ವೇದಿಕೆ ಮೇಲೆ ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದ ಅರಳಿ, ಮುಖಂಡ ತರುಣ ನಾಗಮಾರಪಳ್ಳಿ, ಕರ್ನಾಟಕ ಲಿಡ್ಕರ್ ಅಧ್ಯಕ್ಷ ನಾಗರಾಜ್ ಮುಂಡರಗಿ, ಸಕಲ ಮರಾಠಾ ಸಮಾಜ ಸಂಯೋಜಕ ಪ್ರದೀಪ ಬಿರಾದಾರ, ಡಾ.ಭೀಮಸೇನರಾವ ಶಿಂಧೆ, ಬುಡಾ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ದಿಗಂಬರರಾವ ಮಾನಕಾರಿ, ಜನಾರ್ಧನ ಬಿರಾದಾರ, ವೆಂಕಟರಾವ ಮೆಂದೆ, ಅನೀಲ ಕಾಳೆ, ನಾರಾಯಣ ಗಣೇಶ, ಕೊಂಡಿಬಾ ಸಾಹುಕಾರ್, ಶಿವಾಜಿ ಕಾಳೆ, ಸತೀಶ ಮೂಳೆ, ತಾತ್ಯಾರಾವ ಪಾಟೀಲ, ರಘುನಾಥರಾವ ಜಾಧವ, ಮಾರುತಿ ಬೌದ್ಧೆ, ಶಿವಕುಮಾರ ನೀಲಿಕಟ್ಟಿ, ಅರುಣ ಪಟೇಲ್, ವಿಠಲದಾಸ ಪ್ಯಾಗೆ, ರಾಜಶೇಖರ ಸೇಡಂಕರ್, ಯಶಪಾಲ್ ಬೋರೆ, ವಿಜಯಕುಮಾರ ಸೋನಾರೆ, ಲುಂಬಿಣಿ ಗೌತಮ್, ಮೀನಾಕ್ಷಿ ಕಾಳೆ, ಅನೀತಾ ಭೋಸ್ಲೆ, ಕವಿತಾರೆಡ್ಡಿ, ಬಾಬು ಪಾಸ್ವಾನ್, ಮಹೇಶ ಗೋರನಾಳಕರ್, ರಮೇಶ ಡಾಕುಳಗಿ, ವಿಜಯಕುಮಾರ ಫರ್ನಾಂಡಿಸ್ ಹಿಪ್ಪಳಗಾಂವ, ಚಂದ್ರಕಾಂತ ಹಿಪ್ಪಳಗಾಂವ, ಡಾ. ಕಾಶಿನಾಥ ಚಲವಾ, ಅರುಣ ಪಟೇಲ್, ಕಲ್ಯಾಣರಾವ ಭೋಸ್ಲೆ, ಅಂಬರೀಶ ಕುದರೆ ಸೇರಿದಂತೆ ಹಲವರಿದ್ದರು.

ಸಂವಿಧಾನದ ಪೀಠಿಕೆ ಓದಲಾಯಿತು. ಶಿವಾಜಿರಾವ ಪಾಟೀಲ ಮುಂಗನಾಳ ಸ್ವಾಗತಿಸಿದರು. ವಿನೋದ ನಿರೂಪಿಸಿದರು. ವಿದ್ಯಾಸಾಗರ ವಂದಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಅನುಯಾಯಿಗಳು ಸುಮಾರು 5 ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಬೆಳೆ ವಿಮೆ ಪ್ರಸ್ತಾವನೆಗೆ ಆಕ್ಷೇಪಣೆಗೆ ಅವಕಾಶ

• ಮಲ್ಲಮ್ಮ ನುಡಿ ವಾರ್ತೆ, ಬೀದರ

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ 2024–25 ನೇ ಸಾಲಿನಲ್ಲಿ ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಬೆಳೆ ವಿಮೆ ಪ್ರಸ್ತಾವನೆಗಳನ್ನು ತಾಂತ್ರಿಕ ಹಾಗೂ ಆಡಳಿತಾತ್ಮಕ ಹಂತಗಳಲ್ಲಿ ಪರಿಶೀಲಿಸಿ, ಅನುಮೋದನೆ/ನಿರಾಕರಣೆ ಕ್ರಮ ಕೈಗೊಳ್ಳಲಾಗಿದೆ.

ಪರಿಶೀಲನೆ ಬಳಿಕ ವಿಮಾ ಸಂಸ್ಥೆಯಿಂದ ನಿರಾಕರಿಸಲ್ಪಟ್ಟ ಅರ್ಜಿಗಳ ವಿವರ: ಮುಂಗಾರು ಹಂಗಾಮಿನಲ್ಲಿ ಬಸವಕಲ್ಯಾಣ ತಾಲ್ಲೂಕಿನ 1369 ಹಾಗೂ ಹುಲಸೂರು ತಾಲ್ಲೂಕಿನ 712 ಸೇರಿ ಒಟ್ಟು 2081 ಅರ್ಜಿಗಳು ನಿರಾಕರಿಸಲ್ಪಟ್ಟಿವೆ. ಹಿಂಗಾರು ಹಂಗಾಮಿನಲ್ಲಿ ಬಸವಕಲ್ಯಾಣ ತಾಲ್ಲೂಕಿನ 0 ಹಾಗೂ ಹುಲಸೂರು ತಾಲ್ಲೂಕಿನ 05 ಒಟ್ಟು 05 ಅರ್ಜಿಗಳು ನಿರಾಕರಿಸಲ್ಪಟ್ಟಿವೆ.

ನಿರಾಕರಿಸಲ್ಪಟ್ಟ ಅರ್ಜಿಗಳ ವಿವರಗಳನ್ನು ಈಗಾಗಲೇ ಸಂಬಂಧಿತ ರೈತ ಸಂಪರ್ಕ ಕೇಂದ್ರಗಳ ಸೂಚನಾ ಫಲಕಗಳಲ್ಲಿ ಪ್ರಕಟಿಸಲಾಗಿದೆ. ಅರ್ಜಿಗಳು ನಿರಾಕರಣೆಯಾಗಿರುವ ರೈತರು ತಮ್ಮ ಅರ್ಜಿಗಳ ಬಗ್ಗೆ ಯಾವುದೇ ಆಕ್ಷೇಪಣೆ ಅಥವಾ ಮನವಿ ಇದ್ದಲ್ಲಿ ದಿನಾಂಕ: 05–05–2026 ರೊಳಗಾಗಿ ಸಂಬಂಧಿತ ರೈತ ಸಂಪರ್ಕ ಕೇಂದ್ರಕ್ಕೆ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಮನವಿ ಸಲ್ಲಿಸಬಹುದು. ಸಲ್ಲಿಇಸಲಾದ ಆಕ್ಷೇಪಣೆಗಳನ್ನು ಮರುಪರಿಶೀಲನೆಗೆ ಒಳಪಡಿಸಲಾಗುವುದು. ರೈತರು ನಿಗದಿತ ಅವಧಿಯೊಳಗೆ ಅಗತ್ಯ ದಾಖಲೆಗಳೊಂದಿಗೆ ಮನವಿ ಸಲ್ಲಿಸಿ ಸದುಪಯೋಗಪಡಿಸಿಕೊಳ್ಳುವಂತೆ ಬಸವಕಲ್ಯಾಣ/ಹುಲಸೂರು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಮ್ಮೂರು ಶ್ರೀಬನಶಂಕರಿ ದೇವಿಯ 10ನೇ ವರ್ಷದ ಜಾತ್ರಾ ಮಹೋತ್ಸವ

• ಮಲ್ಲಮ್ಮ ನುಡಿ ವಾರ್ತೆ, ಕುರುಗೋಡು



ಸಮೀಪದ ದಮ್ಮೂರು ಗ್ರಾಮದಲ್ಲಿ ಶ್ರೀಬನಶಂಕರಿದೇವಿಯ 10ನೇ ಜಾತ್ರಾಮಹೋತ್ಸವ ಹಾಗು ಶ್ರೀದಮ್ಮೂರುಲಿಂಗೇಶ್ವರ ಮತ್ತು ಶ್ರೀಬನಶಂಕರಿದೇವಿ ಶಕ್ತಿಪೀಠ ಮಹಾಸಂಸ್ಥಾನನದ ತೃತೀಯ ವರ್ಷದ ಪೀಠಾರೋಹಣ ಸಮಾರಂಭವು ಇಂದು ಶುಕ್ರವಾರ ಸಂಜೆ ಜರುಗಿಸಲಾಗುವುದು ಎಂದು ಶ್ರೀದಮ್ಮೂರುಲಿಂಗೇಶ್ವರ ಮತ್ತು ಶ್ರೀಬನಶಂಕರಿಶಕ್ತಿಪೀಠ ಮಹಾಸಂಸ್ಥಾನದ ಪೀಠಾಧಿಪತಿ ಪರಮಪೂಜ್ಯರಾದ ಶ್ರೀಗೋವರ್ದನಾನಂದಪುರಿ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಅವರು ಈ ಕುರಿತು ಮಾತನಾಡಿದ ಪರಮಪೂಜ್ಯರು ಶ್ರೀಬನಶಂಕರಿದೇವಿ ಜಾತ್ರಾಮಹೋತ್ಸವದಂದು ಬೆಳಿಗ್ಗೆ ಶ್ರೀಗಂಗೆಪೂಜೆ, ದುರ್ಗಾಹೋಮ, ಲಕ್ಷ್ಮಿ, ಸರಸ್ವತಿಹೋಮ, ಶ್ರೀಬನಶಂಕರಿದೇವಿ ಮಹಾಭಿಷೇಕ ಅಲಂಕಾರ ಹಾಗು ಶ್ರೀಅಮ್ಮನವರ ಮಡಿರಥೋತ್ಸವ ಜರುಗಿಸಲಾಗುವುದು ಎಂದು ನುಡಿದರು. ನಂತರ ಕಾರ್ಯಕ್ರಮಕ್ಕೆ ಬಂದಂತಹ ಪೂಜ್ಯರಿಂದ ಆಶೀರ್ವಚನ ಜರುಗಿಸಲಾಗುವುದು ಎಂದುನುಡಿದರು. ಜಾತೆ–ಗೆ ಬಂದಂತಹ ಸಕಲ ಭಕ್ತಾದಿಗಳಿಗೆ ದಾಸೋಹ ವ್ಯವಸ್ಥೆಯನ್ನು ಕೈಗೊಳ್ಳಲಾಗಿದ್ದು, ಶುಕ್ರವಾರ ಸಂಜೆ ಶ್ರೀಬನಶಂಕರಿದೇವಿ ರಥೋತ್ಸವ ಸಮಾರಂಭವು ಜರುಗುವುದು. ಆದ್ದರಿಂದ ಕುರುಗೋಡು ತಾಲೂಕಿನ ಎಲ್ಲಾ ಗ್ರಾಮಗಳ ಸದ್ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀಬನಶಂಕರಿದೇವಿಯ ಕೃಪೆಗೆ ಪಾತ್ರರಾದರು.

# ಬೌದ್ಧ ಮಹಾಸಭೆಗೆ ನೂತನ ಅಧ್ಯಕ್ಷರಾಗಿ ಮೋರೆ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಭಾರತೀಯ ಬೌದ್ಧ ಮಹಾಸಭೆಯ (ದಿ ಬುದ್ಧಿಸ್ಟ್ ಸೊಸೈಟಿ ಆಫ್ ಇಂಡಿಯಾ) ಭಾಲ್ಕಿ ತಾಲ್ಲೂಕು ಶಾಖೆಗೆ ನೂತನ ಅಧ್ಯಕ್ಷರಾಗಿ ಆಯು. ವಿಶ್ವನಾಥ ಮೋರೆ ಅವರನ್ನು ನೇಮಕ ಮಾಡಲಾಗಿದೆ.

ಮುಂಬೈನ ಕೇಂದ್ರ ಕಚೇರಿಯಿಂದ 31 ಮಾರ್ಚ್ 2026ರಂದು ಹೊರಡಿಸಿದ ಆದೇಶದ ಪ್ರಕಾರ, ಇಂದಿನವರೆಗೆ ಅಧ್ಯಕ್ಷರಾಗಿದ್ದ ಆಯು. ವಿಜಯಕುಮಾರ ಗಾಯಕವಾಡ, ಅವರಿಂದ ಹುದ್ದೆಯನ್ನು 01 ಏಪ್ರಿಲ್ 2026ರಿಂದ ವಿಶ್ವನಾಥ ಮೋರೆ ಅವರಿಗೆ ಹಸ್ತಾಂತರಿಸಲು ಸೂಚಿಸಲಾಗಿದೆ. ಸಂಘಟನೆಯ ವಿವಿಧ ಹಿಂದಿನ ನೇಮಕಾತಿ ಆದೇಶಗಳು ಮತ್ತು ಆಡಳಿತಾತ್ಮಕ ಪತ್ರಗಳನ್ನು ಆಧಾರವಾಗಿ ತೆಗೆದುಕೊಂಡು ಈ ನೇಮಕಾತಿ ಜಾರಿಗೊಂಡಿದೆ ಎಂದು ತಿಳಿಸಲಾಗಿದೆ.

ಟ್ರಸ್ಟಿ ಹಾಗೂ ರಾಷ್ಟ್ರೀಯ ಉಪಾಧ್ಯಕ್ಷರಾದ ಅಡ್ವೊಕೇಟ್ ಎಸ್.ಕೆ.ಭಂಡಾರೆ ಮತ್ತು ರಾಷ್ಟ್ರೀಯ ಕಾರ್ಯಾಧ್ಯಕ್ಷರಾದ ಡಾ.ಭೀಮರಾವ್ ವೈ.ಅಂಬೇಡ್ಕರ್ ಅವರ ಸಹಿ ಮಾಡಿ ಆದೇಶವನ್ನು ಹೊರಡಿಸಿದ್ದಾರೆ

ನೂತನ ಅಧ್ಯಕ್ಷರಾದ ವಿಶ್ವನಾಥ ಮೋರೆ ಅವರ ನೇತೃತ್ವದಲ್ಲಿ ಭಾಲ್ಕಿ ಶಾಖೆಯ ಸಂಘಟನೆ ಇನ್ನಷ್ಟು ಬಲಪಡಲಿದೆ ಎಂಬ ನಿರೀಕ್ಷೆಯನ್ನು ಸಂಘಟನೆಯ ಪದಾಧಿಕಾರಿಗಳು ವ್ಯಕ್ತಪಡಿಸಿದ್ದಾರೆ.

ಈ ಆದೇಶದ ಪ್ರತಿಯನ್ನು ಟ್ರಸ್ಟಿಗಳು, ರಾಷ್ಟ್ರೀಯ ಪದಾಧಿಕಾರಿಗಳು, ಕರ್ನಾಟಕ ಉತ್ತರ ರಾಜ್ಯ ಹಾಗೂ ಬೀದರ್ ಜಿಲ್ಲಾ ಘಟಕದ ಅಧ್ಯಕ್ಷರಿಗೆ ಕಳುಹಿಸಲಾಗಿದೆ.

ಮಹಾಸಭಾದ ಕಾರ್ಯದರ್ಶಿ ಪ್ರಕಾಶ ಭಾವಿಕಟ್ಟಿ, ಕೋಶಾಧ್ಯಕ್ಷರಾಗಿ ಶರಣಪ್ಪಾ ಮೋರೆ, ಎಲ್ ಜಿ, ಗುಪ್ತಾ, ಶಿವರಾಜ ಕಾಂಬಳೆ, ರಾಜಕುಮಾರ ಮೋರೆ, ಕೀರ್ತಿರತನ ಸೋನಾಳೆ, ಇತರರು ಸೇರಿ ನೂತನ ಅಧ್ಯಕ್ಷರಾಗಿ ವಿಶ್ವನಾಥ ಮೋರೆ ಆಯ್ಕೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.

# ರಿಯಾಯಿತಿ ದರದಲ್ಲಿ ಲಿಡಕರ್ ವಸ್ತು ಮಾರಾಟ

• ಮಲ್ಲಮ್ಮ ನುಡಿ ವಾರ್ತೆ, ಬೀದರ

ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ (ಲಿಡಕರ್) ವತಿಯಿಂದ ಕಾರ್ಮಿಕ ದಿನಾಚರಣೆ ಹಾಗೂ ಬಕ್ರೀದ್ ಹಬ್ಬದ ಪ್ರಯುಕ್ತ ದಿನಾಂಕ: 29–04–2026 ರಿಂದ 31–05–2026 ರವರೆಗೆ ಚರ್ಮದ ವಸ್ತುಗಳನ್ನು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ. ಈ ನೂತನ ಲಿಡಕರ್ ಮಾರಾಟ ಮಳಿಗೆಗೆ ಲಿಡಕರ್ ನಿಗಮದ ಅಧ್ಯಕ್ಷ ಮುಂಡರಿಗಿ ನಾಗರಾಜ ಭೇಟಿ ನೀಡಿ ನೀಡಿದ್ದಾರೆ.

ಹೊಸ ಮಾದರಿಯ ಪುರುಷ ಮತ್ತು ಮಹಿಳೆಯರ ಪಾದರಕ್ಷೆ, ಶೂ ಹಾಗೂ ಬೆಲ್ಟ್, ಪರ್ಸ ಹಾಗೂ ಬ್ಯಾಗುಗಳ, ಬ್ರೀಫ್‌ಕೇಸ್, ಶಾಲಾ ಬೂಟ್ ಬ್ಯಾಗಗಳು ಶೇ.15% ರಿಯಾಯಿತಿ ದರದಲ್ಲಿ ಲಭ್ಯವಿರುತ್ತವೆ. ಗ್ರಾಹಕರು ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ, ಲಿಡಕರ್ ಮಾರಾಟ ಮಳಿಗೆ, ತಹಸೀಲ್ ಕಾರ್ಯಾಲಯ ಎದುರುಗಡೆ, ಕೋರ್ಟ ರಸ್ತೆ, ಸಿ.ಎಂ.ಸಿ. ಕಾಂಪ್ಲೇಕ್ಸ್, ಬೀದರ ಇಲ್ಲಿಗೆ ಭೇಟಿ ನೀಡಿ ಖರೀದಿಸಬಹುದಾಗಿದೆ ಎಂದು ಬೀದರ ಲಿಡಕರ್ ಮಾರಾಟ ಮಳಿಗೆಯ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪದವಿ: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಶಾಶ್ವತವಾಗಿ ಸಂಯೋಜನೆಗೊಂಡಿರುವ ಮೈಸೂರು ಸಿದ್ದಾರ್ಥನಗರ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಸಂಸ್ಥೆಯಲ್ಲಿ ದೃಶ್ಯ ಕಲೆಯಲ್ಲಿ "ರಾಷ್ಟ್ರೀಯ ಶಿಕ್ಷಣ ಪದ್ಧತಿ" ಯನ್ವಯ 2026–27ನೇ ಶೈಕ್ಷಣಿಕ ಸಾಲಿಗೆ ಪ್ರಥಮ ವರ್ಷದ ಬ್ಯಾಚುಲರ್ ಆಫ್ ವಿಜುಯಲ್ ಆರ್ಟ್ಸ್ (ಬಿ.ವಿ.ಎ.) (ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ಸ್ನಾತಕೋತ್ತರ ಪದವಿ ಪ್ರವೇಶಾತಿಗಾಗಿ ದ್ವಿತೀಯ ಪಿ.ಯು.ಸಿ. ಯಲ್ಲಿ ಉತ್ತೀರ್ಣರಾದ ಹಾಗೂ ದ್ವಿತೀಯ ಪಿ.ಯು.ಸಿ.ಗೆ ಸಮಾನಾಂತರ ಕೋರ್ಸು ಮಾಡಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಮೈಸೂರು ಸಿದ್ದಾರ್ಥ ನಗರದ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜಿನ (ಕಾವಾ) ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಪದವಿಯಲ್ಲಿ 3ನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚುಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಅಭ್ಯರ್ಥಿಗಳಿಗೆ "https;//uucms.karnataka.gov.in,https://www.cavamysore.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2026ರ ಮೇ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆಯ ದಿನಾಂಕ ಮತ್ತು ಸಂದರ್ಶನದ ದಿನಾಂಕದ ಮಾಹಿತಿಯನ್ನು ಪ್ರತ್ಯೇಕವಾಗಿ ತಿಳಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಹಾಯವಾಣಿಗೆ ಕಚೇರಿ ಸಮಯದಲ್ಲಿ 0821–2438931 ಗೆ ಸಂಪರ್ಕಿಸಲು ಕೋರಲಾಗಿದೆ.

# ಕಾರ್ಮಿಕ ಸೇತು ಮೊಬೈಲ್ ಅಪ್ಲಿಕೇಷನ್ ಪ್ಲೇ ಸ್ಟೋರ್‌ದಲ್ಲಿ ಲಭ್ಯ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಕಟ್ಟಡ ಕಾರ್ಮಿಕರಿಗೆ ಅನುಕೂಲವಾಗುವಂತೆ ಅಭಿವೃದ್ಧಿಪಡಿಸಿರುವ "ಕಾರ್ಮಿಕ ಸೇತು" ಮೊಬೈಲ್ ಅಪ್ಲಿಕೇಷನ್‌ನ್ನು ಪ್ಲೇ ಸ್ಟೋರ್‌ದಲ್ಲಿ ದಿನಾಂಕ: 23–03–2026 ರಂದು ಲೈವ್ (ಐಖಗಿಇ) ಮಾಡಲಾಗಿದೆ.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಫಲಾನುಭವಿಗಳಾಗಿ ನೋಂದಾಯಿಸಿಕೊಳ್ಳಲು, ಅವರ ಸದಸ್ಯತ್ವವನ್ನು ನವೀಕರಿಸಿ, ವಿವಿಧ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ಕಾರ್ಮಿಕರಿಗೆ ಕಾರ್ಮಿಕ ಸೇತು ಅಪ್ಲಿಕೇಷನ್ ಅನ್ನು ಅಭಿವೃದ್ಧಿಪಡಿಸಲಾಗಿದೆ. ಈ ಮೊಬೈಲ್ ಅಪ್ಲಿಕೇಷನ್‌ಅನ್ನು https://play.google.com/store/apps/details?id=com.karmikasethu.ksk ರ ಮೂಲಕ ಡೌನ್‌ಲೋಡ್ ಮಾಡಿಕೊಂಡು ಉಪಯೋಗಿಸಬಹುದಾಗಿದೆ ಎಂದು ಕಲಬುರಗಿ ಉಪವಿಭಾಗದ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಣೆ: ಪತ್ತೆಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ವಿಜಯನಗರ ಜಿಲ್ಲೆಯ ಕೊಟ್ಟೂರಿನ 72 ವರ್ಷದ ಸತ್ಯನಾರಾಯಣ ತಂದೆ ಬಸವಯ್ಯ ಇನ್ನಮುರಿ ಅವರು ದಿನಾಂಕ: 20–10–2022 ರಂದು ರಾತ್ರಿ 8 ಗಂಟೆಗೆ ದೇವಲಗಾಣಗಾಪುರದಿಂದ ಕಾಣೆಯಾಗಿರುತ್ತಾರೆ. ಈವರೆಗೆ ಅವರು ಪತ್ತೆಯಾಗಿರುವುದಿಲ್ಲ ಎಂದು ಅಫಜಲಪುರ ವೃತ್ತದ ಆರಕ್ಷಕ ವೃತ್ತ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅದೇ ರೀತಿ ಮಹಾರಾಷ್ಟ್ರದ ಲಾತೂರಿನ ಬೊರಟ್ಟಿ ಗ್ರಾಮದ 35 ವರ್ಷದ ಕಿರಣ ತಂದೆ ಪ್ರಹ್ಲಾದರಾವ್ ಲಾಕಡೆ ಅವರು ದಿನಾಂಕ: 26–08–2022 ರಂದು ಬೆಳಿಗ್ಗೆ 11 ಗಂಟೆಗೆ ದೇವಲಗಾಣಗಾಪುರದಿಂದ ಕಾಣೆಯಾಗಿರುತ್ತಾರೆ. ಅದೇ ರೀತಿ ಅಥಣಿ ತಾಲೂಕಿನ ಐಗಳಿಯ 38 ವರ್ಷದ ಸ್ವಪ್ನಿಲ್ ತಂದೆ ನಂದಕುಮಾರ ಡಂಬಳಕರ್ ಅವರು ದಿನಾಂಕ: 06–01–2025 ರಂದು ಮಧ್ಯಾಹ್ನ 2.30 ಗಂಟೆಗೆ ದೇವಲಗಾಣಗಾಪುರದಿಂದ ಕಾಣೆಯಾಗಿರುತ್ತಾರೆ. ಅದೇ ರೀತಿ ವಿಕಾರಾಬಾದ ಜಿಲ್ಲೆಯ ಮರಪಲ್ಲಿ ತಾಲೂಕಿನ ಬುರುಗಪಲ್ಲಿಯ 41 ವರ್ಷದ ವೆಂಕಟರಾಮರೆಡ್ಡಿ ತಂದೆ ಮಾಣಿಕರೆಡ್ಡಿ ಅಕ್ಕಮುಲ್ಲ ಅವರು ದಿನಾಂಕ: 18–06–2023 ರಂದು ಸಂಜೆ 4 ಗಂಟೆಗೆ ಕಾಣೆಯಾಗಿರುತ್ತಾರೆ. ಅವರು ಈವರೆಗೆ ಪತ್ತೆಯಾಗಿರುತ್ತಾರೆ.

ಈ ಮೇಲ್ಕಂಡ ಕಾಣೆಯದವರ ಬಗ್ಗೆ ಸುಳಿವು ಸಿಕ್ಕಲ್ಲಿ ಅಫಜಲಪುರ ವೃತ್ತದ ಸಿ.ಪಿ.ಐ. ಇವರ ಮೊಬೈಲ್ ಸಂಖ್ಯೆ–9480803538, ಅಫಜಲಪುರ ಪೊಲೀಸ್ ಠಾಣೆಯ ಪಿ.ಎಸ್.ಐ.–9480803567, ದೇವಲಗಾಣಗಾಪುರ ಪೊಲೀಸ್ ಠಾಣೆಯ ಪಿ.ಎಸ್.ಐ.–9480803568 ಹಾಗೂ ಕಲಬುರಗಿ ಕಂಟ್ರೋಲ್ ರೂಮ್ ನಂಬರ್ 08472–279180ಗೆ ಸಂಪರ್ಕಿಸಲು ಕೋರಲಾಗಿದೆ.

# ಅಪರಿಚಿತ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಶಹಾಬಾದ ರೈಲು ನಿಲ್ದಾಣದ ವೇದಿಕೆ ನಂ. 2ರಲ್ಲಿ ಸುಮಾರು 35 ರಿಂದ 40 ವರ್ಷದ ಅಪರಿಚಿತ ವ್ಯಕ್ತಿಯು ಮೃತಪಟ್ಟಿದ್ದು, ಈವರೆಗೆ ಈ ಮೃತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ ಎಂದು ವಾಡಿ (ಜಂ) ರೈಲ್ವೆ ಪೊಲೀಸ್ ಠಾಣೆಯ ಸ್ಟೇಶನ್ ಹೌಸ್ ಆಫೀಸರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೃತ ವ್ಯಕ್ತಿಯು 5 ಅಡಿ 5 ಇಂಚು ಎತ್ತರ ಇದ್ದು, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ದುಂಡನೆಯ ಮುಖ, ದಪ್ಪನೆಯ ಮೂಗು, ಮುಖದ ಮೇಲೆ ಕುರುಚಲು ಗಡ್ಡ ಮತ್ತು ಮೀಸೆ ಬಿಟ್ಟಿದ್ದು, ತಲೆಯ ಮೇಲೆ ಕಪ್ಪು ಕುದಲು ಇದ್ದು, ಬಿಳಿ ಬಣ್ಣದ ತುಂಬು ತೋಳಿನ ಶರ್ಟ್, ನೀಲಿ ಬಣ್ಣದ ರೆಡಿಮೆಟ್ ಶರ್ಟ್, ಕಂದು ಬಣ್ಣದ ಅಂಡರವೇರ್, ಕಪ್ಪು ಬಣ್ಣದ ಬೆಲ್ಟ್, ಕೆಂಪು ಬಣ್ಣದ ದಾರ ಮತ್ತು ತಾಮ್ರದ ಕಡ್ಗ ಇರುತ್ತದೆ. ನೀಲಿ ಬಣ್ಣದ ಸ್ಲಿಪರ್ ಧರಿಸಿರುತ್ತಾರೆ.

ಈ ಮೃತ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದಲ್ಲಿ ರೈಲ್ವೆ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 080–22871291, ವಾಡಿ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08476–202244 ಹಾಗೂ ರೈಲ್ವೆ ಪೊಲೀಸ್ ಠಾಣೆಯ ಉಪ ನಿರೀಕ್ಷಕರ ಮೊಬೈಲ್ ಸಂಖ್ಯೆ 9480802132ಗೆ ಸಂಪರ್ಕಿಸಲು ಕೋರಿದೆ.

# ಕುಡಿಯುವ ನೀರು ಪೂರೈಕೆಯಲ್ಲಿ ನಿರ್ಲಕ್ಷ್ಯವಾದರೆ ಕ್ರಮ: ಪ್ರಭು ಚವ್ಹಾಣ



• ಮಲ್ಲಮ್ಮ ನುಡಿ ವಾರ್ತೆ, ಔರಾದ

ಬೇಸಿಗೆಯ ರಣಬಿಸಿಲು ತೀವ್ರವಾಗಿ ಹೆಚ್ಚುತ್ತಿರುವ ಹಿನ್ನೆಲೆ ಕ್ಷೇತ್ರದ ಅನೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರ ರೂಪ ಪಡೆಯುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಎಚ್ಚರಿಸಿದರು.

ಔರಾದ(ಬಿ) ತಾಲ್ಲೂಕು ಪಂಚಾಯತ ಕಛೇರಿ ಸಭಾಂಗಣದಲ್ಲಿ ಏ.30 ರಂದು ನಡೆದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಹಸೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಿ ಕ್ಷೇತ್ರದ ಯಾವೊಂದು ಗ್ರಾಮದಲ್ಲಿಯೂ ನೀರಿನ ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನೀರಿನ ಸಮಸ್ಯೆ ಕಂಡುಬಂದ ಕೂಡಲೇ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಬೇಕು. ಕೆಟ್ಟಿರುವ ಬೋರ್‌ವೆಲ್‌ಗಳನ್ನು ತಕ್ಷಣ ದುರಸ್ತಿ ಮಾಡಬೇಕು, ಅಗತ್ಯವಿದ್ದಲ್ಲಿ ಹೊಸ ಬೋರ್‌ವೆಲ್‌ಗಳನ್ನು ಕೊರೆಸಬೇಕು. ಪೈಪ್‌ಲೈನ್ ದುರಸ್ತಿ ಸೇರಿದಂತೆ ಎಲ್ಲಾ ಕಾಮಗಾರಿಗಳನ್ನು ಗಡುವಿನೊಳಗೆ ಪೂರ್ಣಗೊಳಿಸಬೇಕು. ವಿಳಂಬ ಅಥವಾ ನಿರ್ಲಕ್ಷ್ಯ ಕಂಡುಬಂದರೆ ಸಂಬಂಧಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಸಾಕಷ್ಟು ಬಿಸಲಿನ ಕಾರಣ ಪಶು ಪಕ್ಷಿಗಳಿಗೆ ನೀರಿನ ತೊಂದರೆಯಾಗುತ್ತಿದೆ. ಹಾಗಾಗಿ ಸಣ್ಣ ನೀರಾವರಿ ಇಲಾಖೆಯ ಕೆರೆಗಳಿಂದ ನಾಲಾಗಳಿಗೆ ನೀರು ಹರಿಸಿ ಅನುಕೂಲ ಮಾಡಿಕೊಡಬೇಕು. ಇನ್ನೊಂದು ತಿಂಗಳು ನೀರಿನ ಸಮಸ್ಯೆ ಹೆಚ್ಚಾಗಿ ಕಾಣಿಸುವುದರಿಂದ ಎಲ್ಲ ಅಧಿಕಾರಿಗಳು ಚುರುಕಿನಿಂದ ಕೆಲಸ ಮಾಡಬೇಕು. ಜನ, ಜಾನುವಾರುಗಳಿಗೆ ನೀರಿನ ಕೊರತೆಯಾಗದಂತೆ ಎಚ್ಚರ ವಹಿಸಬೇಕು ಎಂದರು.

ಈ ವರ್ಷ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಸುಧಾರಣೆ ಕಾಣಿಸಿರುವುದಕ್ಕೆ ಸಂತೋಷವಾಗಿದೆ. ಆದರೆ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಕೊರತೆಯಿರುವುದನ್ನು ಕಂಡು ಬೇಸರವಾಗುತ್ತಿದೆ. ಎಲ್ಲ ಮುಖ್ಯಗುರುಗಳು ಮತ್ತು ಶಿಕ್ಷಕರು ಮನೆ–ಮನೆಗೆ ಭೇಟಿ ನೀಡಿ ಪೋಷಕರ ಮನವೊಲಿಸಬೇಕು. ಸರಿಯಾಗಿ ಪಾಠ ಮಾಡುತ್ತೇವೆಂದು ಭರವಸೆ ನೀಡಿ ದಾಖಲಾತಿ ಪ್ರಮಾಣವನ್ನು ಹೆಚ್ಚಿಸಬೇಕು. ಮುಂದಿನ ಪರೀಕ್ಷೆ ವೇಳೆಗೆ ಕನಿಷ್ಠ 5 ಸಾವಿರ ಮಕ್ಕಳು ಪರೀಕ್ಷೆ ಬರೆಯುವಂತಾಗಬೇಕು. ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಬೇಕಾದಷ್ಟು ಅನುದಾನ ನೀಡುತ್ತಿದ್ದೇನೆ. ಇನ್ನೂ ಅವಶ್ಯಕತೆಯಿದ್ದಲ್ಲಿ ಕೇಳಿ ಕೊಡುತ್ತೇನೆ. ಆದರೆ ಶಿಕ್ಷಣದ ವಿಷಯದಲ್ಲಿ ಕೊರತೆಯಾದರೆ ಸುಮ್ಮನೆ ಬಿಡುವುದಿಲ್ಲ ಎಂದು ಎಚ್ಚರಿಸಿದರು.

ಸರ್ಕಾರಿ ಶಾಲೆಗಳಿಗೆ ಕಳಪೆ ಆಹಾರ ಪೂರೈಕೆಯಾಗಿರುವುದು ಗ್ರಾಮ ಸಂಚಾರದ ಸಂದರ್ಭದಲ್ಲಿ ಪತ್ತೆಯಾಗಿದೆ. ಜಮಾಲಪೂರನಲ್ಲಿ ಕಳಪೆ ಮಟ್ಟದ ಆಹಾರ ಪದಾರ್ಥಗಳಿಂದ ಸಿದ್ದಪಡಿಸಿದ ಆಹಾರ ಸೇವಿಸಿ ಅನೇಕ ಮಕ್ಕಳು ಅನಾರೋಗ್ಯಕ್ಕೆ ಒಳಗಾಗಿದ್ದರು. ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು. ಸರ್ಕಾರಿ ಆಸ್ಪತ್ರೆಗಳಿಗೆ ಬೇಕಾದ ಎಲ್ಲ ಸೌಕರ್ಯಗಳನ್ನು ಒದಗಿಸುತ್ತಿದ್ದೇನೆ. ಎಕ್ಸರೇ, ಡಯಾಲಿಸಿಸ್ ಸೇರಿದಂತೆ ಎಲ್ಲ ಯಂತ್ರಗಳು ಸರಿಯಾಗಿ ಕೆಲಸ ಮಾಡುವಂತಾಗಬೇಕು. ಸಣ್ಣ–ಸಣ್ಣ ವಿಷಯಗಳಿಗೆ ಜಿಲ್ಲಾಸ್ಪತ್ರೆಗೆ ಶಿಫಾರಸ್ಸು ಮಾಡುವುದು ನಿಲ್ಲಬೇಕು. ಆಸ್ಪತ್ರೆಗೆ ಬರುವ ಎಲ್ಲ ರೋಗಿಗಳಿಗೆ ಸರಿಯಾಗಿ ಚಿಕಿತ್ಸೆ ಕಲ್ಪಿಸಬೇಕೆಂದು ತಾಲ್ಲೂಕು ಆರೋಗ್ಯಾಧಿಕಾರಿಗೆ ಸೂಚಿಸಿದರು. ಅಧಿಕಾರಿಗಳು ಮತ್ತು ಗುತ್ತಿಗೆದಾರರಿಂದ ಲೂಟಿ: ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು 250 ಕೋಟಿಗಿಂತ ಹೆಚ್ಚು ಅನುದಾನ ತಂದಿದ್ದೇನೆ. 276 ಕಾಮಗಾರಿಗಳ ಪೈಕಿ ಸುಮಾರು 50 ಕೆಲಸಗಳು ಸರಿಯಾಗಿ ಆಗಿವೆ. ಉಳಿದಂತೆ ಎಲ್ಲವೂ ಕಳಪೆಯಾಗಿವೆ. ಅಧಿಕಾರಿಗಳು ಮತ್ತು ಗುತ್ತಿಗೆದಾರರು ಸೇರಿಕೊಂಡು ಲೂಟಿ ಮಾಡಿದ್ದಾರೆ. ಹಣದ ಆಮಿಷವೊಡ್ಡಿ ಕಾಮಗಾರಿ ಕಳಪೆಯಾದರೂ ಹ್ಯಾಂಡೋವರ್ ಮಾಡಲಾಗಿದೆ. ಇದರ ಪರಿಣಾಮ ಜನತೆ ಸಮಸ್ಯೆ ಎದುರಿಸುತ್ತಿದ್ದಾರೆ.

# ನಾಲಂದಾ ಪ್ರೌಢ ಶಾಲೆಗೆ ಶೇ. 93.44 ಫಲಿತಾಂಶದ ಗರಿ




• ಮಲ್ಲಮ್ಮ ನುಡಿ ವಾರ್ತೆ, ಔರಾದ

ಪ್ರಸಕ್ತ ಶೈಕ್ಷಣಿಕ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪಟ್ಟಣದ ಹೃದಯಭಾಗದಲ್ಲಿರುವ ನಾಲಂದಾ ಪ್ರೌಢ ಶಾಲೆ ಶೇ. 93.44 ರಷ್ಟು ಫಲಿತಾಂಶ ಪಡೆದಿದೆ.

ಪರೀಕ್ಷೆ ಬರೆದ ಒಟ್ಟು 61 ವಿದ್ಯಾರ್ಥಿಗಳಲ್ಲಿ 57 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಓರ್ವ ವಿದ್ಯಾರ್ಥಿನಿ ರೋಹಿಣಿ ತಂದೆ ಸತೀಶ 561 ಅಂಕ ಗಳಿಸುವ ಮುಖೇನ ಶೇ. 89.76% ಪಡೆದು ಇಡೀ ಶಾಲೆಗೇ ಟಾಪರ್ ಆಗಿ ಮಿಂಚಿದ್ದಾಳೆ. 22 ವಿದ್ಯಾರ್ಥಿಗಳು ಪ್ರಥಮ ದರ್ಜೆ, 21 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ 13 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ತೇರ್ಗಡೆಯಾಗಿ ಶಾಲೆಗೆ ಕೀರ್ತಿ ತಂದುಕೊಟ್ಟಿದ್ದಾರೆ.

ಚಾಂದಿನಿ ತುಕಾರಾಮ ಜಾಧವ ಶೇ. 80.00, ಭಾಗ್ಯಶ್ರೀ ಬಾಲಾಜಿ ಶೇ. 79.20, ಯುವರಾಜ ಸುರೇಶ ಜಾಧವ ಶೇ. 78.72, ರೇಣುಕಾ ಮಾರುತಿ ಶೇ. 77.60, ರಾಗಿಣಿ ವಾಮನ ರಾಠೋಡ ಶೇ. 76.80, ಆಶಾತಾಯಿ ಹಣಮಂತ ಶೇ. 72.32, ರುಕ್ಮಿಣಿ ಲಕ್ಷ್ಮಣ ಶೇ. 71.52, ಅಂಬಿಕಾ ಲಾಲಬಾ ಶೇ. 70.72, ಸಂಜನಾ ಶಾಮರಾಂವ ಶೇ. 69.92, ಆರತಿ ಗೋವಿಂದ ಶೇ. 68.96, ನಂದಿನಿ ಅಂಬಾದಾಸ ಶೇ. 68.48, ಹಣಮಂತ ಸುಭಾಷ ಖಾಸಲೆ ಶೇ. 68.16, ಸಂದೀಪ ಉದ್ಧವ ಶೇ. 66.56, ಕಾಜಲ ರಂಗರಾಂವ ರಾಠೋಡ ಶೇ. 66.08, ಪೂಜಾ ಉದ್ಧವ್ ಶೇ. 65.92, ನವನಾಥ ಸೂರ್ಯಕಾಂತ ಶೇ. 65.60, ಸಾಹಿಲ ಮೇಹೆಬೂಬ ಶೇಖ್ ಶೇ. 64.80, ಸುನೀಲ ವೇಂಕಟ ಶೇ. 64.64, ಜನಾಬಾಯಿ ಸಂಗ್ರಾಮ ಶೇ. 63.68, ಅಸ್ಮಿತಾ ವಿಠ್ಠಲರಾವ ಶೇ. 63.68, ಮೀನಾಕ್ಷಿ ವಿರೇಶಕುಮಾರ ಶೇ. 62.72, ಸುಮಾವತಿ ಬಾಬುರಾವ ಶೇ. 62.72 ರಷ್ಟು ಅಂಕ ಗಳಿಸಿ ಸಾಧನೆ ಮಾಡಿದ್ದಾರೆ.

ವಿಷಯವಾರು ತೃತೀಯ ಭಾಷೆ ಹಿಂದಿಯಲ್ಲಿ ಪೂಜಾ ತಂದೆ ಉದ್ಧವ್ ಎಂಬ ವಿದ್ಯಾರ್ಥಿನಿಯು 100 ಕ್ಕೆ 100 ಅಂಕ ಗಳಿಸಿ ರಾಜ್ಯದ ಮಾದರಿ ವಿದ್ಯಾರ್ಥಿಗಳ ಸಾಲಿಗೆ ಸೇರ್ಪಡೆಗೊಂಡಿದ್ದು ಐತಿಹಾಸಿಕ ವಿಶೇಷ. ವಿದ್ಯಾರ್ಥಿಗಳಲ್ಲಿ ಕಠಿಣ ಪರಿಶ್ರಮ ಮತ್ತು ಛಲವೊಂದಿದ್ದರೆ ಏನು ಬೇಕಾದರೂ ಸಾಧಿಸಬಹುದು, ಬಡ ಮಕ್ಕಳ ಶ್ರೇಯೋಭಿವೃದ್ಧಿಯ ವಿಕಾಸಕ್ಕಾಗಿ ಶ್ರಮಿಸುವಲ್ಲಿ ನಮ್ಮ ಸಂಸ್ಥೆಯ ಬೋಧಕ ವೃಂದದವರು ಸದಾ ಮುಂಚೂಣಿಯಲ್ಲಿದ್ದಾರೆ. ಉತ್ತಮ ಪ್ರಗತಿಯ ಜತೆಗೆ ಮಕ್ಕಳ ಗುಣಮಟ್ಟದ ಫಲಿತಾಂಶ ವೃದ್ಧಿಯ ಹಿಂದೆ ಶಿಕ್ಷಕ ವರ್ಗದವರು ಹಗಲಿರುಳು ವಿಶೇಷ ತರಗತಿ, ಭಾನುವಾರದ ಹೆಚ್ಚುವರಿ ತರಗತಿಗಳನ್ನು ನಡೆಸಿ ಮಾರ್ಗದರ್ಶನ ನೀಡಿದ್ದಾರೆ ಎಂದು ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನುದ್ದೇಶಿಸಿ ಎಸ್.ಪಿ.ಕೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಹಾಗೂ ಮಾಜಿ ವಿಧಾನಪರಿಷತ್ ಸದಸ್ಯ ಶ್ರೀ ಕೌಟೆ ಪುಂಡಲೀಕರಾವ ಶೆಟ್ಟಿಬಾ ಮೆಚ್ಚುಗೆ ವ್ಯಕ್ತಪಡಿಸಿ, ಅಭಿನಂದಿಸಿದ್ದಾರೆ. ಪ್ರೌಢ ಶಾಲೆಯ ಮುಖ್ಯಗುರು ಜಗನ್ನಾಥ.ಎಸ್.ಬಿರಾದಾರ ಹರ್ಷಿಸಿದ್ದಾರೆ. ಸಹ ಶಿಕ್ಷಕರಾದ ದಿಲೀಪಕುಮಾರ.ಎನ್.ಮೇತ್ರೆ, ಚಾಂದೋರಿ,

ಮಲ್ಲಿಕಾರ್ಜುನ.ವ್ಹಿ.ಕೋಟೆ, ಪರಮೇಶ್ವರ.ಬಿ.ಬಿರಾದಾರ, ಅಶ್ಫಾಕ್‌ಮಿಯ್ಯಾ.ಎಸ್.ಬೇಗ್, ಬಾಲಾಜಿ ರಣವೀರಕರ್, ಸಿದ್ಧಾರ್ಥ.ಜೆ.ಕಾಂಬಳೆ, ದೈಹಿಕ ಶಿಕ್ಷಕ ಸುನೀಲಕುಮಾರ.ಬಿ.ವಾಗಮೋಡೆ, ಸಹ ಶಿಕ್ಷಕೀಯರಾದ ಪ್ರೀಯಾ.ಎಮ್.ಬಿರಾದಾರ, ಮುಂಡೆ ಜ್ಞಾನೇಶ್ವರಿ.ಎಸ್, ಜ್ಯೋತಿ.ಡಿ.ಘೂಳೆಯವರು ವಿದ್ಯಾರ್ಥಿಗಳಿಗೆ ಶುಭ ಕೋರಿ, ಮನದುಂಬಿ ಶ್ಲಾಘಿಸಿದ್ದಾರೆ. ಬೋಧಕೇತರ ಸಿಬ್ಬಂಧಿ ವರ್ಗದವರಾದ ಎಮ್.ಡಿ.ಉಮರ್ ಸಂತಸ ವ್ಯಕ್ತಪಡಿಸಿದ್ದಾರೆ.

# ಆದಿವಾಸಿ ಸಮುದಾಯಕ್ಕೆ ಹಕ್ಕು ಪತ್ರ ನೀಡಲು ಮನವಿ

• ಮಲ್ಲಮ್ಮ ನುಡಿ ವಾರ್ತೆ, ಹುಣಸೂರು

ತಾಲೂಕಿನ ಆದಿವಾಸಿಗಳ ಸಂಘಟನೆಗಳು ಕಳೆದ ಸಾಲಿನ ಮೇ ತಿಂಗಳಲ್ಲಿ ರಾಜ್ಯದ ಕಂದಾಯ ಸಚಿವರಾದ ಕೃಷ್ಣ ಭೈರೇ ಗೌಡರಿಗೆ ಪತ್ರಬರೆದು ತಾಲೂಕಿನ 33 ಹಾಡಿಗಳನ್ನು ಕಂದಾಯ ಗ್ರಾಮಗಳಾಗಿ ಘೋಷಿಸಲು ಹಾಗು 2600 ಕುಟುಂಬಗಳ ಪೈಕಿ 22 ಹಾಡಿಗಳ 450 ಕುಟುಂಬಗಳಿಗೆ ಇರುವ 1200 ಎಕರೆ ಕೃಷಿ ಭೂಮಿಗೆ ಪೋಡು ಮಾಡಿಸಿ ಅಂತಿಮ ಭೂದಾಖಲೆ ನೀಡಲು ವಿನಂತಿ ಮಾಡಲಾಗಿತ್ತು. ಅಲ್ಲದೆ ಕಾಡು ವಡ್ಡರಗಡಿ ಸರ್ವೆ ನೋಂಬರ್ 33ರಲ್ಲಿ ಹಿಂದೆ ಆದಿವಾಸಿಗಳಿಗೆ ನೀಡಿದ್ದ 117 ಎಕರೆ ಕೃಷಿ ಮಾಡಿಲ್ಲ ಎಂಬ ಕಾರಣ ಒಡ್ಡಿ ಸಾಗುವಳಿ ರದ್ದು ಪಡಿಸಿ ತಹಸೀಲ್ದಾರ್ ಕರುಬಯ್ಯ ಕಾಲದಲ್ಲಿ ಬೇರೆಯವರಿಗೆ ನೀಡಲಾಗಿತ್ತು. ಈ ಕ್ರಮವನ್ನು ಆದಿವಾಸಿಗಳು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಕೋರ್ಟ್ ನಲ್ಲಿ ಪ್ರಶ್ನಿಸಿ ಸಾಗುವಳಿ ರದ್ದು ಪಡಿಸಲಾಗಿತ್ತು. ಈ ಭೂಮಿಯಲ್ಲಿ ಮೊದಲಿನಿಂದಲೂ ತೆಕ್ಲ ಹಾಡಿ ಹಾಗು ಮಾದ್ಯಯನ ಕಟ್ಟೆ ಹಾಡಿಗಳ ಕುಟುಂಬಗಳು ವಾಸ ಇರುವುದರಿಂದ ಅವರಿಗೆ ಪುನಃ ಸಾಗುವಳಿ ಪತ್ರ ನೀಡಲಿ ಎಂದು ಸಚಿವರನ್ನು ವಿನಂತಿಸಲಾಗಿತ್ತು.

ಅಲ್ಲದೆ ನೆರಳಕುಪ್ಪೆ ಬಿ ಹಾಡಿಯ 6 ಕುಟುಂಬಗಳು ಮಾಡುವ 12 ಎಕರೆ ಭೂಮಿಗೆ ಬೇರೆಯವರು ಸಾಗುವಳಿ ಪತ್ರ ಪಡೆದಿರುವುದರಿಂದ ಅವರ ಸಾಗುವಳಿ ರದ್ದು ಗೊಳಿಸಿ 46 ವರ್ಷಗಳಿಂದ ಅನುಭವದಲ್ಲಿ ಇರುವ ಆದಿವಾಸಿಗಳಿಗೆ ಹಕ್ಕು ಪತ್ರ ನೀಡಲು ವಿನಂತಿಸಲಾಗಿದೆ. ಈ ಸಂಬಂಧ 1987 ರಲ್ಲಿ ಅಂದಿನ ಜಿಲ್ಲಾಧಿಕಾರಿ ವಿ ಪಿ. ಬಳಿಗಾರ್, ಕೈ ಹರಹದ ಪಹಣಿ ಬರೆಸಿ, ಸ್ವಾಧೀನದ ಮಹಾಜರ್ ಮಾಡಿಸಿ ದಾಖಲೆಗಳನ್ನು ಆದಿವಾಸಿಗಳಿಗೆ ನೀಡಿರುವುದನ್ನು ಸಚಿವರ ಗಮನಕ್ಕೆ ತಂದು ಕ್ರಮ ವಹಿಸಲು ವಿನಂತಿಸಲಾಗಿತ್ತು. ಆದರೆ, ಇನ್ನೂ ಯಾವ ಕ್ರಮವನ್ನೂ ಜರುಗಿಸದ ಕಾರಣ ಈಗ ಪುನಃ ಸಚಿವರಿಗೆ, ಮುಖ್ಯ ಕಾರ್ಯದರ್ಶಿಗಳಿಗೆ,, ಜಿಲ್ಲಾಧಿಕಾರಿಗಳಿಗೆ, ಉಪವಿಭಗಾಧಿಕಾರಿಗಳಿಗೆ, ತಹಸೀಲ್ದಾರ್ ರವರಿಗೆ ಪತ್ರಬರೆದು ತುರ್ತಾಗಿ ಕ್ರಮವಹಿಸಲು ಮನವಿ ಮಾಡಲಾಗಿದೆ ಎಂದು ಆದಿವಾಸಿ ಮುಖಂಡರಾದ ಹರ್ಷ, ಜಯಪ್ಪ, ಲಕ್ಷ್ಮಿ ವಿಠಲ್, ಶಿವಣ್ಣ ಕೆಂಪಮ್ಮ ಹಾಗು ಡೀಡ್ ನಿರ್ದೇಶಕ ಡಾ. ಎಸ್.ಎಸ್ ಶ್ರೀಕಾಂತ್ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಇದೇ ರೀತಿ ಉಪವಿಭಾಗದ 4 ತಾಲೂಕುಗಳಲ್ಲಿಯೂ ಕ್ರಮವಹಿಸಲು ವಿನಂತಿಸಿದ್ದಾರೆ.



# ಸಿಡಿಲಿನ ಆರ್ಭಟ: ಎರಡು ಹಸು ಸಾವು, ರೈತನಿಗೆ ನಷ್ಟ



• ಮಲ್ಲಮ್ಮ ನುಡಿ ವಾರ್ತೆ, ಮುದಗಲ್

ಬುಧವಾರ ಸಂಜೆ ಗುಡುಗು–ಮಿಂಚಿನ ನಡುವೆ ಬಿದ್ದ ಭೀಕರ ಸಿಡಿಲು ಎರಡು ಹಸುಗಳನ್ನು ಬಲಿ ಪಡೆದ ಘಟನೆ ನಡೆದಿದೆ. ಮೇಗಳಪೇಟೆಯ ಹನುಮಂತ ಮುರುಡಿ ಅವರಿಗೆ ಸೇರಿದ ಹಸುಗಳು ಈ ದುರ್ಘಟನೆಯಲ್ಲಿ ಸಾವಿಗೀಡಾಗಿವೆ.

ಮೆಗಳಪೇಟೆ ಸಮೀಪದ ಜಮೀನಿನಲ್ಲಿ ಬೇವಿನ ಮರದ ಕೆಳಗೆ ಕಟ್ಟಲಾಗಿದ್ದ ಹಸುಗಳ ಮೇಲೆ ಸಂಜೆ ಸುಮಾರು 5 ಗಂಟೆ ವೇಳೆಗೆ ಏಕಾಏಕಿ ಸಿಡಿಲು ಬಡಿದಿದೆ. ಪರಿಣಾಮವಾಗಿ, ಎರಡೂ ಹಸುಗಳು ಸ್ಥಳದಲ್ಲಿಯೇ ಸಾವನ್ನಪ್ಪಿವೆ ಎಂದು ತಿಳಿದುಬಂದಿದೆ. ಮೃತ ಹಸುಗಳ ಒಟ್ಟು ಮೌಲ್ಯ ಸುಮಾರು ಒಂದು ಲಕ್ಷ ರೂಪಾಯಿಗೂ ಹೆಚ್ಚು ಎನ್ನಲಾಗಿದೆ.

ಘಟನೆ ಬಳಿಕ ರೈತ ಕುಟುಂಬದಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದ್ದು, ಆರ್ಥಿಕವಾಗಿ ಸಂಕಷ್ಟ ಎದುರಾಗಿದೆ. ಮಳೆಗಾಲದ ಆರಂಭದಲ್ಲೇ ಇಂತಹ ಅವಘಡ ಸಂಭವಿಸಿರುವುದು ಸ್ಥಳೀಯ ರೈತರಲ್ಲಿ ಆತಂಕ ಮೂಡಿಸಿದೆ.

ಈ ಹಿನ್ನೆಲೆಯಲ್ಲಿ, ಹಸುಗಳನ್ನು ಕಳೆದುಕೊಂಡ ರೈತನಿಗೆ ಸರ್ಕಾರದಿಂದ ತಕ್ಷಣ ಸೂಕ್ತ ಪರಿಹಾರ ನೀಡಬೇಕು ಎಂದು ಗ್ರಾಮಸ್ಥರು ಹಾಗೂ ರೈತ ಸಂಘಟನೆಗಳು ಒತ್ತಾಯಿಸುತ್ತಿವೆ. ಪ್ರಕೃತಿ ವಿಕೋಪಗಳಿಂದ ಆಗುವ ನಷ್ಟಗಳಿಗೆ ಶೀಘ್ರ ಪರಿಹಾರ ವ್ಯವಸ್ಥೆ ಮಾಡುವುದು ಅಗತ್ಯ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# 15ಕ್ಕೆ ಭರ್ಜರಿ ಶಿಖಂಡಿ ಚಿತ್ರ ತೆರೆಗೆ: ಅದ್ದೂರಿ ಟೀಸರ್ ಹಾಡುಗಳ ಬಿಡುಗಡೆ

ಬಳ್ಳಾರಿ, ಏ.29: ಪೋಲೊ ಮೂವೀಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ ಬಹು ನಿರೀಕ್ಷಿತ 'ಶಿಖಂಡಿ' ಸಿನಿಮಾ ಮೇ 15ರಂದು ರಾಜ್ಯಾದ್ಯಂತ ಹಾಗೂ ಪಾನ್ ಇಂಡಿಯಾ ಮಟ್ಟದಲ್ಲಿ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ಘೋಷಿಸಿದೆ. ನಗರದ ಹೊಸಪೇಟೆ ರಸ್ತೆಯಲ್ಲಿರುವ ಪೋಲೊ ಪ್ಯಾರಡೈಸ್ ಹೋಟೆಲ್‌ನಲ್ಲಿ ಆಯೋಜಿಸಿದ್ದ ಅದ್ದೂರಿ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಟೀಸರ್ ಮತ್ತು ಹಾಡುಗಳನ್ನು ಬಿಡುಗಡೆ ಮಾಡುವ ಮೂಲಕ ಚಿತ್ರದ ವಿಶೇಷತೆಗಳನ್ನು ಚಿತ್ರತಂಡ ಹಂಚಿಕೊಂಡಿತು.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಚಿತ್ರದ ನಿರ್ದೇಶಕ ಗುರುಮೂರ್ತಿ, "ಶಿಖಂಡಿ ಎಂಬುದು ಕೇವಲ ಒಂದು ಹೆಸರು ಮಾತ್ರವಲ್ಲ, ಅದಕ್ಕೊಂದು ಐತಿಹಾಸಿಕ ಮತ್ತು ಪೌರಾಣಿಕ ಹಿನ್ನೆಲೆ ಇದೆ. ಮಹಾಭಾರತದಲ್ಲಿ ಶಿಖಂಡಿಯ ಪಾತ್ರಕ್ಕೆ ವಿಶೇಷ ಮಹತ್ವವಿದ್ದು, ಅದನ್ನೇ ಆಧಾರವಾಗಿಟ್ಟುಕೊಂಡು ವಿಭಿನ್ನ ಕಥಾಹಂದರದೊಂದಿಗೆ ಈ ಚಿತ್ರವನ್ನು ನಿರ್ಮಿಸಿದ್ದೇವೆ. ಪ್ರೇಕ್ಷಕರಿಗೆ ಹೊಸ ಅನುಭವ ನೀಡುವ ಉದ್ದೇಶದಿಂದ ಕಥೆ, ಭಾವನೆ, ಆಕ್ಷನ್ ಹಾಗೂ ಸಾಮಾಜಿಕ ಅಂಶಗಳನ್ನು ಒಳಗೊಂಡಂತೆ ಚಿತ್ರ ರೂಪಿಸಲಾಗಿದೆ" ಎಂದು ತಿಳಿಸಿದರು.

ಚಿತ್ರದ ನಿರ್ಮಾಪಕ ಪೋಲೊ ಪ್ರವೀಣ್ ಕುಮಾರ್ ಮಾತನಾಡಿ, "ಮೇ 15ರಂದು 'ಶಿಖಂಡಿ' ಸಿನಿಮಾ ಸುಮಾರು 100ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಪ್ರೇಕ್ಷಕರ ನಿರೀಕ್ಷೆಗೆ ತಕ್ಕಂತೆ ಚಿತ್ರವನ್ನು ಅದ್ದೂರಿಯಾಗಿ ನಿರ್ಮಿಸಲಾಗಿದೆ. ಬಳ್ಳಾರಿ, ಬೆಂಗಳೂರು, ಮೈಸೂರು ಹಾಗೂ ಮಾಗಡಿ ಸೇರಿದಂತೆ ಹಲವು ಭಾಗಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶ ನೀಡಿರುವುದು ಚಿತ್ರದ ವಿಶೇಷತೆ" ಎಂದು ಹೇಳಿದರು.

ಚಿತ್ರವು ಒಟ್ಟು 2 ಗಂಟೆ 20 ನಿಮಿಷಗಳ ಅವಧಿಯದ್ದಾಗಿದ್ದು, ನಾಲ್ಕು ಹಾಡುಗಳನ್ನು ಒಳಗೊಂಡಿದೆ. ಖ್ಯಾತ ಕೊರಿಯೋಗ್ರಾಫರ್ ಜಗ್ಗು ಮಾಸ್ಟರ್ ಚಿತ್ರದ ನಾಲ್ಕು ಹಾಡುಗಳಿಗೆ ನೃತ್ಯ ನಿರ್ದೇಶನ ಮಾಡಿದ್ದು, ಹಾಡುಗಳು ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ಗಮನ ಸೆಳೆಯುತ್ತಿವೆ ಎಂದು ಚಿತ್ರತಂಡ ತಿಳಿಸಿತು.

"ಬಳ್ಳಾರಿಯ ಸುಮಾರು 22ಕ್ಕೂ ಹೆಚ್ಚು ಸ್ಥಳೀಯ ಕಲಾವಿದರು ಈ ಸಿನಿಮಾದಲ್ಲಿ ಅಭಿನಯಿಸಿದ್ದಾರೆ. ಹೊಸ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಸ್ಥಳೀಯ ಕಲಾವಿದರಿಗೆ ಆದ್ಯತೆ ನೀಡಲಾಗಿದೆ. ತಾಂತ್ರಿಕವಾಗಿ ಕೂಡ ಸಿನಿಮಾ ಅತ್ಯುತ್ತಮ ಗುಣಮಟ್ಟದಲ್ಲಿ ಮೂಡಿಬಂದಿದೆ" ಎಂದು ನಿರ್ಮಾಪಕರು ಹೇಳಿದರು.

ಈ ಸಿನಿಮಾ ಕೇವಲ ಕನ್ನಡಕ್ಕೆ ಸೀಮಿತವಾಗದೇ ಪಾನ್ ಇಂಡಿಯಾ ಮಟ್ಟದಲ್ಲಿ ಬಿಡುಗಡೆ ಮಾಡುವ ಉದ್ದೇಶ ಹೊಂದಲಾಗಿದೆ. ಕನ್ನಡದ ಜೊತೆಗೆ ತಮಿಳು, ತೆಲುಗು, ಮಲಯಾಳಂ ಹಾಗೂ ಹಿಂದಿ ಭಾಷೆಗಳಲ್ಲಿ ಚಿತ್ರ ಬಿಡುಗಡೆಯಾಗಲಿದ್ದು, ವಿವಿಧ ರಾಜ್ಯಗಳ ಪ್ರೇಕ್ಷಕರನ್ನು ಸೆಳೆಯುವ ನಿಟ್ಟಿನಲ್ಲಿ ಸಿದ್ಧತೆಗಳು ನಡೆಯುತ್ತಿವೆ ಎಂದು ತಿಳಿಸಿದರು.

ಚಿತ್ರದ ಟೀಸರ್ ಬಿಡುಗಡೆ ವೇಳೆ ಪತ್ರಕರ್ತರು ಹಾಗೂ ಸಿನಿ ಅಭಿಮಾನಿಗಳು ಚಿತ್ರದ ದೃಶ್ಯ ವೈಭವ ಮತ್ತು ಕಥಾ ಶೈಲಿಯನ್ನು ಮೆಚ್ಚುಗೆ ವ್ಯಕ್ತಪಡಿಸಿದರು. ಚಿತ್ರದ ಹಾಡುಗಳೂ ಕೂಡ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆಯಲಿವೆ ಎಂಬ ವಿಶ್ವಾಸವನ್ನು ಚಿತ್ರತಂಡ ವ್ಯಕ್ತಪಡಿಸಿತು.

ಈ ಸಂದರ್ಭದಲ್ಲಿ ನಿರ್ಮಾಪಕ ಪೋಲೊ ಪ್ರವೀಣ್ ಕುಮಾರ್, ನಿರ್ದೇಶಕ ಗುರುಮೂರ್ತಿ, ಯುವರಾಜ್ ಗೌಡ, ಖ್ಯಾತಿ, ದೀಪ ಶೆಟ್ಟಿ, ಆನಂದ್, ಚಾಂದಿನಿ, ಕ್ಯಾಮೆರಾಮನ್ ಮೈಸೂರು ಸ್ವಾಮಿ, ಪೋಲೊ ಲಕ್ಷ್ಮಿ ಸೇರಿದಂತೆ ಚಿತ್ರತಂಡದ ಸದಸ್ಯರು ಹಾಗೂ ಹಲವಾರು ಕಲಾವಿದರು ಉಪಸ್ಥಿತರಿದ್ದರು.

# ಮೆಕ್ಯಾನಿಕ್ ಮಗಳು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಾಲೇಜಿಗೆ ಪ್ರಥಮ

• ಮಲ್ಲಮ್ಮ ನುಡಿ ವಾರ್ತೆ, ಮಸ್ಕಿ

ಪಟ್ಟಣದ ಮೆಕ್ಯಾನಿಕ್ ಮಗಳು ದ್ವಿತೀಯ ಪಿಯುಸಿ ಪರೀಕ್ಷೆಯ ಮರುಮಾಪನದಲ್ಲಿ ಶೇ 94.83 ಅಂಕ ಪಡೆದು ಶಾಲೆಯ ಹಾಗೂ ಪಟ್ಟಣಕ್ಕೆ ಕೀರ್ತಿ ತಂದಿದ್ದಾಳೆ.

ಬೇರೆ ಪಟ್ಟಣಕ್ಕೆ ಗೂಳೆ ಹೋಗಿ ಮೆಕ್ಯಾನಿಕ್ ಕೆಲಸ ಮಾಡಿ ಬರುವ ಹಣದಲ್ಲಿ ಹಾಗೂ ಸಾಲಸೂಲ ಮಾಡಿ ಮಗಳನ್ನು ಓದಿಸಿದ್ದಾರೆ. ಮಗಳೂ ಸಹ ಮೊಬೈಲ್ ಗೀಳನ್ನು ಬಿಟ್ಟು, ಹಗಲು ರಾತ್ರಿ ಎನ್ನದೇ ಕಷ್ಟಪಟ್ಟು ಓದಿ ವಾಣಿಜ್ಯ ವಿಭಾಗದಲ್ಲಿ ಹೆಚ್ಚು ಅಂಕ ಪಡೆದು ಪೋಷಕರ ಕೀರ್ತಿ ಪತಾಕೆ ಹೆಚ್ಚಿಸಿದ್ದಾರೆ.

ಪಟ್ಟಣದ 5ನೇ ವಾರ್ಡಿನಲ್ಲಿ ವಾಸವಾಗಿರುವ ಬಡ ಕುಟುಂಬದ ಮುಕ್ತಾಬಾಯಿ, ಕಿರಣ ರಾಹುತ್ ಅವರ ಮಗಳು ದ್ವಿತೀಯ ಪಿಯುಸಿಯಲ್ಲಿ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಇವರ ತಂದೆ ಮೂಲತಃ ಮೆಕ್ಯಾನಿಕ್ ಆಗಿ ಕೆಲಸ ನಿರ್ವಹಿಸುತ್ತಿದ್ದು, ಕಡುಬಡತನದಲ್ಲಿ ಕಷ್ಟಪಟ್ಟು ಓದಿಸಿದ್ದಾರೆ.

ತಂದೆಯ ಮೆಕ್ಯಾನಿಕ್ ಕೆಲಸದಿಂದ ಬರುವ ಅಲ್ಪ ಆದಾಯದಲ್ಲಿಯೇ ಅಚ್ಚುಕಟ್ಟಾಗಿ ಅವಶ್ಯವಿರುವ ಖರ್ಚಿನೊಂದಿಗೆ ಮಗಳನ್ನು ಓದಿಸಿದ್ದು, ಎಲೆಮರಿಕಾಯಿಯಂತೆ ಬದುಕು ಸಾಗಿಸುತ್ತಿದ್ದಾರೆ.

ಒಬ್ಬಳೇ ಹೆಣ್ಣುಮಗಳನ್ನು ಹೊಂದಿರುವ ಈ ಬಡ ಕುಟುಂಬದ ಮಗಳು ಕುಟುಂಬದ ಕಷ್ಟವನ್ನು ಮೆಟ್ಟಿನಿಂತು ನಿರಂತರ ಅಧ್ಯಯನದಿಂದ ಹಾಗೂ ಶಿಕ್ಷಕರ ಮಾರ್ಗದರ್ಶನ ಮತ್ತು ಪಾಲಕರ ಆಸೆಯಂತೆ ಸಾಧನೆಯ ಮೆಟ್ಟಿಲೇರಿ ಎಲ್ಲರಿಗೂ ಮಾದರಿಯಾಗಿದ್ದಾಳೆ.

ನನ್ನ ಮಗಳು ಕಾಲೇಜಿಗೆ ಫಸ್ಟ್ ಬಂದಾಳ ನನಗೆ ಖುಷಿ ತಂದಿದೆ. ಅವಳು ಮುಂದೆ ಏನೇ ಓದುತ್ತೇನೆ ಎಂದರೂ ಓದಿಸಲು ಶ್ರಮ ಪಡುವೆ



ಈ ಮೊದಲು ಪ್ರಕಟಗೊಂಡ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ವಿದ್ಯಾನಿಕೇತನ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಸಂಜನಾ ರಾಹುತ್ ಅವರು ವ್ಯವಹಾರ ಅಧ್ಯಯನ ವಿಷಯದಲ್ಲಿ ಪ್ರಥಮ ಫಲಿತಾಂಶದಲ್ಲಿ 60 ಅಂಕಗಳನ್ನು ಪಡೆದಿದ್ದರು. ಸಂಜನಾ ಅವರು ಪುನಃ ಮರುಮೂಲ್ಯ ಮಾಪನದ ನಂತರ 75 ಅಂಕಗಳನ್ನು ಪಡೆದು ಶೇಕಡ 94.83 ಅಂ–ದರೆ ಒಟ್ಟು ಅಂಕಗಳು 569 ಪಡೆದು ಕಾಲೇಜಿಗೆ ವಾಣಿಜ್ಯ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದುಕೊಂಡು ಗಮನಾರ್ಹ ಸಾಧನೆ ಮಾಡಿದ್ದಾಳೆ.

ಈ ವಿದ್ಯಾರ್ಥಿಯ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿ ಅಭಿನಂದನೆ ಸಲ್ಲಿಸಿದ್ದಾರೆ.

# ಕ್ರಿಮಿನಾಲಜಿ ಫೊರೆನ್ಸಿಕ್ ಸೈನ್ಸ್: ಭವಿಷ್ಯದ ಆಶಾಕಿರಣ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಇಂದಿನ ಆಧುನಿಕ ಸಮಾಜದಲ್ಲಿ ಅಪರಾಧಗಳ ಸಂಖ್ಯೆ ಮತ್ತು ಅವುಗಳ ಸ್ವರೂಪ ದಿನದಿಂದ ದಿನಕ್ಕೆ ಬದಲಾಗುತ್ತಿದೆ. ಕೇವಲ ದೈಹಿಕ ಬಲದಿಂದ ಅಪರಾಧಗಳನ್ನು ತಡೆಯುವುದು ಕಷ್ಟದ ಕೆಲಸ. ಇದ್ದಕ್ಕಾಗಿಯೇ ಕ್ರಿಮಿನಾಲಜಿ (Criminology) ಮತ್ತು ಫೊರೆನ್ಸಿಕ್ ಸೈನ್ಸ್ (Forensic Science) ಎಂಬ ಅದ್ಭುತ ವಿಷಯಗಳು ಕಾರ್ಯನಿರ್ವಹಿಸುತ್ತವೆ. ಏನಿದು ಕ್ರಿಮಿನಾಲಜಿ ಮತ್ತು ಫೊರೆನ್ಸಿಕ್ ಸೈನ್ಸ್? ಕ್ರಿಮಿನಾಲಜಿ (ಅಪರಾಧಶಾಸ್ತ್ರ): ಒಬ್ಬ ವ್ಯಕ್ತಿ ಅಪರಾಧ ಯಾಕೆ ಮಾಡುತ್ತಾನೆ ಆತನ ಮಾನಸಿಕ ಸ್ಥಿತಿ ಹೇಗಿರುತ್ತದೆ ಮತ್ತು ಅಪರಾಧವನ್ನು ತಡೆಗಟ್ಟುವುದು ಹೇಗೆ ಎಂಬ ಬಗ್ಗೆ ಅಧ್ಯಯನ ಮಾಡುವ ಶಾಸ್ತ್ರವೇ ಕ್ರಿಮಿನಾಲಜಿ. ಫೊರೆನ್ಸಿಕ್ ಸೈನ್ಸ್ (ನ್ಯಾಯ ವಿಜ್ಞಾನ) ವಿಜ್ಞಾನದ ತಂತ್ರಜ್ಞಾನಗಳನ್ನು ಬಳಸಿ ಅಪರಾಧ ಸ್ಥಳದಲ್ಲಿ ಸಿಗುವ ಸಾಕ್ಷ್ಯಗಳನ್ನು (ಬೆರಳಚ್ಚು, ಡಿಎ□□□, ರಕ್ತದ



ಮಾದರಿ ಇತ್ಯಾದಿ) ಪರೀಕ್ಷಿಸಿ ಅಪರಾಧಿಯನ್ನು ಪತ್ತೆ ಹಚ್ಚುವ ಕಲೆಯಿದು. ಆಧುನಿಕ ಸಮಾಜಕ್ಕೆ ಇದರ ಅಗತ್ಯವೇನು ನಮ್ಮ ಸಮಾಜದಲ್ಲಿ ಅಪರಾಧ ಮುಕ್ತ ವಾತಾವರಣ ನಿರ್ಮಿಸಲು ಈ ವಿಷಯಗಳು ಅಡಿಪಾಯದಂತಿವೆ.

ನಿರ್ದೋಷಿಗಳಿಗೆ ನ್ಯಾಯ: ಕೇವಲ ಸಂಶಯದ ಮೇಲೆ ಶಿಕ್ಷೆಯಾಗುವುದನ್ನು ತಪ್ಪಿಸಿ, ವೈಜ್ಞಾನಿಕ ಸಾಕ್ಷ್ಯಗಳ ಮೂಲಕ ನಿಜವಾದ ತಪ್ಪಿತಸ್ಥರನ್ನು ಪತ್ತೆಹಚ್ಚಲು ಇದು ಸಹಕಾರಿ. ಸೈಬರ್ ಭದ್ರತೆ:– ಇಂದಿನ ಡಿಜಿಟಲ್ ಯುಗದಲ್ಲಿ ಆನ್‌ಲೈನ್ ವಂಚನೆಗಳನ್ನು ತಡೆಯಲು ಫೊರೆನ್ಸಿಕ್ ತಜ್ಞರು ಅತ್ಯಗತ್ಯ. ಅಪರಾಧ ತಡೆಗಟ್ಟುವಿಕೆ:– ಅಪರಾಧಿಗಳ ಮನೋಸ್ಥಿತಿಯನ್ನು ಅರ್ಥಮಾಡಿಕೊಳ್ಳುವ ಮೂಲಕ ಸಮಾಜದಲ್ಲಿ ಸುಧಾರಣೆ ತರಲು ಮತ್ತು ಅಪರಾಧಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಲು ಸಾಧ್ಯ. ಕೆಲಸದ ಅವಕಾಶಗಳು (Job Opportunities):-ಈ ಕೋರ್ಸ್ ಮುಗಿಸಿದ ನಂತರ ಕೇವಲ ಪೊಲೀಸ್ ಇಲಾಖೆ ಮಾತ್ರವಲ್ಲದೆ ಹಲವು ಕ್ಷೇತ್ರಗಳಲ್ಲಿ ಅವಕಾಶಗಳಿವೆ: ಸರ್ಕಾರಿ ಸಂಸ್ಥೆಗಳು: CBI, CID, Intelligence Bureau (IB), ಮತ್ತು ರಾಜ್ಯ ಪೊಲೀಸ್ ಇಲಾಖೆಗಳಲ್ಲಿ ಸೀನ್ ಆಫ್ ಕ್ರೈಮ್ ಆಫೀಸರ್ (ಖಔಅಔ) ಆಗಿ ಕೆಲಸ ಮಾಡಬಹುದು.

ನ್ಯಾಯಾಲಯಗಳು:–ಹ್ಯಾಂಡ್ ರೈಟಿಂಗ್ ಎಕ್ಸ್‌ಪರ್ಟ್ ಅಥವಾ ಬೆರಳಚ್ಚು ತಜ್ಞರಾಗಿ ಕಾರ್ಯನಿರ್ವಹಿಸಬಹುದು. ಖಾಸಗಿ ಕ್ಷೇತ್ರ:–ಬ್ಯಾಂಕ್‌ಗಳಲ್ಲಿ ವಂಚನೆ ಪತ್ತೆಹಚ್ಚಲು, ಇನ್ಶೂರೆನ್ಸ್ ಕಂಪನಿಗಳಲ್ಲಿ ಮತ್ತು ಪ್ರೈವೇಟ್ ಡಿಟೆಕ್ಟಿವ್ ಏಜೆನ್ಸಿಗಳಲ್ಲಿ ಬೇಡಿಕೆ ಇದೆ. ಸೈಬರ್ ವಿಭಾಗ:– ಸೈಬರ್ ಸೆಕ್ಯೂರಿಟಿ ತಜ್ಞರಾಗಿ ದೊಡ್ಡ ದೊಡ್ಡ ಸಾಫ್ಟ್‌ವೇರ್ ಕಂಪನಿಗಳಲ್ಲಿ ಕೆಲಸ ಪಡೆಯಬಹುದು. ಶಿಕ್ಷಣ ಕ್ಷೇತ್ರ:– ಪ್ರೊಫೆಸರ್ ಆಗಿ ಅಥವಾ ಸಂಶೋಧಕರಾಗಿ ಮುಂದಿನ ಪೀಳಿಗೆಗೆ ಮಾರ್ಗದರ್ಶನ ನೀಡಬಹುದು.

ಮುಕ್ತಾಯ:ಹಲವರಿಗೆ ಇಂತಹದೊಂದು ಕೋರ್ಸ್ ಇದೆ ಎಂಬ ಅರಿವೇ ಇಲ್ಲ. ವಿಜ್ಞಾನ ಮತ್ತು ಸಮಾಜದ ಬಗ್ಗೆ ಆಸಕ್ತಿ ಇರುವ ಯುವಕರು ಈ ಕ್ಷೇತ್ರವನ್ನು ಆಯ್ದುಕೊಂಡರೆ, ಉತ್ತಮ ಕೆರಿಯರ್ ಜೊತೆಗೆ ದೇಶಕ್ಕೆ ಸಮಾಜಕ್ಕೆ ಗೌರವಯುತ ಸೇವೆ ಸಲ್ಲಿಸಬಹುದು. ದೇಶಕ್ಕೆ ಕೀರ್ತಿ ತರುವಂತಹ ಕಾರ್ಯ ಮಾಡಬಹುದಾಗಿದೆ.

ಮೊಹಮ್ಮದ್ ಚಾಂದ ಪಟೇಲ್ ಸಾ/ಜಾಲಿಬೆಂಚಿ ಸುರಪುರ, ಅಭ್ಯರ್ಥಿ:– ಮಾಸ್ಟರ್ ಇನ್ ಅಪರಾಧ ಶಾಸ್ತ್ರ ವಿಭಾಗ ಮತ್ತು ನ್ಯಾಯ ವಿಜ್ಞಾನ ದಾವಣಗೆರೆ ವಿಶ್ವ ವಿದ್ಯಾಲಯ ದಾವಣಗೆರೆ

# ಪತ್ತಾರಗೆ ಗೌರವ ಡಾಕ್ಟರೇಟ್ ಪದವಿ ಪ್ರಧಾನ



• ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ

ಯಾದಗಿರಿ ಜಿಲ್ಲೆಯ ಶಹಾಪೂರ ತಾಲ್ಲೂಕಿನ ಶಿರವಾಳ ಗ್ರಾಮದ ವಿರೂಪಾಕ್ಷ ಪತ್ತಾರ ಅವರು ಕರ್ನಾಟಕ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿಗೆ ಪಾತ್ರರಾಗಿದ್ದು, ರಾಜ್ಯಪಾಲರಾದ ಗೌರವಾನ್ವಿತ ಥಾವರ್ ಚಂದ್ ಗೆಹ್ಲೋಟ್ ಅವರು ಪದವಿ ಪ್ರಧಾನ ಮಾಡಿ ಗೌರವಿಸಿದರು. ಶಿರವಾಳ ಗ್ರಾಮದ ಗೂಳಪ್ಪ ಆಚಾರಿ ಮತ್ತು ಮೀನಾಕ್ಷಿ ಪತ್ತಾರ ದಂಪತಿಗಳ ಪುತ್ರರಾದ ವಿರೂಪಾಕ್ಷ ಅವರು, ಏಪ್ರಿಲ್ 23ರಂದು ನಡೆದ ಕರ್ನಾಟಕ ವಿಶ್ವವಿದ್ಯಾಲಯದ 75ನೇ ವಾರ್ಷಿಕ ಘಟಿಕೋತ್ಸವದಲ್ಲಿ ಈ ಗೌರವವನ್ನು ಪಡೆದರು. ಅವರು ಎನ್.ಧರ್ಮಸಿಂಗ್ ರವರ ರಾಜಕೀಯ ಜೀವನ: ಒಂದು ಅಧ್ಯಯನ ಎಂಬ ವಿಷಯದ ಮೇಲೆ ಸಂಶೋಧನಾ ಮಹಾಪ್ರಬಂಧವನ್ನು ಸಲ್ಲಿಸಿದ್ದರು. ಈ ಸಂಶೋಧನೆಗೆ ಕರ್ನಾಟಕ ಕಲಾ ಮಹಾವಿದ್ಯಾಲಯದ ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಸುರೇಶ ಎನ್. ಹುಲ್ಲನ್ನವರ ಅವರು ಮಾರ್ಗದರ್ಶನ ನೀಡಿದ್ದರು. ಈ ಘಟಿಕೋತ್ಸವದಲ್ಲಿ ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ, ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎ.ಎಂ. ಖಾನ, ಕುಲಸಚಿವರಾದ ಡಾ. ಶಂಕರ ವಣಿಕ್ಯಾಳ ಹಾಗೂ ಮೌಲ್ಯಮಾಪನ ಕುಲಸಚಿವರಾದ ಪ್ರೊ. ಎನ್. ವೈ. ಮಟ್ಟಿಹಾಳ ಉಪಸ್ಥಿತರಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ವಿರೂಪಾಕ್ಷ ಪತ್ತಾರ ಅವರು ಶಿರವಾಳ ಗ್ರಾಮಕ್ಕೆ ಕೀರ್ತಿಯನ್ನು ತಂದಿದ್ದು, ಗ್ರಾಮದ ಹಿರಿಯರು, ಯುವಕರು, ಕುಟುಂಬದ ಸದಸ್ಯರು ಹಾಗೂ ಶಿಕ್ಷಕರು ಸೇರಿ ಹರ್ಷ ವ್ಯಕ್ತಪಡಿಸಿದರು.

# ಅಂಬೇಡ್ಕರ್ ಬಸವ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ, ಗಂಗಾವತಿ

ಗಂಗಾವತಿ: ತಾಲೂಕಿನ ಶರಣಬಸವೇಶ್ವರ ಕ್ಯಾಂಪಿನಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ಹಾಗೂ ಬಸವ ಜಯಂತಿಯನ್ನು ಅತ್ಯಂತ ವಿಜೃಂಭಣೆಯಿಂದ ಮತ್ತು ಸಂಭ್ರಮದಿಂದ ಆಚರಿಸಲಾಯಿತು.

ಈ ಪ್ರಯುಕ್ತ ಕ್ಯಾಂಪಿನ ಪ್ರಮುಖ ಹೆದ್ದಾರಿಯಲ್ಲಿ ಭವ್ಯ ಮೆರವಣಿಗೆ ಏರ್ಪಡಿಸಲಾಗಿದ್ದು, ಆಟೋಗಳ ಮೂಲಕ ಮಹಾನ್ ನಾಯಕರ ಭಾವಚಿತ್ರಗಳನ್ನು ಹೊತ್ತೊಯ್ಯುತ್ತ

ಭಕ್ತಿಪೂರ್ವಕವಾಗಿ ಹಾಗೂ ಘೋಷಣೆಗಳೊಂದಿಗೆ ಮೆರವಣಿಗೆ ಸಾಗಿತು. ಮೆರವಣಿಗೆಯಲ್ಲಿ ಭಾಗವಹಿಸಿದ ಕ್ಯಾಂಪಿನ ಸಾರ್ವಜನಿಕರು ಅಂಬೇಡ್ಕರ್ ಮತ್ತು ಬಸವಣ್ಣರ ಆದರ್ಶಗಳನ್ನು ಘೋಷಣೆಗಳ ಮೂಲಕ ಪ್ರತಿಧ್ವನಿಗೊಳಿಸಿದರು.

ಈ ಕಾರ್ಯಕ್ರಮದಲ್ಲಿ ಶರಣಬಸವೇಶ್ವರ ಕ್ಯಾಂಪಿನ ಮುಖಂಡರು, ಹಿರಿಯರು ಹಾಗೂ ಯುವಕರು ದೊಡ್ಡ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮಕ್ಕೆ ಮೆರುಗು ತಂದರು.

ಈ ಸಂದರ್ಭದಲ್ಲಿ ಭಾಗವಹಿಸಿದವರು ಅಂಬೇಡ್ಕರ್ ಅವರ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಹಕ್ಕುಗಳ ಸಂದೇಶವನ್ನು ಸಮಾಜದ ಎಲ್ಲ ವರ್ಗಗಳಿಗೆ ತಲುಪಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಒಟ್ಟಾರೆ, ಈ ಆಚರಣೆ ಸಮಾಜದಲ್ಲಿ ಏಕತೆ ಮತ್ತು ಸಮಾನತೆಯ ಸಂದೇಶ ಸಾರುವ ಮಹತ್ವದ ಕಾರ್ಯಕ್ರಮವಾಗಿ ಯಶಸ್ವಿಯಾಯಿತು.



# ಕಟ್ಟಿಗೆ ಕಡಿಯುವ ಪುತ್ರಿಗೆ ಶೇಕಡ 92.96% ಅಂಕ



• ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ

ಬಡತನದ ನಡುವೆಯೂ ಕಠಿಣ ಪರಿಶ್ರಮ ಮತ್ತು ದೃಢ ಸಂಕಲ್ಪದಿಂದ ಸಮೀಪದ ನಾಗೂರಿನ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ರಾಧಿಕಾ ಪರಸಪ್ಪ ಭಂಗಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ.

ರಾಧಿಕಾ ತಂದೆ ಪರಸಪ್ಪ ಕಟ್ಟಿಗೆ ಕಡಿಯುವ ಕೆಲಸ ಮಾಡುತ್ತಾರೆ. ತಾಯಿ ಜಯವ್ವ ಕೂಲಿ ಕೆಲಸ ಮಾಡುತ್ತಾರೆ. ಆರ್ಥಿಕ ಸಂಕಷ್ಟದ ನಡುವೆಯೂ ಉತ್ತಮ ಶಿಕ್ಷಣ ಕೊಡಿಸಲು ಪಾಲಕರು ಶ್ರಮಪಡುತ್ತಿದ್ದಾರೆ.ಸಾವಿತ್ರಿ ಹಿಂದಿ ವಿಷಯದಲ್ಲಿ 100 ಕ್ಕೆ 100 ಹಾಗೂ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕಗಳನ್ನು ಪಡೆದಿದ್ದಾರೆ. ಐಪಿಎಸ್ ಅಧಿಕಾರಿ ಆಗುವ ಕನಸು ಕಟ್ಟಿಕೊಂಡಿರುವ ಇವರು ರಾತ್ರಿ 10 ಗಂಟೆಯಿಂದ 2 ಗಂಟೆವರೆಗೆ ಯಾವುದೇ ಕೋಚಿಂಗ್ ಇಲ್ಲದೆ ಮನೆಯಲ್ಲಿ ಓದಿದ್ದಾರೆ ಇವರ ಇನ್ನೋರ್ವ ಪುತ್ರಿ ಸಾವಿತ್ರಿ ಪಟ್ಟಣದ ಅಕ್ಕ ನಾಗಮ್ಮ ಬಾಲಕಿಯರ ಪಪೂ ಕಾಲೇಜಿನಲ್ಲಿ ಓದುತ್ತಿದ್ದ ಇವರು ಪಿಯುಸಿ ಎರಡನೇ ವರ್ಷದ ಪರೀಕ್ಷೆಯಲ್ಲಿ ಶೇಕಡ 80ರಷ್ಟು ಅಂಕ ಗಳಿಸಿದ್ದಾಳೆ. ಬಡತನದಲ್ಲಿ ಸರ್ಕಾರಿ ಶಾಲೆಯಲ್ಲಿ ಓದಿದ ಹೆಮ್ಮೆ ನಮಗಿದೆ ಎಂದು ಖುಷಿ ಪಡುತ್ತಿದೆ ಈ ಕುಟುಂಬ.

# ವಚನ ಸಾಹಿತ್ಯ ಕನ್ನಡ ಸಾಹಿತ್ಯದ ಉಸಿರು




• ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ

ಬಸವಾದಿ ಶರಣರ ಕಾಲದ ವಚನಕಾರರು ಸಮಸಮಾಜದ ಪ್ರತಿಪಾದಕರಾಗಿದ್ದಾರೆ.ಹನ್ನೆರಡನೆಯ ಶತಮಾನದ ಅನುಭವ ಮಂಟಪ ವಿಶ್ವಕ್ಕೆ ಮಾದರಿಯಾಗಿತ್ತು. ವಚನ ಸಾಹಿತ್ಯ ಕನ್ನಡ ಸಾಹಿತ್ಯದ ಉಸಿರು ಎಂದು ಶರಣ ಚಿಂತಕ ವಿವೇಕಾನಂದ ಕಲ್ಯಾಣಶೆಟ್ಟಿ ಅಭಿಪ್ರಾಯ ವ್ಯಕ್ತಪಡಿಸಿದರು.

ಗುರುವಾರ ಪಟ್ಟಣದ ಬಿ ಎಲ್ ಡಿ ಇ ಸಂಸ್ಥೆಯ ಬಸವೇಶ್ವರ ಕಲಾ. ವಾಣಿಜ್ಯ ಮಹಾವಿದ್ಯಾಲಯ. ಹಾಗೂ ಐ ಕ್ಯೂ ಎ ಎಸ್ ಕಾಲೇಜು,ಜಿಲ್ಲಾ ಹಾಗೂ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಆಶ್ರಯದಲ್ಲಿ ಲಿಂ..ಮಲ್ಲಮ್ಮಗೌಡತಿ ಶಂಕರಪ್ಪಗೌಡ ಪಾಟೀಲ ದತ್ತಿ. ಲಿಂ. ಸಿದ್ದಪ್ಪ ಬಸಲಿಂಗಪ್ಪ ಹಂಚಲಿ ದತ್ತಿ .ಶ್ರೀಮತಿ ಕಸ್ತೂರಿ ಮತ್ತು ಗಿರಿಮಲ್ಲಪ್ಪ ಬೆಣ್ಣೂರ ಸ್ಮರಣಾರ್ಥ ದತ್ತಿನಿಧಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಪ್ರಾ ಡಾ. ಅಶೋಕ ಸೂಯ9ವಂಶಿ ಮಾತನಾಡಿ, ಯುವ ವಿದ್ಯಾರ್ಥಿ ಬಸವಾದಿ ಶರಣರ ಸಾಹಿತ್ಯ ಅಧ್ಯಯನ ಮಾಡಬೇಕು. ಕನ್ನಡ ಸಾಹಿತ್ಯ ಲೋಕಕ್ಕೆ ವಚನ ಸಾಹಿತ್ಯದ ಕೊಡುಗೆ ಅಪಾರ ಎಂದರು.

ವಚನ ಸಾಹಿತ್ಯ ಹಾಗೂ ಶರಣ ಸಾಹಿತ್ಯದ ಸಾಮಾಜಿಕ ಮೌಲ್ಯಗಳು ಕುರಿತು ಡಾ ಸವಿತಾ ಝುಳಕಿ ಉಪನ್ಯಾಸ ನೀಡಿದರು.

ಯಾದಗಿರಿ ಶ್ರೀ ಮೈಲಾರಲಿಂಗೇಶ್ವರನ ಚರಿತ್ರೆ ಕುರಿತು ಕವಿಯಿತ್ರಿ ಶಾಂತಾ ಬಿರಾದಾರ ಉಪನ್ಯಾಸ ನೀಡಿ ಯಾದಗಿರಿ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಮೈಲಾರಲಿಂಗೇಶ್ವರ ದೇವಾಲಯ 15 ನೇ ಶತಮಾನಕ್ಕೆ ಸೇರಿದೆ ಎಂದರು.

ಸಿದ್ದಲಿಂಗ ಸ್ವಾಮೀಜಿ,ಸಾಹಿತಿ ಅಶೋಕ ಹಂಚಲಿ. ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ. ತಾಲೂಕ ಕಸಾಪ ಅಧ್ಯಕ್ಷ ಶಿವಾನಂದ ಡೋಣೂರ ಮಾತನಾಡಿದರು.

ಪ್ರಕಾಶ ಗಿರಿಮಲ್ಲಪ್ಪ ಬೆಣ್ಣೂರ. ಈರನಗೌಡ ಶಿವನಗೌಡ ಪಾಟೀಲ. ವೇದಿಕೆಯ ಮೇಲಿದ್ದರು.

ನಾಟಕ ಬರಹಗಾರರ ಕವಿ ವಾಯ್ ಎಚ್ ಅಂಗಡಗೇರಿ ಇವರನ್ನು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಕಾಲೇಜನಲ್ಲಿ ಜರುಗಿದ ಜಾನಪದ ಉತ್ಸವ 2026 ಹಾಗೂ ಮೋಜಿನ ಆಟಗಳ ಮುಕ್ತಾಯ ಸಮಾರಂಭದ ಮತ್ತು ವಿಧ್ಯಾಥಿ9ಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮ ಜರುಗಿತು.

ಶಾಖಾದೇವಿ ಲಮಾಣಿ ಪ್ರಾಥಿ9ಸಿದರು. ಯಮನಪ್ಪ ಪವಾರ ಸ್ವಾಗತಿಸಿದರು.ಬಿ ವಿ ಚಕ್ರಮನಿ ಪರಿಚಯಿಸಿ ಗೌರವಿಸಿದರು. ಶಿವು ಮಡಕೇಶ್ವರ ಪ್ರಾಸ್ತಾವಿಕ ಮಾತನಾಡಿದರು. ಕಾವೇರಿ ಅಡಗಿಮನಿ ನಿರೂಪಿಸಿದರು. ಜ್ಯೋತಿ ಕುಂಬಾರ ವಂದಿಸಿದರು.

# ಜಲ ಸಂಕಲ್ಪ ಅಭಿಯಾನದಡಿ ಕೆರೆಗಳ ಸಂರಕ್ಷಣೆ ಮಾಡಲಾಗುವುದು: ಜಯಕುಮಾರ್

• ಮಲ್ಲಮ್ಮ ನುಡಿ ವಾರ್ತೆ, ಚಿಕ್ಕಬಳ್ಳಾಪುರ



ನಗರದ ಕಂದವಾರ ಕೆರೆಗೆ ಹರಿಸಲಾಗುತ್ತಿರುವ ಬೆಂಗಳೂರಿನ ಹೆಬ್ಬಾಳ□ನಾಗವಾರ ಕೆರೆಯ ಸಂಸ್ಕರಿಸಿದ ಎಚ್ ಎನ್ ವ್ಯಾಲಿ ನೀರನ್ನು ಮೂರನೇ ಹಂತದ ಶುದ್ಧೀಕರಣಕ್ಕೆ ಒಳಪಡಿಸಬೇಕು ಎಂಬ ಒತ್ತಾಯ ಒಂದೆಡೆ ಜೋರಾಗಿದ್ದು, ಹೋರಾಟಗಳು ನಡೆಯುತ್ತಿರುವ ನಡುವೆಯೇ ಜೈ ಫೌಂಡೇಶನ್ ಕೆರೆಗಳ ಸಂರಕ್ಷಣೆಗೆ ಮುಂದಾಗಿದೆ ಜಲ ಸಂಕಲ್ಪ ಅಭಿಯಾನದಡಿ ಕೆರೆಗಳ ಸಂರಕ್ಷಣೆ ಮಾಡಲಾಗುವುದು ಎಂದು ಜೈ ಫೌಂಡೇಶನ್ ಅಧ್ಯಕ್ಷ ಜಯಕುಮಾರ್ ತಿಳಿಸಿದ್ದಾರೆ.

ನಗರದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು,ನೀರಿನ ಬಗ್ಗೆ ಆಧಾರರಹಿತ ಆರೋಪಗಳನ್ನು ಮಾಡಬಾರದು.ನೀರಿನ ಗುಣಮಟ್ಟದ ಕುರಿತು ಅನುಮಾನ ಇದ್ದರೆ ಮಾದರಿಗಳನ್ನು ಪರೀಕ್ಷೆಗೆ ಕಳುಹಿಸಿ ವೈಜ್ಞಾನಿಕ ವರದಿ ಆಧರಿಸಿ ಮಾತನಾಡಬೇಕು. ಜನರಲ್ಲಿ ಅನಗತ್ಯ ಭೀತಿ ಮೂಡಿಸುವುದು ತಪ್ಪು ನೀರಿನ ಬಗ್ಗೆ ನಿಜವಾದ ಕಾಳಜಿ ಇರುವವರು ‘ಜಲ ಸಂಕಲ್ಪ’ ಅಭಿಯಾನಕ್ಕೆ ಕೈಜೋಡಿಸಿ, ಕೆರೆಗಳನ್ನು ಸ್ವಚ್ಛಗೊಳಿಸುವಲ್ಲಿ ಪಾಲ್ಗೊಳ್ಳಬೇಕು

ನೀರಿನ ವಿಷಯವನ್ನು ರಾಜಕೀಯಕ್ಕೆ ಬಳಸಬಾರದು ಬದಲಾಗಿ ನೀರಿನ ಅಶುದ್ಧತೆ ಬಗ್ಗೆ ಎಲ್ಲರೂ ಚಿಂತಿಸಬೇಕಿದೆ ಒಳ್ಳೆಯ ಉದ್ದೇಶದಿಂದ ಜೈ ಫೌಂಡೇಶನ್ ವತಿಯಿಂದ

‘ಜಲ ಸಂಕಲ್ಪ’ ಅಭಿಯಾನ ಆರಂಭಿಸಲಾಗುವುದು ನೀರು ಕಲುಷಿತವಾಗಿದೆ ಎಂಬ ಆರೋಪಗಳು ಇದ್ದರೂ,ಅದನ್ನು ಪಕ್ಕಕ್ಕೆ ಇಟ್ಟು ಕೆರೆಗಳ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಜಯ್ ಕುಮಾರ್ ಮನವಿ ಮಾಡಿದರು.

ಕೆರೆಗಳಲ್ಲಿ ತ್ಯಾಜ್ಯ ಹಾಕುವುದರಿಂದ ನೀರು ಕಲುಷಿತವಾಗುವುದು ಸಾಮಾನ್ಯ.ಇದಕ್ಕೆ ಕಡಿವಾಣ ಹಾಕುವ ಜೊತೆಗೆ ಜನರಲ್ಲಿ ಜಾಗೃತಿ ಮೂಡಿಸುವುದು ಅತ್ಯಂತ ಮುಖ್ಯ.ಈ ಉದ್ದೇಶದಿಂದ ಚಿಕ್ಕಬಳ್ಳಾಪುರದಲ್ಲಿ ಪ್ರಾಯೋಗಿಕವಾಗಿ ‘ಜಲ ಸಂಕಲ್ಪ’ ಅಭಿಯಾನ ಆರಂಭಿಸಲಾಗುತ್ತಿದ್ದು,ಇದರಿಂದ ಇತರ ಜಿಲ್ಲೆಗಳಿಗೂ ಮಾದರಿಯಾಗಲಿದೆ ಎಂದು ತಿಳಿಸಿದರು.

ಎಚ್ ಎನ್ ವ್ಯಾಲಿ ನೀರನ್ನು ಮೂರನೇ ಹಂತದ ಶುದ್ಧೀಕರಣಕ್ಕೆ ಒಳಪಡಿಸುವ ಕುರಿತು ಸಣ್ಣ ನೀರಾವರಿ ಸಚಿವರಿಗೆ ಮನವಿ ಸಲ್ಲಿಸಲಾಗಿದೆ.ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.ಇದರ ಜೊತೆಗೆ ನಾಗರಿಕರ ಜವಾಬ್ದಾರಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಜಲ ಸಂಕಲ್ಪ ವಿಶೇಷ ಅಭಿಯಾನ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಈ ಅಭಿಯಾನದಡಿ ಕೆರೆಗಳಲ್ಲಿ ಜಮಾಯಿಸಿರುವ ಜಡ್ಡು ತೆರವುಗೊಳಿಸುವುದು,ಸ್ವಚ್ಛತೆ ಕಾಪಾಡುವುದು ಸೇರಿದಂತೆ ವಿವಿಧ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ.ಕೆರೆಗಳನ್ನು ಸರಿಯಾಗಿ ಸಂರಕ್ಷಿಸಿದರೆ ನೀರಿನ ಕಲುಷಿತತೆ ತಡೆಯಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಚಿಕ್ಕಬಳ್ಳಾಪುರ ಜಿಲ್ಲೆಯ 44 ಕೆರೆಗಳಿಗೆ ಹರಿಸಲಾಗುತ್ತಿರುವ ಎಚ್ ಎನ್ ವ್ಯಾಲಿ ನೀರಿನ ಹಿನ್ನಲೆಯಲ್ಲಿ,ಎಲ್ಲಾ ಕೆರೆಗಳ ಸಂರಕ್ಷಣೆಗಾಗಿ ಸಮಗ್ರ ಯೋಜನೆ ರೂಪಿಸಲಾಗಿದೆ. ಇದು ಕೇವಲ ಜೈ ಫೌಂಡೇಶನ್‌ನ ಕೆಲಸವಲ್ಲ,ಜಿಲ್ಲೆಯ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ ಯೋಜನೆ ಮೂಲಕ ಯಾವುದೇ ವೈಯಕ್ತಿಕ ಲಾಭ ಪಡೆಯುವ ಉದ್ದೇಶವಿಲ್ಲ.ಜಲಮೂಲಗಳ ಸಂರಕ್ಷಣೆ ಮತ್ತು ಮುಂದಿನ ಪೀಳಿಗೆಗೆ ಆರೋಗ್ಯಕರ ಜೀವನ ಒದಗಿಸುವುದು ಮುಖ್ಯ ಗುರಿಯಾಗಿದೆ. ವರ್ಷಗಳಿಂದ ಚಿಕ್ಕಬಳ್ಳಾಪುರಕ್ಕೆ ನೀರು ಒದಗಿಸುತ್ತಿರುವ ಕಂದವಾರ ಕೆರೆಯನ್ನು ಪ್ಲಾಸ್ಟಿಕ್ ಮುಕ್ತ, ಕಲುಷಿತ ಮುಕ್ತ ಮತ್ತು ಜಡ್ಡು ಮುಕ್ತವಾಗಿಸುವ ಸಂಕಲ್ಪ ಹೊಂದಿದ್ದೇವೆ ಎಂದು ಹೇಳಿದರು.ಇನ್ನೊಂದು ಯೋಜನೆಯಾಗಿ,ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರತಿ ಗ್ರಾಮದಲ್ಲೂ ಜಯ ಫೌಂಡೇಶನ್ ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲು ಮುಂದಾಗಲಾಗಿದೆ.ಈಗಾಗಲೇ ಸಂಸದ ಡಾ. ಕೆ. ಸುಧಾಕರ್ ಅವರ ಸಾಯಿ ಕೃಷ್ಣ ಚಾರಿಟೇಬಲ್ ಟ್ರಸ್ಟ್ ಮೂಲಕ ನೂರಕ್ಕೂ ಹೆಚ್ಚು ಗ್ರಾಮಗಳಲ್ಲಿ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ಅದರ ಸಹಯೋಗದಲ್ಲಿ

ಈ ಕಾರ್ಯಕ್ಕೆ ಜೈ ಫೌಂಡೇಶನ್ ಸಹ ಕೈಜೋಡಿಸಿ,ಇನ್ನಷ್ಟು ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗುವುದು ಎಂದು ತಿಳಿಸಿದರು.

# ಗ್ರಾಮ ಒನ್: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ

ಜಿಲ್ಲೆಯ ಯಾದಗಿರಿ ತಾಲೂಕಿನ ಪಂಚಾಯತಿ ಹೊನಗೇರಾದಲ್ಲಿ, ಗುರುಮಠಕಲ್ ತಾಲೂಕಿನ ಪಂಚಾಯತಿ ಪಸಪೋಲ್ ಹಾಗೂ ಕೊಂಕಲ್‌ದಲ್ಲಿ ಶಹಾಪೂರ ತಾಲೂಕಿನ ಪಂಚಾಯತಿ ಅಣಬಿದಲ್ಲಿ ಗ್ರಾಮ ಒನ್ ಅರ್ಜಿ ಆಹ್ವಾನಿಸಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ.

ಗ್ರಾಮ ಒನ್ ಇದು ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾದ ಸೇವಾಸಿಂಧು ಯೋಜನೆ ಅಡಿಯಲ್ಲಿ ರೂಪಿಸಲಾಗಿದೆ. ಸರ್ಕಾರದ ಸೇವೆಗಳನ್ನು ಮನೆಬಾಗಿಲಿಗೆ ತಲುಪಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದ್ದು, ಈ ಯೋಜನೆ ಅಡಿಯಲ್ಲಿ 750ಕ್ಕೂ ಹೆಚ್ಚು ನಾಗರೀಕ ಸೇವೆಗಳನ್ನು ಪಡೆಯಲು ಅರ್ಜಿಗಳನ್ನು ಸ್ವೀಕರಿಸಲಾಗುವುದು, ಅದೇ ರೀತಿ ಸಕಾಲ, ಮಾಹಿತಿ ಹಕ್ಕು ಅಧಿನಿಯಮ, ಬ್ಯಾಂಕಿಂಗ್ ಸೇವೆಗಳು ಹಾಗೂ ಸಾರ್ವಜನಿಕರ ಕುಂದುಕೊರತೆ ನಿವಾರಣೆ ಕೋರಿ ಅರ್ಜಿಗಳನ್ನು ಸ್ವೀಕರಿಸಲಾಗುವುದು, ವಾರದ ಎಲ್ಲಾ ಏಳು ದಿನಗಳಲ್ಲಿ ಗ್ರಾಮ ಒನ್ ಕೇಂದ್ರಗಳು ಬೆಳಿಗ್ಗೆ 8 ರಿಂದ ರಾತ್ರಿ 8 ಗಂಟೆಯ ವರೆಗೆ ಕಾರ್ಯನಿರ್ವಹಿಸಲಿವೆ. ಈ ಯೋಜನೆಯನ್ನು ಈಗಾಗಲೇ ಅನುಷ್ಠಾನಗೊಳಿಸಿದ್ದು, ಸದ್ಯ ಸ್ಥಾಪನೆಗಾಗಿ ಬಾಕಿ ಇರುವ ಗ್ರಾಮ ಒನ್ ಕೇಂದ್ರಗಳಿಗೆ ಕಲಬುರಗಿ ವಿಭಾಗದ, ಪಾಲುದಾರಿಕೆ ಸಂಸ್ಥೆವತಿಯಿಂದ ಆಸಕ್ತಿಯುಳ್ಳ ಅಭ್ಯರ್ಥಿಗಳು ವೆಬ್‌ಸೈಟ್ sevasindhuservices.karnataka.gov.in/directApply.do?serviceId=2631ನಲ್ಲಿ 2026ರ ಮೇ 15ರ ಸಂಜೆ 6 ಗಂಟೆಯ ಒಳಗೆ ಅರ್ಜಿಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಪ್ಲೋಮಾ ಪ್ರವೇಶಾತಿ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿಯ ಕರ್ನಾಟಕ ಜರ್ಮನ್ ತಾಂತ್ರಿಕ ಸಂಸ್ಥೆ (ಕೆ.ಜಿ.ಟಿ.ಟಿ.ಐ.) ಯಲ್ಲಿ 2026–27ನೇ ಸಾಲಿನ ಡಿಪ್ಲೋಮಾ ಇನ್ ಟೂಲ್ ಆಂಡ್ ಡೈಮೇಕಿಂಗ್ (ಡಿ.ಟಿ.ಡಿ.ಎಮ್.) ಕೋರ್ಸಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಎಸ್.ಎಸ್.ಎಲ್.ಸಿ. ಪಾಸಾದ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಕರ್ನಾಟಕ ಜರ್ಮನ್ ತಾಂತ್ರಿಕ ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

ಈ ಕೋರ್ಸ್‌ನ ಅವಧಿ 4 ವರ್ಷ ಇದ್ದು, 3 ವರ್ಷ ಸಾಂಸ್ಥಿಕ ತರಬೇತಿ ಇರುತ್ತದೆ. ಅಂತಿಮ ವರ್ಷದಲ್ಲಿ ಕಡ್ಡಾಯವಾಗಿ ಸ್ಟೈಫಂಡ್ (ಖಠಿಔಜಟಿಜ) ಸಹಿತ ಕೈಗಾರಿಕಾ ತರಬೇತಿ ಒಳಗೊಂಡಿರುತ್ತದೆ. ಈ ಕೋರ್ಸ್ ಎಐಸಿಟಿಇ ಯಿಂದ ಅನುಮೋದನೆ ದೊರೆತಿದ್ದು, ತಾಂತ್ರಿಕ ಶಿಕ್ಷಣ ಇಲಾಖೆ ನೀಡುವ ಡಿಪ್ಲೋಮಾ ಇನ್ ಮೆಕ್ಯಾನಿಕಲ್ ಇಂಜಿನಿಯರಿಂಗ್ ಕೋರ್ಸ್‌ಗೆ ತತ್ಸಮಾನವಾಗಿದೆ.

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬೆಂಗಳೂರಿನಿಂದ ರೈಲಿನ ಮೂಲಕ ಮೇ 1 ರಂದು ಶುಕ್ರವಾರ ಬೆಳಿಗ್ಗೆ 5.45 ಗಂಟೆಗೆ ಕಲಬುರಗಿಗೆ ಆಗಮಿಸಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

ಮೇ 2 ರಿಂದ 4 ರವರೆಗೆ ಕಲಬುರಗಿ ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು. ಮೇ 5 ರಂದು ಬೆಳಿಗ್ಗೆ 11.30 ಗಂಟೆಗೆ ಸೇಡಂ ತಾಲೂಕಿನ ಚಿಟಕನಪಲ್ಲಿ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್‌ರವರ ಮೂರ್ತಿ ಅನಾವರಣ ಕಾರ್ಯಕ್ರಮ ಹಾಗೂ ಮಧ್ಯಾಹ್ನ 1 ಗಂಟೆಗೆ ಸೇಡಂ ತಾಲೂಕಿನ ರಂಜೋಳ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್‌ರವರ ಮೂರ್ತಿ ನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಮೇ 6 ರಂದು ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಅಂದು ರಾತ್ರಿ 8.45 ಗಂಟೆಗೆ ಕಲಬುರಗಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಪೂರ್ವಭಾವಿ ತರಬೇತಿಗೆ ಆಯ್ಕೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

2025–26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಲಬುರಗಿ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಭಾಗದಲ್ಲಿನ ಅಭ್ಯರ್ಥಿಗಳಿಗೆ ಐ.ಎ.ಎಸ್ ಹಾಗೂ ಕೆ.ಎ.ಎಸ್. ಪರೀಕ್ಷೆಗಳ ಪೂರ್ವಭಾವಿ ತರಬೇತಿಗೆ ಆಯ್ಕೆಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಪರೀಕ್ಷಾ ವೇಳಾಪಟ್ಟಿ ಇಂತಿದೆ. 2026ರ ಮೇ 7 ರಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಅರ್ಹ ಅಭ್ಯರ್ಥಿಗಳು https://kalaburagi.nic.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2026ರ ಮೇ 21 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಮೇ 28 ರಿಂದ ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳಬೇಕು. ಮೇ 31 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಅಭ್ಯರ್ಥಿಗಳು ಸಾಮಾನ್ಯ ಅರ್ಹತೆ, ಮೀಸಲಾತಿ ವಿವರಗಳನ್ನು https://kalaburagi.nic.in ವೆಬ್‌ಸೈಟ್‌ದಿಂದ ಪಡೆಯಬಹುದಾಗಿದೆ.

# ಮೊರಾರ್ಜಿ ಶಾಲೆಯ ಹೀನಾ ಕೌಸರಗೆ ಶೇ. 94.72 ಸಾಧನೆ

• ಮಲ್ಲಮ್ಮ ನುಡಿ, ಹುಣಸಗಿ



ತಾಲೂಕಿನ ಮೊಟ್ನಳ್ಳಿ ಮೊರಾರ್ಜಿ ಶಾಲೆಯ ವಿದ್ಯಾರ್ಥಿನಿ ಹೀನಾ ಕೌಸರ ಅವರು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿ ತಂದಿದ್ದಾರೆ. 625 ಅಂಕಗಳಿಗೆ 592 ಅಂಕಗಳನ್ನು ಪಡೆದು ಶೇ. 94.72 ಫಲಿತಾಂಶ ಸಾಧಿಸಿದ್ದಾರೆ.


ವಿಷಯವಾರು ಪಡೆದ ಅಂಕಗಳು ಹೀಗಿವೆ: ಕನ್ನಡ 119, ಇಂಗ್ಲಿಷ್ 99, ಹಿಂದಿ 100, ಗಣಿತ 90, ವಿಜ್ಞಾನ 85, ಸಮಾಜ ವಿಜ್ಞಾನ 99. ಎಲ್ಲಾ ವಿಷಯಗಳಲ್ಲೂ ಸಮತೋಲನ ಸಾಧನೆ ಮಾಡಿರುವ ಹೀನಾ ಕೌಸರ ಅವರ ಸಾಧನೆಗೆ ಶಿಕ್ಷಕರು ಹಾಗೂ ಪಾಲಕರು ಸಂತೋಷ ವ್ಯಕ್ತಪಡಿಸಿದ್ದಾರೆ.

ಈ ಸಾಧನೆಗೆ ಶಾಲೆಯ ಮುಖ್ಯಗುರುಗಳು ಮತ್ತು ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದು, ವಿದ್ಯಾರ್ಥಿನಿಯ ಪರಿಶ್ರಮ ಮತ್ತು ನಿಯಮಿತ ಅಭ್ಯಾಸವೇ ಯಶಸ್ಸಿಗೆ ಕಾರಣ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸದ್ದಾಂ ಟೊಣ್ಣೂರ ಮತ್ತು ಕಾಶಿಮಸಾಬ್ ಟೊಣ್ಣೂರ ಸೇರಿದಂತೆ ಹಲವರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ಹೀನಾ ಕೌಸರ ಅವರ ಈ ಸಾಧನೆ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಗುರಿಗಳನ್ನು ಸಾಧಿಸುವ ವಿಶ್ವಾಸ ವ್ಯಕ್ತವಾಗಿದೆ.

# ರೇಕುಳಗಿ ಮೌಂಟ್‌ನಲ್ಲಿ ಬುದ್ಧ ಪೂರ್ಣಿಮೆ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ



ತಾಲೂಕಿನ ಮನ್ನಾಎಖೇಳ್ಳಿ ಗ್ರಾಮದ ಹೊರವಲಯದಲ್ಲಿರುವ ರೇಕುಳಗಿ ಮೌಂಟ್ ಮೇಲಿನ ಅನಾಥಪಿಂಡಕ ಬುದ್ಧ ವಿಹಾರದಲ್ಲಿ ಪ್ರತಿ ವರ್ಷದಂತೆ ಈ ವರ್ಷ ಕೂಡ 2570ನೇ ವೈಶಾಖ ಬುದ್ಧ ಪೂರ್ಣಿಮೆ (ಬುದ್ಧ ಜಯಂತಿ) ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ಬಿಕ್ಕು ರೇವತ್ ತಿಳಿಸಿದ್ದಾರೆ. ಇಂದು ಬೆಳಿಗ್ಗೆ 5ಗಂಟೆಗೆ ಭಿಕ್ಕು ಸಂಘದಿಂದ ಬುದ್ಧ ವಂದನಾ ನಂತರ 7:30 ಗಂಟೆಗೆ ಧಮ್ಮ ಧ್ವಜಾರೋಹಣ ಹಾಗೂ ಮುಂಜಾನೆ 10 ಗಂಟೆಯಿಂದ ಬೌದ್ಧ ಭಿಕ್ಕುಗಳ ನೇತೃತ್ವದಲ್ಲಿ ಸಾಮೂಹಿಕ ಬುದ್ಧ ವಂದನಾ, ಧಮ್ಮ ಪ್ರವಚನ ಕಾರ್ಯಕ್ರಮ ನಡೆಯಲಿವೆ. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ : ವಿಹಾರದ ಭಿಕ್ಕು ರೇವತ್, ಭಿಕ್ಕು ಧರ್ಮಪಾಲ, ಭಿಕ್ಕುಣಿ ಮಹಾ ಪ್ರಜಾಪತಿ ರವರು ವಹಿಸಲಿದ್ದಾರೆ ಆದ ಕಾರಣ ಬೌದ್ಧ ಉಪಾಸಕರು ಮತ್ತು ಉಪಾಸಕಿಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಭಿಕ್ಕು ರೇವತ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.ಕೆ.ಶಿ ಜಿಲ್ಲಾ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಮೇ.03ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅವರು ಅಂದು ಬೆಳಿಗ್ಗೆ 11.30ಕ್ಕೆ ಹೊಸಪೇಟೆ ತಾಲೂಕಿನ ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಹೆಲಿಪ್ಯಾಡ್ ಆವರಣದಿಂದ ನಿರ್ಗಮಿಸಿ, ಮಧ್ಯಾಹ್ನ 12ಗಂಟೆಗೆ ರಾಯಚೂರು ಜಿಲ್ಲೆಯ ಸಿಂಧನೂರಿನ ತಾಲೂಕು ಕ್ರೀಡಾಂಗಣಕ್ಕೆ ಆಗಮಿಸಿ, ವಿಧಾನ ಪರಿಷತ್ ಸದಸ್ಯರಾದ ಬಸನಗೌಡ ಬಾದರ್ಲಿ ಇವರ ಶ್ರೀ.ಬಸನಗೌಡ ಫೌಂಡೇಷನ್ ಸಿಂಧನೂರು ವತಿಯಿಂದ ಹಮ್ಮಿಕೊಂಡಿರುವ ಉಚಿತ ಸಾಮೂಹಿಕ ವಿವಾಹ ಹಾಗೂ ಇತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

# ಹೇಮರೆಡ್ಡಿ ಮಲ್ಲಮ್ಮ ಜಯಂತಿ ಪೂರ್ವಭಾವಿ ಸಭೆ



• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಏಪ್ರಿಲ್ 30ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹೇಮರೆಡ್ಡಿ ಮಲ್ಲಮ್ಮ ಜಯಂತಿ ಮೇ.10ರಂದು ಆಚರಣೆ ಮಾಡಲಾಗುವುದು. ಜಯಂತಿ ದಿನದಂದು ಜಿಲ್ಲೆಯ ಎಲ್ಲ ಸರ್ಕಾರಿ ಕಚೇರಿ, ತಾಲೂಕು ಕೇಂದ್ರಗಳಲ್ಲಿ ಮತ್ತು ತಾಲೂಕು ಕಚೇರಿ, ಗ್ರಾಮ ಪಂಚಾಯತ್, ಶಾಲಾ, ಕಾಲೇಜು ಹಾಗೂ ವಸತಿ ನಿಲಯಗಳಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಡ್ಡಾಯವಾಗಿ ಆಚರಣೆ ಮಾಡಬೇಕಾಗಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಜಿಲ್ಲಾ ಕೇಂದ್ರದಲ್ಲಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆಗಾಗಿ ಸಂಬಂಧಿಸಿದ ಇಲಾಖೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಬೇಕು. ಮೇ 10ರ ಬೆಳಗ್ಗೆ 10 ಗಂಟೆಗೆ ನಗರದ ಪಂಡಿತ ಸಿದ್ಧರಾಮ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಜಯಂತಿ ಆಚರಣೆಗೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಬೇಕು. ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದರು. ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಸರಕಾರಿ ಆಸ್ಪತ್ರೆಯಲ್ಲಿ ಪತ್ನಿಗೆ ಹೆರಿಗೆ ಮಾಡಿಸಿ, ಸರಳತೆ ಮೆರದ ಜಿ.ಪಂ ಸಿಇಒ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು



ಸರಕಾರಿ ಆಸ್ಪತ್ರೆಯಲ್ಲಿ ಆರ್ಥಿಕವಾಗಿ ದುರ್ಬಲರು ಮಾತ್ರ ಸೇವೆ ಪಡೆಯುತ್ತಾರೆ ಎಂದು ಅಸಡ್ಡೆ ತೋರುವವರಿಗೆ ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ತಮ್ಮ ಪತ್ನಿಯ ಹೆರಿಗೆಯನ್ನು ಏಪ್ರಿಲ್ 26ರ ಭಾನುವಾರ ದಂದು ರಾಯಚೂರು ನಗರದ ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿ, ಸರಳತೆ ಮೆರಯುವ ಮೂಲಕ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವಂತೆ ಸಂದೇಶ ರವಾನಿಸಿದ್ದಾರೆ.

ನಗರದಲ್ಲಿ ಹಲವಾರು ಖಾಸಗಿ ಅಸ್ಪತ್ರೆಗಳಿದ್ದರೂ ಸಹ ಮನಸ್ಸು ಮಾಡದೆ ಸರಕಾರದ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಕೊಠಡಿ, ವಾರ್ಡ್, ನುರಿತ ತಜ್ಞ ವೈದ್ಯರ ಸೇವೆ, ನಿಯಮಿತವಾಗಿ ನಿಗಾ ವಹಿಸುವ ಸಿಬ್ಬಂದಿಗಳ ಸೇವೆಯನ್ನು ಪ್ರತಿಯೊಬ್ಬರೂ ಪಡೆಯಲಿ ಎಂಬ ಸದುದ್ದೇಶದಿಂದ ತಮ್ಮ ಪತ್ನಿಯ ಹೆರಿಗೆಯನ್ನು ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿದ್ದು, ಅವರ ಪತ್ನಿ ಗಂಡು ಮಗುವಿಗೆ ಜನ್ಮ ನೀಡಿದ್ದಾರೆ. ಪ್ರಸ್ತುತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಆಧೀನದ ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆಯಲ್ಲಿದ್ದು, ತಾಯಿ ಮಗು ಅರೋಗ್ಯವಾಗಿದ್ದಾರೆ.

ಸರಕಾರದ ಸೌಲಭ್ಯ ಪ್ರತಿಯೊಬ್ಬರು ಪಡೆಯಿರಿ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ಸರಕಾರವು ಗ್ರಾಮೀಣ ಪ್ರದೇಶ ಸೇರಿದಂತೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ತಾಯಿ ಮಗುವಿನ ಆರೈಕೆಗಾಗಿ ನುರಿತ ಹೆರಿಗೆ ತಜ್ಞರು, ಸುಸಜ್ಜಿತ ಹೆರಿಗೆ ಕೊಠಡಿ, ಆಧುನಿಕ ಪರಿಕರಗಳು, ಸೂಕ್ತ ಪ್ರಯೋಗಾಲಯ ಪರೀಕ್ಷೆಗಳು, ಸಕಾಲದಲ್ಲಿ ಔಷಧೋಪಚಾರ, ಪೌಷ್ಟಿಕ ಆಹಾರ ಒದಗಿಸುವುದನ್ನು ಖುದ್ದು ಪರಿಶೀಲನೆಯಲ್ಲಿ ಕಂಡು ಬರುತ್ತಿರುವುದರಿಂದ ಸರಕಾರದ ಸೌಲಭ್ಯಗಳು ಜನ ಸಾಮಾನ್ಯರು ಪಡೆಯಬೇಕು. ತಾಯಿ ಮಕ್ಕಳ ಆಸ್ಪತ್ರೆ ಅಥವಾ ರಿಮ್ಸ್ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸುವ ನಿರ್ಧಾರ ಕೈಗೊಂಡಿದ್ದು, ರಿಮ್ಸ್ನಲ್ಲಿ ಹೆರಿಗೆಯಾಗಿದು, ಪ್ರಸ್ತುತ ಮುಂದಿನ ಆರೈಕೆಗೆ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆ ಪಡೆಯುತ್ತಿದ್ದಾರೆ. ಇದು ವೈಯಕ್ತಿಕವಾಗಿ ನಮಗೆ ಹೆಮ್ಮೆಯ ವಿಷಯವಾಗಿದೆ ಎಂದರು.

# ಒಳ ಮೀಸಲಾತಿ: ಬಿಜೆಪಿ ಜೆಡಿಎಸ್‌ಯಿಂದ ಗೊಂದಲ ಸೃಷ್ಟಿ



• ಮಲ್ಲಮ್ಮ ನುಡಿ ವಾರ್ತೆ, ಪಿರಿಯಾಪಟ್ಟಣ

ರಾಜ್ಯದಲ್ಲಿ ಸಮರ್ಪಕವಾಗಿ ಬಗೆಹರಿದಿರುವ ಒಳ ಮೀಸಲಾತಿ ವಿಷಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಗೊಂದಲ ಸೃಷ್ಟಿಸಲು ಮುಂದಾಗಿದೆ ಯಾರು ಕಿವಿ ಕೊಡಬಾರದು ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆಎಚ್ ಮುನಿಯಪ್ಪ ತಿಳಿಸಿದರು.

ಪಟ್ಟಣದಲ್ಲಿ ಕರ್ನಾಟಕ ಮಾದರ ಮಹಾಸಭಾ ಮತ್ತು ಆದಿ ಜಾಂಬವ ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ಗುರುವಾರ ನಡೆದ ಡಾ. ಜಗಜೀವನ್ ರಾಮ್ ರವರ 119ನೇ ಜಯಂತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜ ಕಲ್ಯಾಣ ಸಚಿವ ಎಚ್ ಸಿ ಮಹದೇವಪ್ಪ ರವರ ನೇತೃತ್ವದಲ್ಲಿ ಸೇರ್ಪಡೆಯಾಗಿರುವ ನೂರೆಂದು ಜಾತಿಗಳನ್ನು ಆದರಿಸಿ ಪ್ರತಿಯೊಂದು ಸಂಖ್ಯೆಯಲ್ಲೂ ಲೆಕ್ಕಾಚಾರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದವರನ್ನು ಒಳಗೊಂಡಂತೆ ಇದ್ದ ಒಳ ಮೀಸಲಾತಿ ವಿವಾದವನ್ನು ಸಂಪೂರ್ಣವಾಗಿ ಬಗೆಹರಿಸಲಾಗಿದೆ.

ಆದರೆ ವಿರೋಧ ಪಕ್ಷಗಳು ಬೆನ್ನಿಂದೆ ಇಲ್ಲಸಲ್ಲದನ್ನು ಹೇಳಿಕೊಂಡು ರಾಜಕೀಯ ಮಾಡಲು ಯತ್ನಿಸುತ್ತಿದ್ದಾರೆ ಆದ್ದರಿಂದ ಯಾವುದೇ ಗೊಂದಲಕ್ಕೆ ಅವಕಾಶ ನೀಡದೆ ಎಡ ಮತ್ತು ಬಲಗೈ ಸಮುದಾಯವು ಹಿಂದಿನಂತೆ ಒಗ್ಗಟ್ಟಿನಿಂದ ಇರಬೇಕು ಮತ್ತು ಸಿದ್ದರಾಮಯ್ಯರವರ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಎಲ್ಲರೂ ಬೆಂಬಲ ಸೂಚಿಸಬೇಕೆಂದು ಮನವಿ ಮಾಡಿದರು. ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ್ ಅವರು ವಿಶ್ವವೇ ಮೆಚ್ಚಿಕೊಳ್ಳುವಂತಹ ಸಂವಿಧಾನ ನೀಡಿದ್ದಾರೆ ಅದರ ಆಸೆಗಳನ್ನು ತಮ್ಮ ಅಧಿಕಾರದ ಅವಧಿಗಳಲ್ಲೆಲ್ಲ ಜಾರಿಗೊಳಿಸಿದ ಏಕೈಕ ವ್ಯಕ್ತಿ ಡಾ. ಬಾಬು ಜಗಜೀವನ್ ರಾಮ್ ರವರಾಗಿದ್ದಾರೆ ಎಂದು ತಿಳಿಸಿದರು.

ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ ವೆಂಕಟೇಶ್ ಮಾತನಾಡಿ ದೇಶದ ಆಹಾರ ಸುಧಾರಣೆ ವಿಷಯದಲ್ಲಿ ಹಲವಾರು ನಿಯಮಗಳನ್ನು ತಂದು ಹಸಿವನ್ನು ನೀಗಿಸುವಲ್ಲಿ ಬಾಬು ಜಗಜೀವನ್ ರವರು ಮುಖ್ಯ ಪಾತ್ರರಾಗಿದ್ದಾರೆ.

ಅಲ್ಲದೆ ಕೃಷಿ ಕ್ಷೇತ್ರದಲ್ಲಿ ಬಹಳಷ್ಟು ಸುಧಾರಣೆ ಗೊಳಿಸಿ ಜನ ಮಣ್ಣನೆ ಪಡೆದು ಹಸಿರು ಕ್ರಾಂತಿಯ ಹರಿಕಾರ ಎನಿಸಿಕೊಂಡು ಆಹಾರದ ವಿಷಯದಲ್ಲಿ ದೇಶವು ಸ್ವಾವಲಂಬಿಯಾಗಲು ಬಾಬು ದೇಶದಲ್ಲಿ ಮುಖ್ಯರಾದವರು ಎಂದು ವಿವರಿಸಿದರು. ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರ ನೇತೃತ್ವದಲ್ಲಿ ನಡೆಯುತ್ತಿರುವ ಕಾಂಗ್ರೆಸ್ ಪಕ್ಷದ ನೇತೃತ್ವದ ಸರ್ಕಾರದ ಪ್ರಗತಿಯನ್ನು ಸಹಿಸಿಕೊಳ್ಳದೆ ಬಿಜೆಪಿ ನಾಯಕರು ಇಲ್ಲಸಲ್ಲದನ್ನು ನೆಪ ವಡ್ಡಿ ಮೀಸಲಾತಿ ವಿಚಾರದಲ್ಲಿ ಅಪಪ್ರಚಾರ ಮಾಡುತ್ತಿದ್ದಾರೆ ಆದ್ದರಿಂದ ಯಾರು ಕಿವಿ ಕೊಡಬಾರದು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ತು ಸದಸ್ಯ ಡಾ. ಡಿ ತಿಮ್ಮಯ್ಯ. ಮಾಜಿ ವಿಧಾನ ಪರಿಷತ್ತು ಸದಸ್ಯ ಸಿ ರಮೇಶ್. ಮಾಜಿ ಮಹಾ ಪೌರರಾದ ನಾರಾಯಣ್. ಮೈಸೂರು ಪೈಂಟ್ ಮತ್ತು ವಾರ್ನಿಸ್ ನಿಗಮದ ಅಧ್ಯಕ್ಷ ಎಚ್ ಡಿ ಗಣೇಶ್. ಕಾಂಗ್ರೆಸ್ ಪಕ್ಷದ ವಿಭಾಗೀಯ ಅಧ್ಯಕ್ಷ ರಹಮತ್ ಜಾನ್ ಬಾಬು. ಕೆಪಿಸಿಸಿ ಸದಸ್ಯ ಎಚ್ ಟಿ ಅನಿಲ್ ಕುಮಾರ್. ಶಿವಶರಣ ಶ್ರೀಗುರು ಹರಳಯ್ಯ ಮಠದ ಅರ್ಚಕರಾದ ಜಯಣ್ಣ. ಸರ್ಕಾರದ 5 ಗ್ಯಾರಂಟಿಗಳ ಅನುಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷ ಕೆ ವಿ ನಿತಿನ್ ವೆಂಕಟೇಶ್. ಮೈಸೂರು ಜಿಲ್ಲಾ ಕಾಂಗ್ರೆಸ್ ಪಕ್ಷದ ಗ್ರಾಮೀಣ ಅಧ್ಯಕ್ಷ ಬಿಜೆ ಜಯಕುಮಾರ್. ದೂರದರ್ಶನದ ನಿವೃತ್ತ ಅಧಿಕಾರಿ ಕೆ ಆರ್ ರಾಜಪ್ಪ. ಮೈಸೂರು ವಿಭಾಗೀಯ ಆದಿ ಜಾಂಬವ ಸಂಘದ ಅಧ್ಯಕ್ಷ ಎಡತೊರೆ ಎಂ ನಿಂಗರಾಜು ಕರ್ನಾಟಕ ಮಾದರ ಮಹಾಸಭಾ ತಾಲೂಕು ಅಧ್ಯಕ್ಷ ಸೀಗೂರು ವಿಜಯ್ ಕುಮಾರ್. ಆದಿ ಜಾಂಬವ ಮಾದಿಗ ಸಂಘಟನೆಗಳ ಒಕ್ಕೂಟದ ಮುಖಂಡರಾದ ಡಿ ಕುಮಾರ್ ಮಾತನಾಡಿದರು. ಭೂತನಹಳ್ಳಿ ಶಿವಣ್ಣ. ಬೇಗೂರು ಮಾದೇವ್. ನರಸಿಂಹಮೂರ್ತಿ. ಶಿವಕುಮಾರ್. ಬಸವರಾಜ್. ಜಯ ಸ್ವಾಮಿ. ನಾರಾಯಣ. ವಿಷ್ಣು. ಮುತ್ತೂರು ಕುಮಾರ್. ಬೇಗೂರು ಕುಮಾರ್ ಸೇರಿದಂತೆ ಮತ್ತಿತರರು ಹಾಜರಿದ್ದರು.

## ಮೇ 3ಕ್ಕೆ ಡಿಸಿಎಂ ವಿವಿಧ ಸಚಿವರು ಆಗಮನ

# ಬಸನಗೌಡ ಬಾದರ್ಲಿ ಫೌಂಡೇಷನ್: ಸಾಮೂಹಿಕ ವಿವಾಹ ಉಡಿ ತುಂಬುವ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು;



ಮೇ 03 ತಾರೀಖು ದಿನದಂದು ಬಸನಗೌಡ ಬಾದರ್ಲಿ ಫೌಂಡೇಷನ್ ವತಿಯಿಂದ ಸಾಮೂಹಿಕ ವಿವಾಹ 156 ಅಧಿಕ ಹಾಗೂ 5001 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದ ವೇದಿಕೆಯ ಪೆಂಡಾಲ್ ಜಪಾನ್



ಸಿಸ್ಟಮ್ ರೂಪದಲ್ಲಿ ಎಲ್ಲಾ ಕೆಲಸ ಕಾರ್ಯಗಳು ಭರದಿಂದ ಸಾಗುತ್ತಿರುವ ಕಾಂಗ್ರೆಸ್ ಪಕ್ಷದ ಚಿಹ್ನೆ ಕೇಸರಿ. ಬಿಳಿ. ಹಸಿರು ಬಣ್ಣದಿಂದ ಕೂಡಿದ ಸರ್ವಧರ್ಮಗಳು ಬೃಹತ ವೇದಿಕೆಯ ನೋಟು ಸಾರ್ವಜನಿಕರನ್ನು ಆಕರ್ಷಿಸುತ್ತದೆ.

ನಗರದ ತಾಲೂಕು ಕ್ರೀಡಾಂಗಣದಲ್ಲಿ ಕಾಂಗ್ರೆಸ್ ಪಕ್ಷದ ಚಿಹ್ನೆ ಪರದೆಯ ಸುಂದರವಾಗಿ ಕಾಣಿಸುತ್ತಿರುವುದು ಪೆಂಡಾಲ್ ಸಿಂಧನೂರು ವಿಧಾನ ಸಭಾ ಕ್ಷೇತ್ರದ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಬಸನಗೌಡ ಬಾದರ್ಲಿ ಅವರು ನೇತೃತ್ವದಲ್ಲಿ. ಸುಮಾರು 50 ರಿಂದ 60 ಸಾವಿರ ಜನರು ಸೇರುವ ನಿರೀಕ್ಷೆಯಲ್ಲಿ ಜಪಾನ್ ಸಿಸ್ಟಮ್ ನಲ್ಲಿ ಬೃಹತ್ ಪೆಂಡಾಲ್ ವೇದಿಕೆ ಹಾಕಲಾಗಿದೆ.

ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರು ಡಿ.ಕೆ.ಶಿವಕುಮಾರ ಅವರು ಮಧ್ಯಾಹ್ನ 12 ಗಂಟೆಗೆ ಆಗಮಿಸಿ 03 ಗಂಟೆವರೆಗೂ ಸಾಮೂಹಿಕ ವಿವಾಹ ಉಡಿ ತುಂಬುವ ಕಾರ್ಯಕ್ರಮದಲ್ಲಿ ಇದ್ದು. ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸಚಿವೆ ಲಕ್ಷ್ಮಿ ಹೆಬ್ಬಾಳಕರ ಹಾಗೂ ವಿವಿಧ ಸಚಿವರು ಭಾಗವಹಿಸಲಿದ್ದಾರೆ.

ಪೆಂಡಾಲ್ ಪಕ್ಕದಲ್ಲಿ ಮೂರು ನಾಲ್ಕು ಕಡೆಗೆ ಊಟದ ವ್ಯವಸ್ಥೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ವ್ಯವಸ್ಥೆ ಮಾಡಲಾಗಿದ್ದು. ಬೃಹತ್ ವೇದಿಕೆ ಎಲ್ಲಾ ಕಡೆಗೂ ದೊಡ್ಡ ದೊಡ್ಡ ಫ್ಯಾನ್ ವ್ಯವಸ್ಥೆ ಮಾಡಿದ್ದು. ಕ್ರೀಡಾಂಗಣದ ಹೊರಗಡೆ ಅಲ್ಲಿ ಅಲ್ಲಿ ವಾಹನಗಳು ನಿಲುಗಡೆ ಸ್ಥಳ ವ್ಯವಸ್ಥೆ ಕಲ್ಪಿಸಲಾಗಿದೆ

ವಿವಿಧ ಕಡೆಗಳಿಂದ ಆಗಮಿಸಿದ್ ಜನಸ್ತೋಮ ಮಳೆ ಬಿಸಿಲು ಗಾಳಿಗೆ ಯಾವುದೇ ಸಮಸ್ಯೆಯಾಗದಂತೆ ಪೆಂಡಾಲ್ ಗೆ ವಾಟರ್ ಪ್ರೂಫ್ ಪ್ಲಾಸ್ಟಿಕ್ ಅಳವಡಿಸಲಾಗಿದೆ. ನಗರದಲ್ಲಿ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರು ಡಿ ಕೆ ಶಿವಕುಮಾರ್ ಹಾಗೂ ವಿಧಾನ ಪರಿಷತ್ ಸದಸ್ಯರು ಬಸನಗೌಡ ಬಾದರ್ಲಿ ಅವರು ಗಣ್ಯಾತಿಗಣ್ಯರು ಸಚಿವರುಗಳು ಸಿಂಧನೂರು ಹಬ್ಬದಂತೆ ಬ್ಯಾನರ್ ಕಟೌಟ್ ಗಳು ರಾರಾಜಿಸುತ್ತಿರುವ.

ಸಿಂಧನೂರುನ ಶಾಸಕರು ಹಾಗೂ ವಿಧಾನ ಪರಿಷತ್ತಿನ ಸದಸ್ಯರಾದ ಬಸನಗೌಡ ಬಾದರ್ಲಿ ಅವರು 160 ಅಧಿಕ ಸಾಮೂಹಿಕ ವಿವಾಹ ಹಾಗೂ 5001 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮಕ್ಕೆ ಸಿಂಧನೂರು ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

# ಏಡ್ಸ್ ಸುರಕ್ಷಾ ಅಭಿಯಾನ: ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಯಾವುದೇ ಕಾಯಿಲೆಯಾಗಿರಲಿ ಅದನ್ನು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸುವುದು ಮುಖ್ಯವಾಗಿದೆ. ಮೊಬೈಲ್‌ನಲ್ಲಿ ಎಚ್‌ಐವಿ ಸ್ಥಿತಿಗತಿಯನ್ನು ಪರಿಶೀಲನೆಗೆ ಒಳಪಡಿಸಿಕೊಳ್ಳ ಮೂಲಕ ಜಿಲ್ಲೆಯಲ್ಲಿ ಮಿಷನ್ ಏಡ್ಸ್‌ಸುರಕ್ಷಾ ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕೆಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಏಪ್ರಿಲ್ 29ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಅರೋಗ್ಯ ಅಭಿಯಾನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರವು ಸಮುದಾಯದ ಆರೋಗ್ಯ ಸಂರಕ್ಷಣೆಗೆ ಮತ್ತು ಸಮಾಜದ ಯುವ ಜನತೆಯ ಆರೋಗ್ಯ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿ ಹೆಚ್‌ಐವಿ ಸೋಂಕನ್ನು ಆರಂಭದಲ್ಲಿಯೇ ಗುರ್ತಿಸಲು ಸರಳ ವಿಧಾನವಾದ ಕ್ಯೂಆರ್ ಕೋಡ್ ಸ್ಕಾ□□ನ್ ಮಾಡಿ ವೈಯಕ್ತಿಕ ಸ್ಥಿತಿ ತಿಳಿಯಲು ಜಿಲ್ಲೆಯಾದ್ಯಂತ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದರು.

ಈಗಾಗಲೆ ವೈದ್ಯರು, ಸಿಬ್ಬಂದಿಯರು ಅಭಿಯಾನವನ್ನು ಯಶಸ್ವಿಯಾಗಿ ಕೈಗೊಂಡಿದ್ದು, ಸಂತಸದಾಯಕವಾಗಿದೆ. ಆದರೂ ಸಹ ಗೌಪ್ಯತೆಯೊಂದಿಗೆ ಸ್ವಯಂ ಪರೀಕ್ಷೆ ಮಾಡಿಕೊಳ್ಳಲು ಸಹಾಯಕವಾದ ಕ್ಯೂಆರ್ ಕೋಡ್ ಸ್ಕಾ□□ನ್ ಮಾಡಿ ಪ್ರಶ್ನೋತ್ತರದಲ್ಲಿ ಸ್ವಯಂ ಉತ್ತರಗಳಿಂದ, ಸೋಂಕು ಹರಡಬಹುದಾದ ಸಾಧ್ಯತೆಗಳಿದ್ದಲ್ಲಿ ಕನಿಷ್ಟ ಶೇಖಡಾ 95 ರಷ್ಟು ಜನ ತಪಾಸಣೆ ಮಾಡಿಸಿಕೊಳ್ಳಲು, ಖಚಿತಪಟ್ಟ ಸೋಂಕಿತರಲ್ಲಿ ಶೇ.95 ರಷ್ಟು ಜನರನ್ನು ಎಆರ್‌ಟಿ ಕೇಂದ್ರಗಳಿಗೆ ಚಿಕಿತ್ಸೆಗೆ ಬರುವಂತೆ ಮಾಡಲು ಹಾಗೂ ಸೋಂಕಿತರಾಗಿ ಎಆರ್‌ಟಿ ಚಿಕಿತ್ಸೆ ಪಡೆಯುವವರಲ್ಲಿ ಶೇ.95 ರಷ್ಟು ಜನರನ್ನು ಸದಾ ನಿಗಾವಣೆ, ಆಪ್ತ ಸಮಾಲೋಚನೆ, ಜಾಗೃತಿ ಮೂಲಕ ಚಿಕಿತ್ಸೆ ಬಿಡದಂತೆ, ವೈರಲ್ ಲೋಡ್ ಹೆಚ್ಚಾಗದಂತೆ ಹಾಗೂ ಹೈರಿಸ್ಕನಲ್ಲಿ ಇರುವ ಜನತೆಗೆ ಮೂಲ ಉದ್ದೇಶ ತಲುಪಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.



ರಕ್ತದಾನ ಶಿಬಿರಗಳ ಆಯೋಜನೆಗೆ ಸೂಚನೆ: ರಾಯಚೂರು ಮತ್ತು ಸಿಂಧನೂರುನಲ್ಲಿರುವ ಬ್ಲಡ್ ಬ್ಯಾಂಕ್‌ಗಳನ್ನು ಪ್ರತಿ ತಿಂಗಳು ಶಿಬಿರ ಏರ್ಪಡಿಸಿ, ರಕ್ತದ ಕೊರತೆಯಾಗದಂತೆ ನೋಡಿಬೇಕು. ಸಂಗ್ರಹಣೆಯ 25% ರಷ್ಟು ರಿಮ್ಸ್ ಬ್ಲಡ್ ಬ್ಯಾಂಕ್‌ಗೆ ನೀಡುವ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದರು.

100 ದಿನಗಳ ಕ್ಷಯಮುಕ್ತ ಅಭಿಯಾನಕ್ಕೆ ಸೂಕ್ತ ಯೋಜನೆ ರೂಪಿಸಿ: 100 ದಿನಗಳ ಕ್ಷಯಮುಕ್ತ ಅಭಿಯಾನದಡಿ ಕ್ಷಯರೋಗ ನಿರ್ಮೂಲನೆ ಮಾಡಲು ಮಾನದಂಡದಡಿ ಗುರುತಿಸಲ್ಪಟ್ಟ 209 ಗ್ರಾಮಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕುಟುಂಬದ ಎಲ್ಲ ಸದಸ್ಯರು ಸೇರಿದಂತೆ ಸಂಪೂರ್ಣ ಜನಸಂಖ್ಯೆಯನ್ನು ಪರೀಕ್ಷಿಸಿ ಅಗತ್ಯವಿದ್ದವರಿಗೆ ಕಫ ಪರೀಕ್ಷೆ, ಹ್ಯಾಂಡ್‌ಹೆಲ್ಡ್ ಎಕ್ಸ್‌ರೇ ಮಿಷಿನ್, ಮುಂತಾದವುಗಳಿಂದ ಪರೀಕ್ಷಿಸಿ, ಸೋಂಕು ಖಚಿತವಾದಲ್ಲಿ ಉಚಿತ ಚಿಕಿತ್ಸೆಯನ್ನು ನೀಡಿ ಗುಣಪಡಿಸಲು, ಅರ್ಹ ವ್ಯಕ್ತಿಗಳಿಗೆ ನಿಕ್ಷಯ್ ಮಿತ್ರ ಅಡಿ ದಾನಿಗಳಿಂದ ಪೌಷ್ಟಿಕ ಆಹಾರ ಒದಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

2030ರ ಒಳಗೆ ಕ್ಷಯರೋಗ ಮುಕ್ತ ಭಾರತದ ಗುರಿ ತಲುಪಲು ಕಂದಾಯ ಇಲಾಖೆ, ಗ್ರಾಮ ಪಂಚಾಯತ, ಸ್ಥಳೀಯ ಸಂಸ್ಥೆಗಳ, ವಿವಿಧ ಇಲಾಖೆಗಳ ಸಹಕಾರ ಪಡೆದು ಯಶಸ್ವಿಗೊಳಿಸಲು ಸೂಚಿಸಿದರು.

ಗುಣಮಟ್ಟದದಿಂದ ಹೆರಿಗೆ ನಿರ್ವಹಣೆ: ಜಿಲ್ಲೆಯ ಎಲ್ಲ ಆಸ್ಪತ್ರೆಗಳಲ್ಲಿನ ಸಂಪನ್ಮೂಲಗಳ ಬಳಕೆಯಿಂದ ಗುಣಮಟ್ಟದ ಸೇವೆ ನೀಡುತ್ತಿರುವುದು ಆಶಾದಾಯಕವಾಗಿದ್ದು, ಯಾವುದೇ ಪರಿಕರ, ಉಪಕರಣಗಳ ಅಗತ್ಯತೆವಿದ್ದರೆ ನಿಯಮಾನುಸಾರ ಬೇಡಿಕೆ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ವಿಜಯ ಶಂಕರ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಡಿಎಸ್‌ಓ ಡಾ.ಗಣೇಶ್ ಕೆ, ಡಿಟಿಓ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ಪರಿಸರ ಇಲಾಖೆ ಅಧಿಕಾರಿ, ಸಹಾಯಕ ಔಷಧ ನಿಯಂತ್ರಕರು ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ತಾಯಿ ಮಕ್ಕಳ ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು, ಡಿಹೆಚ್‌ಇಓ, ಡಿಪಿಎಮ್, ಡಿಡಿಎಮ್, ಎನ್‌ಕ್ಯೂಎಎಸ್, ಆರ್‌ಕೆಎಸ್‌ಕೆ ಸಲಹೆಗಾರರು ಹಾಗೂ ಹೆಚ್‌ಐವಿ ಏಡ್ಸ್ ನಿರ್ಮೂಲನೆಗೆ ಕೆಲಸ ಮಾಡುತ್ತಿರುವ ಸಂಘಟನೆಗಳ ಪದಾಧಿಕಾರಿಗಳು, ಡ್ಯಾಪ್ಕೋ ಸಿಬ್ಬಂದಿಗಳು ಇದ್ದರು.

# ಪ್ರಾಮಾಣಿಕ ಜೀವನ ಶೈಲಿ ಭವ್ಯ ಭಾರತದ ಆಶಾಕಿರಣ: ಮಡೋಳಪ್ಪ



• **ಮಲ್ಲಮ್ಮ ನುಡಿ ವಾರ್ತೆ, ಬಸವಕಲ್ಯಾಣ**

ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ಇಂದು ಸಾಯಂಕಾಲ ಅನ್ವೇಷಣೆ 2026 ಮಹಾವಿದ್ಯಾಲಯದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಸನ್ಮಾನ್ಯ ಶ್ರೀ ಮಡೋಳಪ್ಪ ಪಿ ಎಸ್, ಹುಮನಾಬಾದ್ ಉಪವಿಭಾಗದ ಉಪ ಪೊಲೀಸ್ ವರಿಷ್ಠಾಧಿಕಾರಿ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡುತ್ತ ಪ್ರಾಮಾಣಿಕವಾದ ಜೀವನ ಶೈಲಿಯನ್ನು ಆಯ್ಕೆಮಾಡಿಕೊಂಡು ಮನಕುಲಕ್ಕೆ ಒಳ್ಳೆಯದನ್ನು ಬಯಸುವವರಾಗಿ ಭವ್ಯಭಾರತದ ಆಶಾಕಿರಣರಾಗಬೇಕೆಂದು ಹೇಳುತ್ತ ಇದೇ ಕಾಲೇಜಿನ ಹಳೆ ವಿದ್ಯಾರ್ಥಿಯಾಗಿ ನನಗೆ ಕಾರ್ಯಕ್ರಮದ ಉದ್ಘಾಟಕರಾಗಿ ಬಂದಿರುವ ವಿಷಯ ತುಂಬಾ ಗೌರವ ಮತ್ತು ಆನಂದವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತರಿರುವ ಸಂಸ್ಥೆಯ ಖಜಾಂಚಿಗಳಾದ ಶ್ರೀ ಲಿಂಗರಾಜ ಪಾಟೀಲ ಅಟ್ಟೂರ ಮಾತನಾಡುತ್ತ ಬಸವಕಲ್ಯಾಣವು ಧಾರ್ಮಿಕ ಶೈಕ್ಷಣಿಕ ಸಿದ್ಧಾಂತದ ನೆಲೆಯಾಗಿದೆ ವಚನಗಳು ಮಾನವನ ಏಳಿಗೆಗೆ ಆಧಾರಸ್ಥಂಭವಾಗಿವೆ ಪ್ರಯುಕ್ತ ವಿದ್ಯಾರ್ಥಿಗಳು ವಚನಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಂಸ್ಕಾರವಂತರಾಗಬೇಕೆಂದು ಉತ್ತಮ ಸಮಾಜದ ನಿರ್ಮಾಣದಲ್ಲಿ ತಮ್ಮನ್ನು ತಾವು ಅಳವಡಿಸಿಕೊಳ್ಳಬೇಕೆಂದು ಹೇಳಿದರು.

ಇನ್ನೋರ್ವ ಅತಿಥಿ ಭೀಮಣ್ಣ ಖಂಡ್ರೆ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯರು ಡಾ. ಉದಯಕುಮಾರ ಕಲ್ಯಾಣಿ ಮಾತನಾಡುತ್ತ ಕನಸುಗಳನ್ನೇ ಗುರಿಯಾಗಿ ಹಿಡಿದು ಶ್ರಮದ ಹಾದಿಯಲ್ಲಿ ಹೆಜ್ಜೆ ಇಟ್ಟು ಸವಾಲುಗಳನ್ನು ಜಯಿಸಿ ಮುಂದೆ ನಡೆದು ಯಶಸ್ಸಿನ ಶಿಖರವನ್ನು ತಲುಪಬೇಕು, ಇಂದಿನ ಆಧುನಿಕ ಯುಗದಲ್ಲಿ ತಂತ್ರಜ್ಞಾನ ಬಳಸಿಕೊಂಡು ನಿಮ್ಮ ಜೀವನ ರೂಪಿಸಿಕೊಳ್ಳಬೇಕೆಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದಂತ ಬಸವಕಲ್ಯಾಣ ಎಜುಕೇಷನಲ್ ಟ್ರಸ್ಟನ ಅಧ್ಯಕ್ಷರು ಕರ್ನಾಟಕ ಸರಕಾರದ ಮಾಜಿಮಂತ್ರಿಗಳಾದ ಶ್ರೀ ಬಸವರಾಜ ಪಾಟೀಲ ಅಟ್ಟೂರರವರು ಮಾತನಾಡುತ್ತ ಕಷ್ಟದ ಹಾದಿಯಲ್ಲಿ ಯಶಸ್ಸು ದೊರೆಯುತ್ತದೆ ಸತತ ಪ್ರಯತ್ನ ಮಾಡಿದರೆ ನಮ್ಮ ಭವಿಷ್ಯ ನಮ್ಮ ಕೈಯಿಂದ ರೂಪಿಸಿಕೊಳ್ಳಬಹುದು ಎಂದು ವೇದಿಕೆ ಮುಖಾಂತರ ತಿಳಿಸಿದರು.

ಕಾರ್ಯಕ್ರಮಕ್ಕೆ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯರು ಮತ್ತು ಟ್ರಸ್ಟನ ನಿರ್ದೇಶಕರು ಆದ ಡಾ. ಅಶೋಕಕುಮಾರ ವಣಗೇರಿಯವರು ಮಾತನಾಡುತ್ತ ಕನಸುಗಳ ಜೊತೆ ಹೆಜ್ಜೆ ಹಾಕಿ ಜ್ಞಾನದ ದೀಪ ಬೆಳಗಿಸಿ ಸಾಧನೆಯ ದಾರಿಯಲ್ಲಿ ನಡೆದು ಯಶಸ್ಸಿನ ಶಿಖರ ಏರೋಣ ಎಂದು ವಿದ್ಯಾರ್ಥಿಗಳಿಗೆ ವೇದಿಕೆ ಮುಖಾಂತರ ತಿಳಿಸಿದರು. ಕಾರ್ಯಕ್ರಮದ ಸಂಚಾಲನೆಯನ್ನು ವಿದ್ಯಾಸಾಗರ ಮುಲ್ಗೆಯವರು ನಡೆಸಿಕೊಟ್ಟರು ಮತ್ತು ಡಾ. ಅನೀಲಕುಮಾರ ಪಾಟೀಲ ವಂದಿಸಿದರು. ಕಾರ್ಯಕ್ರಮದಲ್ಲಿ ಉತ್ತಮ ಅಂಕ ಪಡೆದಂತಹ ವಿದ್ಯಾರ್ಥಿಗಳಿಗೆ ಮತ್ತು ಇತರೆ ಸ್ಪರ್ಧೆಗಳಲ್ಲಿ ಗೆದ್ದಂತಹ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು ಮತ್ತು ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳು ವೈವಿದ್ಯಮಯ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

# ರಸ್ತೆ ಡಾಂಬರೀಕರಣ ಕಾಮಗಾರಿಗೆ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆ, ಬೀದರ್**

ದಕ್ಷಿಣ ಕ್ಷೇತ್ರದ ಮನ್ನಾಏಖೇಳ್ಳಿ ಗ್ರಾಮದಿಂದ ನಿಡವಂಚಾ, ಹೊಚಕನಳ್ಳಿ ಹಾಗೂ ರಂಜೋಳ ಖೇಣಿ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಮಹತ್ವದ ರಸ್ತೆ ಡಾಂಬರೀಕರಣ ಕಾಮಗಾರಿಗೆ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಗುದ್ದಲಿ ಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು ಈ ರಸ್ತೆ ನಿರ್ಮಾಣವು ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಹೊಸ ದಿಕ್ಕನ್ನು ನೀಡಲಿದ್ದು, ಸಾರ್ವಜನಿಕರ ಜೀವನಮಟ್ಟವನ್ನು ಮತ್ತಷ್ಟು ಉನ್ನತಿಗೇರಿಸುವ ಪ್ರಮುಖ ಹೆಜ್ಜೆಯಾಗಲಿದೆ. ನಮ್ಮ ಕ್ಷೇತ್ರ□ನಮ್ಮ ಅಭಿವೃದ್ಧಿ ಎಂಬ ದೃಷ್ಟಿಕೋನದೊಂದಿಗೆ ಈ ಯೋಜನೆ ಕೈಗೊಳ್ಳಲಾಗಿದೆ.

ಸುಮಾರು 1 ಕೋಟಿ 50 ಲಕ್ಷ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಈ ಕಾಮಗಾರಿ ಪೂರ್ಣಗೊಂಡ ನಂತರ, ಗ್ರಾಮಗಳ ನಡುವಿನ ಸಂಪರ್ಕ ವ್ಯವಸ್ಥೆ ಗಣನೀಯವಾಗಿ ಸುಧಾರಣೆಯಾಗಲಿದ್ದು, ಸ್ಥಳೀಯ ಜನತೆಗೆ ವೇಗವಾದ, ಸುರಕ್ಷಿತ ಮತ್ತು ಸುಗಮ ಸಂಚಾರ ಸೌಲಭ್ಯ ಲಭ್ಯವಾಗಲಿದೆ ಎಂದು ತಿಳಿಸಿದರು.

ಸುಮಾರು 1 ಕೋಟಿ 50 ಲಕ್ಷ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಈ ಕಾಮಗಾರಿ ಪೂರ್ಣಗೊಂಡ ನಂತರ, ಈ ಭಾಗದ ಗ್ರಾಮಗಳ ನಡುವಿನ ಸಂಪರ್ಕ ವ್ಯವಸ್ಥೆ ಗಣನೀಯವಾಗಿ ಸುಧಾರಣೆಯಾಗಲಿದೆ. ನಮ್ಮ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆಗೆ ಸುಲಭವಾಗಿ ಸಾಗಿಸಬಹುದು, ವಿದ್ಯಾರ್ಥಿಗಳು ಶಾಲೆ-ಕಾಲೇಜುಗಳಿಗೆ ಸಮಯಕ್ಕೆ ತಲುಪಬಹುದು, ತುರ್ತು ಆರೋಗ್ಯ ಸೇವೆಗಳು ಇನ್ನಷ್ಟು ವೇಗವಾಗಿ ಲಭ್ಯವಾಗುತ್ತವೆ. ಒಂದು ಉತ್ತಮ ರಸ್ತೆ ಅಂದರೆ ಕೇವಲ ಸಂಚಾರದ ಮಾರ್ಗವಲ್ಲ□ಅದು ಅಭಿವೃದ್ಧಿಯ ಹಾದಿ. ರಸ್ತೆ ಇದ್ದಲ್ಲಿ ಉದ್ಯೋಗಾವಕಾಶಗಳು ಹೆಚ್ಚಾಗುತ್ತವೆ, ವ್ಯಾಪಾರ ಚಟುವಟಿಕೆಗಳು ಚುರುಕಾಗುತ್ತವೆ, ಮತ್ತು ಗ್ರಾಮದ ಒಟ್ಟಾರೆ ಜೀವನಮಟ್ಟ ಏರಿಕೆಯಾಗುತ್ತದೆ. ಈ ಕಾಮಗಾರಿ ನಮ್ಮ ಪ್ರದೇಶದ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ಹೊಸ ಬಲ ನೀಡಲಿದೆ.

ಈ ಸಂದರ್ಭದಲ್ಲಿ ಗುತ್ತಿಗೆದಾರರಿಗೆ ನಾನು ಸ್ಪಷ್ಟವಾಗಿ ಸೂಚನೆ ನೀಡಿದ್ದೇನೆ ಅತ್ಯುತ್ತಮ ಗುಣಮಟ್ಟದಲ್ಲಿ ಹಾಗೂ ನಿಗದಿತ ಅವಧಿಯೊಳಗೆ ರಸ್ತೆ ಪೂರ್ಣಗೊಳ್ಳಬೇಕು. ಜನರ ಹಣದಿಂದ ನಡೆಯುವ ಈ ಯೋಜನೆ ಜನರ ವಿಶ್ವಾಸವನ್ನು ಉಳಿಸಬೇಕು. ಗುಣಮಟ್ಟದಲ್ಲಿ ಯಾವುದೇ ರಾಜಿ ಇಲ್ಲ ಎಂದು ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಗುರುನಾಥ್ ರಾಜಗೀರ ಬಗದಲ, ಶಿವಕುಮಾರ ಸ್ವಾಮಿ, ಮಾಣಿಕಪ್ಪ ಖಾಶೆಂಪುರ, ಪ್ರಶಾಂತ ಸಿಂಧೋಲ, ಸಂತೋಷ ಹಳ್ಳಖೇಡ, ಬಸವರಾಜ, ಬಕ್ಕಪ್ಪ ಬಸರೆಡ್ಡಿ, ಬಸವರಾಜ ಬೋರಾಳ, ಜರೆಪ್ಪ ಹಂದಿಕೇರಿ, ಅರುಣಕುಮಾರ ಪಾಟೀಲ, ತಾಜೋದಿನ್, ದತ್ತು ವಾಕ್ವಾಡೆ, ವಿನೋದ, ಮೋಹನ, ಆಬೇದಲಿ, ಜಗನಾಥ್ ಪಂಡಿತ, ಪ್ರಶಾಂತ ರೆಡ್ಡಿ, ಬಸವರಾಜ ನಿಂಗದಳ್ಳಿ, ಪ್ರಶಾಂತ ಜವಳಗಿ ಮತ್ತಿತರರು ಉಪಸ್ಥಿತರಿದ್ದರು.

# ಸರ್ಕಾರಿ ಪಾಲಿಟೆಕ್ನಿಕ್ ಪ್ರವೇಶ ಪ್ರಾರಂಭ

• **ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ**

ಸಮೀಪದ ಟಕ್ಕಳಕಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆಟೋ ಮೊಬೈಲ್ ಇಂಜಿನಿಯರಿಂಗ್, ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್, ಎಲೆಕ್ಟ್ರಿಕ್ಸ್ ಅಂಡ್ ಕಮ್ಯುನಿಕೇಶನ್ ಇಂಜಿನಿಯರ್ರಿಂಗ್ ಹಾಗೂ ಫುಡ್ ಪ್ರೋಸೆಸಿಂಗ್ ಅಂಡ್ ಪ್ರಿಸರ್ವಶನ್ ಇಂಜಿನಿಯರಿಂಗ್ ವಿಭಾಗಗಳಿಗೆ ಪ್ರಥಮ ವರ್ಷದ ಪ್ರವೇಶ ಪ್ರಾರಂಭವಾಗಿದ್ದು.

ಎಸ್ ಎಸ್ ಎಲ್ ಸಿ, ಪಿಯುಸಿ ತೇರ್ಗಡೆಯಾದ ಆಸಕ್ತರು ಕಾಲೇಜಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಮಾಹಿತಿಗಾಗಿ ಮೊ. 8884566788 ಗೆ ಸಂಪರ್ಕಿಸಬಹುದು ಎಂದು ಕಾಲೇಜಿನ ಪ್ರಾಚಾರ್ಯ ನಟರಾಜ ಕುಂಟೋಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಮನ ಸೆಳೆದ ರಂಗೋಲಿ



• **ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ**

ತಾಲೂಕಿನ ಮುತ್ತಗಿ ಗ್ರಾಮದಲ್ಲಿ ಬುಧುವಾರ ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಆಯೋಜಿಸಿದ್ಧ ಮನೆಗೆ ಐದು ಗ್ಯಾರಂಟಿ ಮನೆಯ ಮುಂದೆ ರಂಗೋಲಿ ಕಾರ್ಯಕ್ರಮದಲ್ಲಿ ಗ್ರಾಮದ ಸಂಜೀವಿನಿ ಮಹಿಳಾ ಒಕ್ಕೂಟದ ಸದಸ್ಯರು ಹಾಗೂ ಮಹಿಳೆಯರು ಹಾಕಲಾದ ರಂಗೋಲಿ ಹಾಕಿದ್ದು ನೋಡುಗರ ಗಮನ ಸೆಳೆದವು.

ಈ ಸಂದರ್ಭದಲ್ಲಿ ತಾಪಂ ಇಓ ವೆಂಕಟೇಶ ವಂದಾಲ, ಸಮಿತಿ ಅಧ್ಯಕ್ಷ ಮೈಬೂಬ ಲಾ ನಾಯ್ಕೋಡಿ ಪಿಕೆಪಿಎಸ್ ಅಧ್ಯಕ್ಷ ಪ್ರೇಮಕುಮಾರ ಮ್ಯಾಗೇರಿ, ತಾಲೂಕಾ ಯೋಜನಾಧಿಕಾರಿ ಎಂ.ಬಿ ಸೊನ್ನದ, ಆರ್.ವಿ ಸಂಕಣ್ಣನವರ, ಪಿಡಿಓ ಡಿ.ಎಂ ಬಿಳೆಕುದರಿ ಸೇರಿದಂತೆ ಅನೇಕರು ಹಾಜರಿದ್ದರು.

## ನಿವೇಶನ ಕಬ್ಜಾ: ಸಿದ್ದು ಪಾಟೀಲ ಸಹೋದರ ಕಾಳಪ್ಪಗೌಡ ಕುಮ್ಮಕ್ಕು

# ನ್ಯಾಯ ಸಿಗದಿದ್ದರೆ ಆತ್ಮಹತ್ಯೆ: ಮಹಾದೇವಿ



• **ಮಲ್ಲಮ್ಮ ನುಡಿ ವಾರ್ತೆ, ಬೀದರ**

ಹುಮನಾಬಾದನ ವಾಂಜರಿ ಓಣಿಯಲ್ಲಿರುವ 50*50 ಅಳತೆಯ ನನ್ನ ನಿವೇಶನವನ್ನು ಸಂಜುಕುಮಾರ ಕಬ್ಬಲಿಗ ಎನ್ನುವವರು ಆಕ್ರಮವಾಗಿ ಕಬ್ಜಾ ಮಾಡಿಕೊಂಡಿದ್ದಾರೆ. ಅವರ ವಿರುದ್ಧ ಸೂಕ್ತ ಕಾನೂನಿನ ಕ್ರಮ ಕೈಗೊಂಡು ನನಗೆ ನ್ಯಾಯ ಒದಗಿಸಿಕೊಡಬೇಕೆಂದು ಮಹಾದೇವಿ ಮಡಿವಾಳ ತಿಳಿಸಿದರು.

ಈ ಕುರಿತು ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ನಾನೊಬ್ಬ ಆಸರೆಯಿಲ್ಲದ ಮಹಿಳೆ. ಖಾಸಗಿ ಶಾಲೆಯೊಂದರಲ್ಲಿ ಕರ್ತವ್ಯ ನಿರ್ವಹಿಸುತಿದ್ದು, ಹುಮನಾಬಾದ ಟಿಎಂಸಿಗೆ ಪದೇ ಪದೇ ಓಡಾಡಿಸುತಿದ್ದಾರೆ. ಸಂಜುಕುಮಾರ ಅವರಿಗೆ ಕೇಳಲು ಹೋದರೆ ನಾನು ಶಾಸಕ ಸಿದ್ದು ಪಾಟೀಲ ಹಾಗೂ ಅವರ ಸಹೋದರ ಕಾಳಪ್ಪ ಪಾಟೀಲ ಮನುಷ್ಯ. ಏನು ಬೇಕಾದರೂ ಮಾಡಿಕೊ. ನಾನು ಕಬ್ಜಾ ಬಿಡುವುದಿಲ್ಲ ಎಂದು ಜೀವಬೆದರಿಕೆ ಹಾಕುತಿದ್ದಾರೆ. ಇದೇ ರೀತಿ ಮುಂದುವರೆದರೆ ನಾನು ಆತ್ಮಹತ್ಯೆ ಮಾಡಿಕೊಳ್ಳುತ್ತೇನೆ ಎಂದು ಮಹಾದೇವಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಎರಡು ವರ್ಷಗಳ ಹಿಂದೆ 2023ರ ಆಗಸ್ಟ್ 16ರಂದು ಭೀಮರಾವ ಮೊತಿರಾವ ಪವಾರ್ ಎಂಬುವವ ಹತ್ತಿರ ನೋಟ್ರಿ ಮಾಡಿಕೊಂಡು ಕಷ್ಟಪಟ್ಟು ದುಡಿದ ಹಣದಿಂದ ನಿವೇಶನ ಖರೀದಿ ಮಾಡಿದ್ದೇನೆ.

ಇವೇಶನ ಸಂಖ್ಯೆ: ಟಿಎಂಸಿ 21-389 ಎಂಬ ಸಂಖ್ಯೆ ಕೂಡ ಹಾಕಿಕೊಟ್ಟಿದ್ದಾರೆ. ಆದರೆ ನಮ್ಮ ನಿವೇಶನದ ಪಕ್ಕದಲ್ಲಿರುವ ಸಂಜುಕುಮಾರ ಕಬ್ಬಲಿಗ ಅವರು ಸುಖಾಸುಮ್ಮನೆ ತೆ-ಂದರೆ ಕೊಡುತ್ತ ನಿವೇಶನದ ಅರ್ಧ ಭಾಗ ಕಬ್ಜಾ ಮಾಡಿದ್ದಾರೆ. ಈ ಕುರಿತು ಜಿಲ್ಲಾಧಿಕಾರಿಗಳಿಗೆ, ಸಹಾಯಕ ಆಯುಕ್ತರು, ಹುಮನಾಬಾದ ಪಿಎಸ್ಐ, ಡಿಯುಡಿಸಿ ಅಧಿಕಾರಿಗಳಿಗೆ, ತಹಸಿಲ್ದಾರರಿಗೆ ಹಾಗೂ ಟಿಎಂಸಿಗೆ ಹಲವಾರು ಬಾರಿ ಮನವಿ ನೀಡಿದರೂ ಕೂಡಾ ಪ್ರತಿಕ್ರಿಯೆ ಇದುವರೆಗೆ ದೊರೆತಿಲ್ಲ. ಇಂದು ನಾಳೆ ಎಂದು ದಿನಗಳೆಯುತ್ತ ನನಗೆ ಸಾಕಷ್ಟು ಹರಾಸ್‌ಮೆಂಟ್ ಮಾಡುತ್ತಿದ್ದಾರೆ. ಹುಮನಾಬಾದ ನಿವಾಸಿಯಾದ ನಾನು ಪದೇ ಪದೇ ಬೀದರ-ಹುಮನಾಬಾದ ಓಡಾಡಲು ಆಗುತ್ತಿಲ್ಲ. ಹುಮನಾಬಾದನಲ್ಲಿ ಒಂಟಿ ಮಹಿಳೆಗೆ ನ್ಯಾಯ ಸಿಗುವುದು ಬಹಳ ಕಷ್ಟ. ಆದ್ದರಿಂದ ಅಧಿಕಾರಿಗಳು ನನಗೆ ನ್ಯಾಯ ಒದಗಿಸಿಕೊಡಬೇಕು.

ಇಲ್ಲದಿದ್ದರೆ ಯಾರೂ ಆಸರೆಯಿಲ್ಲದ ನಾನು ಆತ್ಮಹತ್ಯೆ ಮಾಡಿಕೊಳ್ಳುವುದೊಂದೆ ನನ್ನ ಮುಂದಿರುವ ದಾರಿ ಎಂದು ಪತ್ರಿಕಾಗೋಷ್ಠಿಯಲ್ಲಿ ಮಹಾದೇವಿ ಗಂಗಾರಾಮ ಮಡಿವಾಳ ತಮ್ಮ ನೋವು ತೋಡಿಕೊಂಡರು.

## ಅಬ್ದುಲ್ ಕಲಾಂ ಬಾಲಕಿಯರ ವಸತಿ ಕಾಲೇಜ

# ಉಚಿತ ದಾಖಲಾತಿಗೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**

ನಗರದ ಹೊಸಪೇಟೆ ರಸ್ತೆಯಲ್ಲಿರುವ ಬಿ.ಐ.ಟಿ.ಎಂ. ಎಂಜಿನಿಯರಿಂಗ್ ಕಾಲೇಜ್ ಸಮೀಪದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು (ಅಲ್ಲೀಪುರ) ಇಲ್ಲಿ 2026-27ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಪಿಯುಸಿ ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳ ದಾಖಲಾತಿಗಾಗಿ ಅರ್ಹ ವಿದ್ಯಾರ್ಥಿನಿಯರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರಥಮ ಪಿಯುಸಿ ವಿಜ್ಞಾನ ವಿಭಾಗಕ್ಕೆ 60 ಮತ್ತು ವಾಣಿಜ್ಯ ವಿಭಾಗಕ್ಕೆ 60 ಸೀಟ್‌ಗಳು ಲಭ್ಯವಿದ್ದು, ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣರಾದ ಬಾಲಕಿಯರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಕಾಲೇಜಿನ ಪ್ರಾಂಶುಪಾಲ ನಾಗಯ್ಯ ಹಿರೇಮಠ ಅವರು ತಿಳಿಸಿದ್ದಾರೆ.

ಶೇ. 75ರಷ್ಟು ಸೀಟುಗಳು ಅಲ್ಪಸಂಖ್ಯಾತರಿಗೆ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಹಾಗೂ ಪಾರ್ಸಿ) ಮೀಸಲಾಗಿದ್ದು, ಉಳಿದ ಶೇ. 25ರಷ್ಟು ಸೀಟುಗಳನ್ನು ಎಸ್.ಸಿ, ಎಸ್.ಟಿ ಮತ್ತು ಓಬಿಸಿ ವಿದ್ಯಾರ್ಥಿನಿಯರಿಗೆ ಹಂಚಿಕೆ ಮಾಡಲಾಗುತ್ತದೆ. (ವಿಶೇಷ ಚೇತನರಿಗೆ ಶೇ. 4ರಷ್ಟು ಮೀಸಲಾತಿ ಇರಲಿದೆ).

ಅರ್ಜಿ ಸಲ್ಲಿಸಲು ಃಣಣಠಿ://ಜಠಟ.ಇಚಿಡಿ-ಟಿಚಿಣಚಿಞಚಿ.ರಠ.ಟ ಜಾಲತಾಣಕ್ಕೆ ಭೇಟಿ ನೀಡಬಹುದು. ಅರ್ಜಿ ಸಲ್ಲಿಸಲು ಮೇ 16 ಕೊನೆಯ ದಿನವಾಗಿದೆ.

*ಅರ್ಹತೆ ಮತ್ತು ದಾಖಲೆಗಳು:*

ಕರ್ನಾಟಕ ರಾಜ್ಯದ ಅಭ್ಯರ್ಥಿಯಾಗಿದ್ದು, ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷಗಳ ಒಳಗಿರಬೇಕು. ಅರ್ಜಿ ಸಲ್ಲಿಸಲು ಅಂಕಪಟ್ಟಿ, ಹಾಲ್ ಟಿಕೆಟ್ ಪ್ರತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಅಗತ್ಯವಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಬಾಲಕಿಯರ ವಸತಿ ಪದವಿ ಪೂರ್ವ ಕಾಲೇಜು, ಅಲ್ಲೀಪುರ, ಬಳ್ಳಾರಿ ಅಥವಾ ಮೊ.7349008289, 6360549014, 9901739242, 9886286814, 8971217895 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚರ್ಮವಸ್ತುಗಳ ವಿಶೇಷ ರಿಯಾಯಿತಿಯಲ್ಲಿ ಮಾರಾಟ

• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**

ಕಾರ್ಮಿಕರ ದಿನಾಚರಣೆ ಹಾಗೂ ಬಕ್ರೀದ್ ಹಬ್ಬದ ಹಿನ್ನಲೆಯಲ್ಲಿ ಬಳ್ಳಾರಿಯ ಲಿ□□ಕರ್ ಲೆದರ್ ಎಂಪೋರಿಯಂನಲ್ಲಿ ಗ್ರಾಹಕರಿಗಾಗಿ ಎಲ್ಲಾ ಚರ್ಮದ ಉತ್ಪನ್ನಗಳ ಮೇಲೆ ಶೇ. 15 ರಷ್ಟು ವಿಶೇಷ ರಿಯಾಯಿತಿ ದರದಲ್ಲಿ ಮಾರಾಟ ಹಮ್ಮಿಕೊಳ್ಳಲಾಗಿದೆ.

ನಗರದ ಬುಡಾ ಕಾಂಪ್ಲೆಕ್ಸ್‌ನಲ್ಲಿರುವ ಲಿಡ್‌ಕರ್ ಮಳಿಗೆಯಲ್ಲಿ ಏ.30 ರಿಂದ ಮೇ 31 ರವರೆಗೆ ಈ ವಿಶೇಷ ರಿಯಾಯಿತಿ ದರಗಳು ಅನ್ವಯವಾಗಲಿವೆ. ಮಳಿಗೆಯಲ್ಲಿ ಲಭ್ಯವಿರುವ ಗುಣಮಟ್ಟದ ಚರ್ಮದ ಪಾದರಕ್ಷೆಗಳು, ಬ್ಯಾಗ್‌ಗಳು, ಬೆಲ್ಟ್‌ಗಳು ಹಾಗೂ ಇನ್ನಿತರ ಎಲ್ಲಾ ಚರ್ಮದ ವಸ್ತುಗಳ ಖರೀದಿ ಮೇಲೆ ಗ್ರಾಹಕರು ಶೇ.15 ರಷ್ಟು ರಿಯಾಯಿತಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಹೆಚ್.ಆರ್. ಗವಿಯಪ್ಪ ವೃತ್ತದ ಬಳಿಯ ಬುಡಾ ಕಾಂಪ್ಲೆಕ್ಸ್ ನ ಶಾಪ್ ನಂ: 24ರ ಲಿ□□ಕರ್ ಲೆದರ್ ಎಂಪೋರಿಯಮ್ ಮಳಿಗೆ ಅಥವಾ ದೂ.08392-271741, ಮೊ.98446 67691 ಅನ್ನು ಸಂಪರ್ಕಿಸಬಹುದಾಗಿದೆ.

ಇದು ಸರ್ಕಾರಿ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ವಿಶೇಷ ಮಾರಾಟವಾಗಿದ್ದು, ಸಾರ್ವಜನಿಕರು ಹಾಗೂ ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಲಿಡ್‌ಕರ್ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಡಿಪ್ಲೋಮಾ ಪ್ರವೇಶಕ್ಕೆ ವಿಶೇಷ ಚೇತನರಿಂದ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**

ವಿಶೇಷ ಚೇತನರಿಗೆ ಡಿಪ್ಲೋಮಾ ಮಟ್ಟದಲ್ಲಿ ತಾಂತ್ರಿಕ ಶಿಕ್ಷಣ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಮೈಸೂರಿನ ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್ ಕಾಲೇಜು ವತಿಯಿಂದ 2026-27 ನೇ ಸಾಲಿನ ಮೂರು ವರ್ಷದ ಡಿಪ್ಲೋಮಾ ವಿವಿಧ ಕೋರ್ಸ್ ಗಳ ಪ್ರವೇಶಕ್ಕೆ ವಿಶೇಷ ಚೇತನ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿವಿಧ ಕೋರ್ಸ್ ಗಳು:

ಅನುದಾನಿತ ಕೋರ್ಸ್: ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಶಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್.

*ಅನುದಾನಿತ ರಹಿತ ಕೋರ್ಸ್: ಜ್ಯೂಯಲರಿ ಡಿಸೈನ್ಸ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್ (ಫಾರ್ ವಿಜ್ಯುವಲಿ ಇಂಪರ್ಡ್), ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಿಕಲ್ ವೆಹಿಕಲ್ ಟೆಕ್ನಾಲಜಿ. ಅರ್ಹತೆ:10 ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತೀರ್ಣರಾದ ಹಾಗೂ ವಿವಿಧ ಅಂಗವೈಕಲ್ಯತೆ ಲಕ್ಷಣ ಹೊಂದಿದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಮೂಳೆ ಮತ್ತು ಕೀಲು ಅಂಗವಿಕಲತೆಯಲ್ಲಿ ಶೇ.40, ಕಿವುಡ ಮತ್ತು ಮೂಗು ಅಂಗವಿಕಲತೆ ಶೇ.60, ಅಂಧತ್ವ-6/60 ಅಥವಾ 20/200 ಸ್ನೆಲೆನ್ (ಕಂಪ್ಯೂಟರ್ ಅಪ್ಲಿಕೇಷನ್ಸ್ (ಫಾರ್ ವಿಜ್ಯುವಲಿ ಇಂಪರ್ಡ್) ಕೋರ್ಸ್ ಗೆ ಮೇಲ್ಪಟ್ಟು ಇರಬೇಕು. ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರಮಟ್ಟದ ವಿದ್ಯಾರ್ಥಿವೇತನದ ಆರ್ಥಿಕ ಸಹಾಯ ದೊರೆಯುತ್ತದೆ ಹಾಗೂ ಪಾಲಿಟೆಕ್ನಿಕ್ ಉತ್ತಮ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸಿಕೊಡಲಾಗುವುದು. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗಿದೆ.

ಪ್ರವೇಶಾತಿಗಾಗಿ ಅರ್ಜಿಗಳನ್ನು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ 200 ರೂ. ಹಾಗೂ ಎಸ್‌ಸಿ, ಎಸ್‌ಟಿ, ಪ್ರವರ್ಗ-1 ಇವರಿಗೆ 100 ರೂ. ನಗದು ಅಥವಾ ಡಿಡಿ ಮೂಲಕ ಮೈಸೂರಿನಲ್ಲಿ ಸಂದಾಯವಾಗುವಂತೆ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಛಯ, ಮೈಸೂರು 570-006 ಇಲ್ಲಿಗೆ ಜೂ.05 ರೊಳಗಾಗಿ ಕಳುಹಿಸಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.jsspda.org ಗೆ ಭೇಟಿ ನೀಡಿ ಅರ್ಜಿ ಅಥವಾ ಇನ್ನಿತರೆ ಮಾಹಿತಿಗಾಗಿ ಮೊ.9844644937 ಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಮೈಸೂರು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮ ಭೂ ನೋಂದಣಿ ಆರೋಪ ಖಂಡಿಸಿ ರೈತ ಸಂಘ ಪಾದಯಾತ್ರೆ



• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**

ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲೂಕಿನ ಹಳೇಕೋಟೆ ಹಾಗೂ ಸಿರಿಗೇರಿ ಗ್ರಾಮಗಳಲ್ಲಿನ ಸರ್ಕಾರಿ ಮತ್ತು ಇನಾಂ ಜಮೀನುಗಳನ್ನು ಭೂಗಳ್ಳರು ಹಾಗೂ ಕೆಲವು ಅಧಿಕಾರಿಗಳು ಸೇರಿಕೊಂಡು ಅಕ್ರಮವಾಗಿ ತಮ್ಮ ಸಂಬಂಧಿಕರ ಹೆಸರಿಗೆ ನೋಂದಣಿ ಮಾಡಿಸಿರುವುದಾಗಿ ಆರೋಪಿಸಿ, ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕು ಸಮಿತಿ ವತಿಯಿಂದ ಸಿರುಗುಪ್ಪದಿಂದ ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿವರೆಗೆ ಎರಡು ದಿನಗಳ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿ ಪತ್ರದಲ್ಲಿ ರೈತ ಸಂಘದ ಮುಖಂಡರು, ಸಿರುಗುಪ್ಪ ತಾಲೂಕಿನ ಹಳೇಕೋಟೆ ಗ್ರಾಮದ ವಿವಿಧ ಸರ್ವೆ ನಂಬರಿನ ಸುಮಾರು 67.93 ಎಕರೆ ಜಮೀನುಗಳು ಮದ್ರಾಸ್ ಮೂಲದ ಕೆ. ಜ್ಞಾನಾನಂದಂ ಹಾಗೂ ವೇಣುಗೋಪಾಲ್ ಎಂಬುವರ ಹೆಸರಲ್ಲಿ ಪಹಣಿಯಲ್ಲಿ ದಾಖಲಾಗಿವೆ. ಆದರೆ ಕಳೆದ 80 ರಿಂದ 90 ವರ್ಷಗಳಿಂದ ಈ ಜಮೀನಿನ ಮೂಲ ಪಟ್ಟಾದಾರರು ಅಥವಾ ಅವರ ವಾರಸುದಾರರು ಯಾರೂ ಇಲ್ಲಿಗೆ ಬಂದಿರುವುದಿಲ್ಲ ಎಂದು ಆರೋಪಿಸಿದ್ದಾರೆ.

ಈ ಜಮೀನುಗಳಲ್ಲಿ ಕೆಲವು ಭಾಗ ಬೀಳಾಗಿ ಉಳಿದಿದ್ದು, ಇನ್ನೂ ಕೆಲವು ಜಮೀನುಗಳನ್ನು ಎಸ್.ಸಿ ಹಾಗೂ ಎಸ್.ಟಿ ಸಮುದಾಯದ ರೈತರು ದಶಕಗಳಿಂದ ಸಾಗುವಳಿ ಮಾಡುತ್ತಿದ್ದಾರೆ. ಇಂತಹ ಜಮೀನುಗಳನ್ನು ಕೆಲ ಭೂಗಳ್ಳರು ಸೇರಿಕೊಂಡು ಅಕ್ರಮವಾಗಿ ಕಬಳಿಸಲು ಯತ್ನ ನಡೆಸಿದ್ದು, ಬಳ್ಳಾರಿ ಹೃದಯಾಲಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ವೃದ್ಧ ವ್ಯಕ್ತಿಯ ಹೆಸರಿನಲ್ಲಿ ನಕಲಿ ಆಧಾರ್ ಕಾರ್ಡ್ ಸೇರಿದಂತೆ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, 2024ರ ನವೆಂಬರ್ 4ರಂದು ಕಾನೂನುಬಾಹಿರವಾಗಿ ವೀಲುನಾಮ ನೋಂದಣಿ ಮಾಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಪ್ರಕ್ರಿಯೆಯಲ್ಲಿ ಸಿರುಗುಪ್ಪ ಸಬ್ ರಿಜಿಸ್ಟ್ರಾರ್ ಯಲ್ಲಾರೆಡ್ಡೆಪ್ಪ ಸೇರಿದಂತೆ ಕೆಲ ಅಧಿಕಾರಿಗಳ ಪಾತ್ರವಿದೆ ಎಂದು ರೈತ ಸಂಘ ಗಂಭೀರ ಆರೋಪ ಮಾಡಿದೆ. ಸಂಬಂಧಿತ ದಾಖಲೆಗಳ ಆಧಾರದ ಮೇಲೆ ರೈತರು ಜಿಲ್ಲಾಧಿಕಾರಿ, ಸಹಾಯಕ ಆಯುಕ್ತರು ಹಾಗೂ ತಹಶೀಲ್ದಾರರಿಗೆ ಆಕ್ಷೇಪಣೆ ಸಲ್ಲಿಸಿದ ಹಿನ್ನೆಲೆ ತಹಶೀಲ್ದಾರರು ವೀಲುನಾಮದ ವೈಧ್ಯತೆ ಬಗ್ಗೆ ಅನುಮಾನ ವ್ಯಕ್ತಪಡಿಸಿ ತಿರಸ್ಕರಿಸಿದ್ದಾರೆ ಎಂದು ತಿಳಿಸಲಾಗಿದೆ.

ಇನ್ನೊಂದೆಡೆ, ಸಿರಿಗೇರಿ ಗ್ರಾಮದ ಸರ್ವೆ ನಂಬರ್ 362ರಲ್ಲಿರುವ ಸುಮಾರು 46.51 ಎಕರೆ ಸರ್ಕಾರಿ ಇನಾಂ ಜಮೀನನ್ನು ಸಹ ಅಕ್ರಮವಾಗಿ ಖಾಸಗಿ ವ್ಯಕ್ತಿಗಳ ಹೆಸರಿಗೆ ವರ್ಗಾವಣೆ ಮಾಡಲು ಪ್ರಯತ್ನ ನಡೆದಿದೆ ಎಂದು ಆರೋಪಿಸಲಾಗಿದೆ. ಈ ಜಮೀನಿಗೆ ಯಾರಿಗೂ ಮರು ಮಂಜೂರಾತಿ ಆಗಿಲ್ಲ ಹಾಗೂ ರೈತವಾರಿ ಹಕ್ಕುಪತ್ರ ಕೂಡ ನೀಡಲಾಗಿಲ್ಲ. ಆದರೂ, ನಕಲಿ ದಾಖಲೆಗಳ ಆಧಾರದ ಮೇಲೆ ಕೆಲವು ವ್ಯಕ್ತಿಗಳ ಹೆಸರಿಗೆ ನೋಂದಣಿ ಮಾಡಲಾಗಿದೆ ಎಂದು ಮನವಿ ಪತ್ರದಲ್ಲಿ ಹೇಳಲಾಗಿದೆ.

**130 ಎಕರೆ ಸರ್ಕಾರಿ ಹಾಗೂ ಇನಾಂ ಜಮೀನು ಕಬಳಿಕೆ ಯತ್ನ ಆರೋಪ ಸಂಬಂಧಿತ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ**

ಸುಮಾರು 20 ವರ್ಷಗಳ ಹಿಂದೆ ಅಂದಿನ ಸಿರುಗುಪ್ಪ ಶಾಸಕರು ಕೂಡ ಈ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆದು ಅರ್ಹ ಫಲಾನುಭವಿಗಳಿಗೆ ಹಂಚಿಕೆ ಮಾಡಬೇಕೆಂದು ಸೂಚನೆ ನೀಡಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ರೈತ ಸಂಘ ಅಸಮಾಧಾನ ವ್ಯಕ್ತಪಡಿಸಿದೆ.

ಹಲವಾರು ಬಾರಿ ಜಿಲ್ಲಾಧಿಕಾರಿ, ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದ್ದರೂ ಅಧಿಕಾರಿಗಳು ಕ್ರಮ ಕೈಗೊಂಡಿಲ್ಲ. ಇದರಿಂದ ಭೂಗಳ್ಳರು ಹಾಗೂ ಕೆಲವು ಅಧಿಕಾರಿಗಳ ನಡುವೆ ಶಾಮೀಲು ಇರುವ ಅನುಮಾನ ವ್ಯಕ್ತವಾಗುತ್ತಿದೆ ಎಂದು ಆರೋಪಿಸಲಾಗಿದೆ.

ಈ ಎಲ್ಲಾ ಜಮೀನುಗಳನ್ನು ಬಳಿಕ ಸಮಾಜ ಕಲ್ಯಾಣ ಇಲಾಖೆಯ ಭೂ ಒಡೆತನ ಯೋಜನೆಯಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಸಂಚು ರೂಪಿಸಲಾಗಿದೆ ಎಂದು ರೈತ ಸಂಘ ದೂರಿದೆ. ವಾಲ್ಮೀಕಿ ನಿಗಮ ಹಗರಣದ ಮಾದರಿಯಲ್ಲಿ ಎಸ್.ಸಿ ಹಾಗೂ ಎಸ್.ಟಿ ಸಮುದಾಯಕ್ಕೆ ಮೀಸಲಾದ ಅನುದಾನವನ್ನು ದುರುಪಯೋಗಪಡಿಸಿಕೊಳ್ಳುವ ಯತ್ನ ನಡೆದಿದೆ ಎಂದು ಆರೋಪಿಸಲಾಗಿದೆ.

ದೇಶನೂರು ಗ್ರಾಮದಲ್ಲಿ 60-70 ವರ್ಷಗಳಿಂದ ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ 80ಕ್ಕೂ ಹೆಚ್ಚು ಬಡ ಕುಟುಂಬಗಳಿಗೆ ಇಂದಿಗೂ ಹಕ್ಕುಪತ್ರ ನೀಡಿಲ್ಲ. ಆದರೆ ಭೂಗಳ್ಳರಿಗೆ ಅನುಕೂಲವಾಗುವಂತೆ ಸರ್ಕಾರಗಳು ನಡೆದುಕೊಳ್ಳುತ್ತಿರುವುದು ದುಃಖಕರ ಎಂದು ರೈತ ಸಂಘ ಟೀಕಿಸಿದೆ.

ರೈತ ಸಂಘದ ಪ್ರಮುಖ ಬೇಡಿಕೆಗಳಲ್ಲಿ ಸಿರುಗುಪ್ಪ ಸಬ್ ರಿಜಿಸ್ಟಾರ್ ಯಲ್ಲಾರೆಡ್ಡೆಪ್ಪ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವುದು, ಅಕ್ರಮವಾಗಿ ನೋಂದಣಿ ಮಾಡಲಾದ ಸುಮಾರು 130 ಎಕರೆ ಜಮೀನುಗಳನ್ನು ಸರ್ಕಾರ ವಶಕ್ಕೆ ಪಡೆಯುವುದು, ಬಡ ಎಸ್.ಸಿ ಮತ್ತು ಎಸ್.ಟಿ ಕುಟುಂಬಗಳಿಗೆ ಹಂಚಿಕೆ ಮಾಡುವುದು ಹಾಗೂ ಈ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುವುದು ಸೇರಿವೆ.

ಈ ಎಲ್ಲಾ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಿ ಬಡ ರೈತರಿಗೆ ನ್ಯಾಯ ಒದಗಿಸಬೇಕು ಎಂದು ರೈತ ಸಂಘ ಒತ್ತಾಯಿಸಿದೆ.

# ನೂತನ ಲೀಡಕರ್ ಮಳಿಗೆ ಪ್ರಾರಂಭ

• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ:

ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ನವನಗರದ ಸೆಕ್ಟರ್ ನಂ 22 ರಲ್ಲಿ ಡಾ.ಬಾಬು ಜಗಜೀವನ ರಾಂ ಭವನದ ಆವರಣದ ಹಿಂಬಾಗದ ರಸ್ತೆ ಕಡೆ ನೂತನ ಲೀಡಕರ್ ಮಾರಾಟ ಮಳಿಗೆಯನ್ನು ಪ್ರಾರಂಭಿಸಲಾಗಿರುತ್ತದೆ.

ಮಳಿಗೆಯಲ್ಲಿ ಅಪ್ಪಟ ಚರ್ಮದ ಉತ್ಪನ್ನಗಳಾದ ಶ್ಯೂ, ಚಪ್ಪಲಿಗಳು, ಬೆಲ್ಟ್, ಪರ್ಸ ಹಾಗೂ ವ್ಯಾನಿಟಿ ಬ್ಯಾಗ್‌ಗಳು ದೊರೆಯುತ್ತವೆ. ಮೇ 31 ರವರೆಗೆ ಎಲ್ಲಾ ಚರ್ಮ ಉತ್ಪನ್ನಗಳ ಮೇಲೆ ಶೇ. 15% ರಷ್ಟು ರಿಯಾಯಿತಿ ದರದಲ್ಲಿ ಮಾರಾಟ ಇರುತ್ತದೆ. ಆದ್ದರಿಂದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ನೂತನ ಮಾರಾಟ ಮಳಿಗೆಗೆ ಬೇಟಿ ನೀಡಿ ರಿಯಾಯಿತಿ ಮಾರಾಟದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫಸಲ್ ಭೀಮಾ: ತಿರಸ್ಕೃತ ಪ್ರಸ್ತಾವನೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

2024-25 ನೇ ಸಾಲಿನ ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮಿನ ಫಸಲ್ ಭೀಮಾ(ವಿಮಾ) ಯೋಜನೆಯಡಿಯಲ್ಲಿ ಬೆಳೆ ಸಮೀಕ್ಷೆಯೊಂದಿಗೆ ಹೋಂದಾಣಿಕೆಯಾಗದೆ ತಿರಸ್ಕೃತಗೊಂಡ ಪ್ರಸ್ತಾವನೆಗಳಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಪ್ರಧಾನಮಂತ್ರಿ ಫಸಲ್ ಬೀಮಾ ಯೋಜನೆಯಡಿ 2024-25ನೇ ಸಾಲಿನ ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮುಗಳಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಬೆಳೆ ಸಮೀಕ್ಷೆಯ ದತ್ತಾಂಶಗಳನ್ನು ಬೆಳೆ ನೋಂದಣಿಯಾದ ಪ್ರಸ್ತಾವನೆಗಳೊಂದಿಗೆ ಹೋಲಿಕೆ ಮಾಡಿ ಹೊಂದಾಣಿಕೆಯಾಗದ ತಿರಸ್ಕೃತಗೊಂಡ ಪ್ರಸ್ತಾವನೆಗಳಿಗೆ ರೈತರು ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ಪ್ರಸ್ತುತ ಸಂರಕ್ಷಣೆ ತಂತ್ರಾಂಶದನ್ವಯ ಕೊಪ್ಪಳ ತಾಲೂಕಿಗೆ ಸಂಬಂಧಿಸಿದಂತೆ ಮುಂಗಾರು 1,630, ಹಿಂಗಾರು 754 ಹಾಗೂ ಬೇಸಿಗೆಯ 8 ಪ್ರಸ್ತಾವನೆಗಳು ತಿರಸ್ಕೃತಗೊಂಡಿದ್ದು, ವಿಮಾ ಅರ್ಜಿ ತಿರಸ್ಕೃತಗೊಂಡ ಬಗ್ಗೆ ಸಂಬಂಧಪಟ್ಟ ರೈತರ ಆಕ್ಷೇಪಣೆ ಇದ್ದಲ್ಲಿ ಮಾತ್ರ ಮರುಪರಿಶೀಲಿಸಲು, ಬೆಳೆ ವಿಮೆಗೆ ನೋಂದಣಿಯಾಗಿರುವ ಬೆಳೆಯನ್ನು ಬೆಳೆದಿರುವ ಕುರಿತು ಅಗತ್ಯ ದಾಖಲೆಗಳೊಂದಿಗೆ ಮೇ 12 ರೊಳಗಾಗಿ ಕೊಪ್ಪಳದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಮನವಿಯನ್ನು ಸಲ್ಲಿಸಬೇಕು.

ಮನವಿ ಸಲ್ಲಿಸಲು 2024-25ರ ಪಹಣಿ ಪತ್ರಿಕೆಯಲ್ಲಿ (ಆರ್.ಟಿ.ಸಿ) ವಿಮೆಗೆ ನೋಂದಾಯಿಸಿದ ಬೆಳೆ ನಮೂದಾಗಿರಬೇಕು. ಬೆಂಬಲ ಬೆಲೆ ಪ್ರಯೋಜನ ಪಡೆದಿದ್ದಲ್ಲಿ, ಅದರ ರಶೀದಿ ಮತ್ತು ವಿಮೆಗೆ ನೋಂದಾಯಿತ ಬೆಳೆಯ ಉತ್ಪನ್ನವನ್ನು ಎಪಿಎಂಸಿ ಮಾರುಕಟ್ಟೆಗೆ ಮಾರಾಟ ಮಾಡಿದ ರಶೀದಿಯೊಂದಿಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಕೊಪ್ಪಳದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಮಾನಸಿಕ ಆರೋಗ್ಯ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಮನೋಚೈತನ್ಯ ಕಾರ್ಯಕ್ರಮದಡಿ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಾ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೇ ಮಾಹೆಯಲ್ಲಿ ಕೆಳಕಂಡ ದಿನಾಂಕಗಳಂದು ಮಾನಸಿಕ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

ತಪಾಸಣಾ ಶಿಬಿರದ ವಿವರ ಇಂತಿದೆ. ಮೇ 2 ರಂದು ಕಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರ, ಮೇ 5 ರಂದು ಆಳಂದ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮೇ 6 ರಂದು ದೇವಲ ಗಾಣಗಾಪುರ ಸಂಗಮ, ಮೇ 7 ರಂದು ರಾಜ್ಯ ಮಹಿಳಾ ನಿಲಯ ಮತ್ತು ಬುದ್ಧಿಮಾಂದ್ಯ ಬಾಲಕಿಯರ ಮಂದಿರ, ಮೇ 8 ರಂದು ಅಫಜಲಪುರ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮೇ 12 ರಂದು ಚಿಂಚೋಳಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮೇ 14 ರಂದು ವೃದ್ಧಾಶ್ರಮ, ಮೇ 15 ರಂದು ಜೇವರ್ಗಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮೇ 16 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಮೇ 19 ರಂದು ಚಿತ್ತಾಪುರ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮೇ 21 ರಂದು ಶಹಾಬಾದ ಸಮುದಾಯ ಆರೋಗ್ಯ ಕೇಂದ್ರ, ಮೇ 22 ರಂದು ಕಾಳಗಿ ಸಮುದಾಯ ಆರೋಗ್ಯ ಕೇಂದ್ರ, ಮೇ 26 ರಂದು ಸೇಡಂ ತಾಲೂಕು ಸಾರ್ವಜನಿಕ ಆಸ್ಪತ್ರೆ ಹಾಗೂ ಮೇ 27 ರಂದು ಕಲಬುರಗಿ ನಿರಾಶ್ರಿತ ಪರಿಹಾರ ಕೇಂದ್ರ.

ಮಾನಸಿಕ ಕಾಯಿಲೆಗಳ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಗಳನ್ನು ಸಮುದಾಯದಲ್ಲಿ ಗುರುತಿಸಿ ಅವರನ್ನು ಈ ಶಿಬಿರ ನಡೆಯುವ ದಿನಾಂಕದಂದು ಕರೆತಂದು ತಜ್ಞರಿಗೆ ತೋರಿಸಿ ಚಿಕಿತ್ಸೆ ಕೊಡಿಸಬೇಕು ಅವರು ತಿಳಿಸಿದ್ದಾರೆ.

# ಕಾಳಗಿ: ಸಹಾಯಧನ ಪಡೆಯಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

2026-27ನೇ ಸಾಲಿನ ಎಸ್.ಎಫ್.ಸಿ. ಮುಕ್ತ ನಿಧಿ ಯೋಜನೆಯಡಿ ಒಟ್ಟು ಹಂಚಿಕೆಯಾದ ಅನುದಾನದಲ್ಲಿ ಕಾಳಗಿ ಪಟ್ಟಣದ ವ್ಯಾಪ್ತಿಯಲ್ಲಿ ವೈಯಕ್ತಿಕ ಸೌಲಭ್ಯದ ಶೇ. 24.10 ಮತ್ತು 7.25 ರಲ್ಲಿ ಕಾಳಗಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಇತರೆ ಹಿಂದುಳಿದ ವರ್ಗದ ಉನ್ನತ ವ್ಯಾಸಂಗ ಮಾಡುತ್ತಿರುವ ವಿಧ್ಯಾರ್ಥಿಗಳಿಂದ ಸಹಾಯ ಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಾಳಗಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯೊಂದಿಗೆ ಪಾಸ್‌ಪೋರ್ಟ್ ಸೈಜ್ ಭಾವಚಿತ್ರ, ಆಧಾರ ಕಾರ್ಡ ಮತ್ತು ಫೋಟೊ, ರೇಷನ್ ಕಾರ್ಡ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪ್ರಸ್ತುತ ಸಾಲಿನ ಉನ್ನತ ವ್ಯಾಸಂಗಮಾಡುತ್ತಿರುವ ಅಂಕ ಪಟ್ಟಿ, ವಿದ್ಯಾರ್ಥಿ ಐಡಿ ಕಾರ್ಡ, ವ್ಯಾಸಂಗ ಪ್ರಮಾಣ ಪತ್ರ ಹಾಗೂ ಎಲ್ಲಾ ದಾಖಲಾತಿಗಳು ಧೃಢೀಕರಣದೊಂದಿಗೆ 2026ರ ಮೇ 15 ರೊಳಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಚೇರಿಯನ್ನು ಸಂಪರ್ಕಿಸಲುಕೋರಲಾಗಿದೆ.

# ಹಗರಿಬೊಮ್ಮನಹಳ್ಳಿ ಪುರಸಭೆಗೆ ನೂತನ ಅಧ್ಯಕ್ಷರಾಗಿ ರೇಷ್ಮಾ ಸಿಕಂದರ್ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ , ಹಗರಿಬೊಮ್ಮನಹಳ್ಳಿ

ಪುರಸಭೆಯ ಅಧ್ಯಕ್ಷರ ಚುನಾವಣೆಯಲ್ಲಿ ಸದಸ್ಯೆ ಕೆ.ರೇಷ್ಮಾ ಸಿಕಂದರ್ ಅವರು ಎರಡನೆಯ ಅವಧಿಗೆ ನೂತನ ಅಧ್ಯಕ್ಷರಾಗಿ 13 ಮತಗಳು ಪಡೆದು ಚುನಾಯಿತರಾದರು.ನಿಕಟಪೂರ್ವ ಅಧ್ಯಕ್ಷ ಎಂ.ಮರಿರಾಮಪ್ಪ ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಏಪ್ರಿಲ್ 30 ರಂದು ಚುನಾವಣೆ ನಡೆಸಲಾಯಿತು. ಬಿಜೆಪಿ ಪಕ್ಷದ ಅಭ್ಯರ್ಥಿಯಾಗಿ ಬಣಕಾರ್ ಸುರೇಶ್, ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಕೆ.ರೇಷ್ಮಾ ಸಿಕಂದರ್ ನಾಮಪತ್ರ ಸಲ್ಲಿಸಿದ್ದರು.

ಒಟ್ಟು 23 ಸದಸ್ಯಸ್ಥಾನ ಹೊಂದಿರುವ ಪುರಸಭೆಯಲ್ಲಿ ಕೆ.ರೇಷ್ಮಾ ಸಿಕಂದರ್ ಪರ 13 ಮತಗಳು ಪಡೆದರೇ, ಬಣಕಾರ್ ಸುರೇಶ್ ಪರ 9 ಮತಗಳ ಪಡೆದು ಪರಾಜಿತರಾದರು.ಮೊದಲನೆಯ ಅವಧಿಗೆ ಅಧ್ಯಕ್ಷರಾಗಿ ಎಂ.ಮರಿರಾಮಪ್ಪ, ಉಪಾಧ್ಯಕ್ಷರಾಗಿ ಅಂಬಿಕಾ ದೇವೆಂದ್ರಪ್ಪ ಆಯ್ಕೆ ಆಗಿದ್ದರು.

ಈ ವೇಳೆ ಉಪಾಧ್ಯಕ್ಷರಾದ ಸೆರೆಗಾರ ನೇತ್ರಾವತಿ, ಸದಸ್ಯರಾದ ಪವಾಡಿ ಹನುಮಂತಪ್ಪ, ರಾಜೇಶ್ ಬ್ಯಾಡಗಿ, ಅಜೀಜುಲ್ಲಾ, ಖಾಜಾಬನ್ನಿ ಅಲ್ಲಾಭಕ್ಷಿ, ಗುಂಡ್ರು ಸರಸ್ವತಿ, ಮಂಜುಳಾ ಕೃಷ್ಣನಾಯ್ಕ, ಅಂಬಿಕಾ ದೇವೆಂದ್ರಪ್ಪ, ತೆಲಗಿ ಇಸ್ಮಾಯಿಲ್, ಜೋಗಿ ಹನುಮಂತ, ಕೆ.ಎಂ.ನವೀನ್, ದೀಪಕ್ ಕಠಾರೆ, ಬಣಕಾರ್ ಸುರೇಶ್, ಬಿ.ಗಂಗಾಧರ, ಆರ್. ಕಮಲಮ್ಮ, ಅಂಬಳಿ ಮಂಗಳ ರವೀಂದ್ರಗೌಡ, ನಾಗರಾಜ ಜನ್ನು ಚುನಾವಣೆಯಲ್ಲಿ ಹಾಜರಿದ್ದರು.

ಬಿಜೆಪಿ ಸದಸ್ಯರಾದ ಮಲ್ಲೇಶ್ವರಿ ಭರತ್, ಎಚ್. ಎಂ.ಚೆನ್ನಮ್ಮ ವಿಜಯಕುಮಾರ್, ಭೋವಿ ವೀರೇಶ್ ಗೈರಾಗಿದ್ದರು.ಬಿಜೆಪಿ ಅಭ್ಯರ್ಥಿ ಪರವಾಗಿ ಶಾಸಕ ಕೆ.ನೇಮಿರಾಜನಾಯ್ಕ ಮತ ಚಲಾಯಿಸಿದರೇ, ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಸಂಸದ ಈ.ತುಕಾರಾಂ ಮತ ಚಲಾಯಿಸಿದರು.

ಭಾರಿ ಪೊಲೀಸ್ ಬಿಗಿ ಬಂದೋಬಸ್ತ್ : ಡಿವೈಎಸ್ಪಿ ಮಲ್ಲೇಶ್ ದೊಡ್ಡಮನಿ, ಸಿಪಿಐ ವಿಕಾಸ್ ಲಮಾಣಿ ನೇತೃತ್ವದಲ್ಲಿ 5 ಸಿಪಿಐ ಸೇರಿದಂತೆ 6 ಪಿಎ[illegible]ಗಳು ಹಾಗೂ 100 ಪೇದೆಗಳನ್ನು ನಿಯೋಜನೆ ಮಾಡಲಾಗಿತ್ತು

# ಶ್ರೀ ಬಹುರೂಪಿ ಚೌಡಯ್ಯ ಹಗಲುವೇಷ ಕಲಾವಿದರ ಸಂಘದಿಂದ ಜಾನಪದ

• ಮಲ್ಲಮ್ಮ ನುಡಿ ವಾರ್ತೆ, ಮಸ್ಕಿ

ಪಟ್ಟಣದ ಗಚ್ಚಿನ ಹಿರೇಮಠದ ಆವರಣದಲ್ಲಿ ಶ್ರೀ ಬಹುರೂಪಿ ಚೌಡಯ್ಯ ಹಗಲುವೇಷ ಕಲಾವಿದರ ಟ್ರಸ್ಟ್ ಹಸಮಕಲ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರು ಇವರ ಸಹಯೋಗದಲ್ಲಿ ಮಂಗಳವಾರ ಜಾನಪದ ಕಲಾ ಸಂಭ್ರಮ ಅದ್ದೂರಿಯಾಗಿ ಜರುಗಿತು.

ಈ ಕಾರ್ಯಕ್ರಮವನ್ನು ಗಚ್ಚಿನ ಹಿರೇಮಠದ ಶ್ರೀ ವರರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಮೆರವಣಿಗೆ ಕಲಾತಂಡಕ್ಕೆ ಚಾಲನೆ ನೀಡಿದರು. ಈ ಕಾರ್ಯಕ್ರಮ ಉದ್ದೇಶಿಸಿ ಪುರಸಭೆ ಅಧ್ಯಕ್ಷ ಸುರೇಶ ಅರಸೂರು ಮಾತನಾಡಿ ಹಲವು ವರ್ಷಗಳಿಂದ ಬಹುರೂಪಿ ಚೌಡಯ್ಯ ಕಲಾವಿದರ ಟ್ರಸ್ಟ್ ನ ಕಲಾವಿದರು ವಿವಿಧ ಜಾನಪದ ಕಲೆಗಳ ಪ್ರದರ್ಶನದ ಮೂಲಕ ತಾಲೂಕಿನಲ್ಲಿ ತಮ್ಮದೇಯಾದ ಕಲಾ ಸೇವೆಯನ್ನು ಮಾಡುತ್ತಾ ಬಂದಿದ್ದಾರೆ ಎಂದರು.ಕಾರ್ಯಕ್ರಮದಲ್ಲಿ ಜಾನಪದ ಅಕಾಡೆಮಿ ಪುರಸ್ಕೃತ ಜಂಬಣ್ಣ ಹಸಮಕಲ್, ಶ್ರೀ ಬಹುರೂಪಿ ಚೌಡಯ್ಯ ಹಗಲುವೇಶ ಕಲಾವಿದರ ಅಧ್ಯಕ್ಷ ಅಮರೇಶ್ ಹಸಮಕಲ್ ಸೇರಿದಂತೆ ವಿವಿಧ ಹಳ್ಳಿಗಳಿಂದ ಹಲವು ಕಲಾವಿದರು ಮತ್ತು ಕಲಾತಂಡದಿಂದ ತಮ್ಮದೇ ಆದ ಕಲಾಪ್ರದರ್ಶನವನ್ನು ಪ್ರದರ್ಶಿಸಿದರು. ಇದಕ್ಕೂ ಮುನ್ನ ಗಚ್ಚಿನ ಮಠದ ಶ್ರೀ ವರರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಈ ವೇಳೆ ಮಹಾಂತೇಶ್ ಮಸ್ಕಿ, ವಿದ್ಯಾವತಿ ವನಿಕೆ, ನಾರಾಯಣಪ್ಪ ಮಾಡಸಿರವಾರ, ರಂಗಪ್ಪ ಮಾಸ್ತರ್ ತಡಕಲ್ ಸೇರಿದಂತೆ ವಿವಿಧ ಗಣ್ಯರು, ಕಲಾತಂಡಗಳು ಹಾಗೂ ಕಲಾವಿದರು ಭಾಗವಹಿಸಿದ್ದರು.



# ಪಡಿತರ ಅಕ್ಕಿಯ ಅಕ್ರಮ ಮಾರಾಟಕ್ಕೆ ಕಡಿವಾಣ ಹಾಕಿ: ರೆಡ್ಡಿ ಶ್ರೀನಿವಾಸ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ಅನ್ನಭಾಗ್ಯ ಯೋಜನೆಯಡಿ ನೀಡುತ್ತಿರುವ ಪಡಿತರ ಅಕ್ಕಿಯನ್ನು ಕಳ್ಳಸಾಗಣೆ ಮಾಡುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ಜಿಲ್ಲೆಯಲ್ಲಿ ಪಡಿತರ ಅಕ್ಕಿ ಕಳ್ಳಸಾಗಣೆಗೆ ಯಾವುದೇ ರೀತಿಯ ಅವಕಾಶ ನೀಡದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಆಹಾರ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಗುರುವಾರದಂದು ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವ ಪಡಿತರ ಧಾನ್ಯಗಳನ್ನು ಮಾರಾಟಕ್ಕೆ ಅವಕಾಶವಿರುವುದಿಲ್ಲ. ಆದ್ಯಾಗೂ ಸಹ ಪಡಿತರ ಅಕ್ಕಿಯನ್ನು ಅಕ್ರಮ ದಾಸ್ತಾನು ಮತ್ತು ಮಾರಾಟ ಮಾಡುತ್ತಿರುವ ಪ್ರಕರಣಗಳು ವರದಿಯಾಗಿದೆ. ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ತ್ವರಿತವಾಗಿ ಕ್ರಮ ಕೈಗೊಳ್ಳುವುದರ ಜೊತೆಗೆ ಅವರ ಮೇಲೆ ಚಾರ್ಜ್ ಶೀಟ್ ಹಾಕುವ ವ್ಯವಸ್ಥೆಯಾಗಬೇಕು. ಅಕ್ರಮ ಪಡಿತರ ಚೀಟಿ ಮಾರಾಟಕ್ಕೆ ಸಂಬಂಧಿಸಿದಂತೆ ನ್ಯಾಯಾಲಯವು ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಿದ್ದು, ಇದರ ಬಗ್ಗೆ ಜನರಿಗೆ ಅರಿವು ಮೂಡಿಸಬೇಕು. ಪಡಿತರ ವಿತರಣೆಯನ್ನು ಜನರಿಗೆ ಅನುಕೂಲವಾಗುವಂತೆ ಮಾಡಿ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸಬೇಕು. ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಸಿಸಿ ಕ್ಯಾಮರಾ ಅಳವಡಿಕೆಗೆ ಕ್ರಮ ಕೈಗೊಳ್ಳಿ. ಆಹಾರ ಸಾಮಾಗ್ರಿಗಳ ವಿತರಣೆಗೂ ಮುನ್ನ ಅದರ ಗುಣಮಟ್ಟವನ್ನು ಪರಿಶೀಲಿಸಬೇಕು. ಈ ಬಗ್ಗೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಎಲ್ಲಾ ಅಧ್ಯಕ್ಷರು, ಸದಸ್ಯರು ಸಹ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದರು.

ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳು ತಮ್ಮ ಸಮಸ್ಯೆಗಳನ್ನು ಪರಿಹರಿಸಲು ಸಿಡಿಪಿಓ ಕಛೇರಿಗೆ ಭೇಟಿ ನೀಡುವ ಸಂದರ್ಭದಲ್ಲಿ ಅವರಿಗೆ ಸರಿಯಾದ ರೀತಿಯಲ್ಲಿ ಸ್ಪಂದಿಸುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ. ಇದನ್ನು ಕೂಡಲೇ ಸರಿಪಡಿಸಿಕೊಳ್ಳಬೇಕು.ಮರಣ ಹೊಂದಿದ ಫಲಾನುಭಿಗಳಿಗೆ ಸಹಾಯಧನ



ಸಂದಾಯವಾಗುತ್ತಿದ್ದಲ್ಲಿ ತಕ್ಷಣ ಅದನ್ನು ನಿಲ್ಲಿಸಲು ಕ್ರಮ ಕೈಗೊಳ್ಳಬೇಕು. ಗೃಹಜ್ಯೋತಿ ಯೋಜನೆಯಡಿ ನೋಂದಣಿಯಾಗದಿರುವ ಅರ್ಜಿಗಳನ್ನು ಪರಿಶೀಲಿಸಿ, ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಸರ್ಕಾರದಿಂದ ಯುವನಿಧಿ ಪ್ಲಸ್ ಉಪಕ್ರಮದಡಿಯಲ್ಲಿ ನೀಡುತ್ತಿರುವ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳನ್ನು ನೋಂದಾಯಿಸಬೇಕು. ಶಕ್ತಿ ಯೋಜನೆಯಡಿ ಇಲ್ಲಿಯವರೆಗೆ ನಮ್ಮ ಜಿಲ್ಲೆಯಲ್ಲಿ ಸುಮಾರು 11 ಕೋಟಿ 22 ಲಕ್ಷಕ್ಕೂ ಅಧಿಕ ಮಹಿಳಾ ಫಲಾನುಭವಿಗಳು ಉಚಿತ ಬಸ್ ಸೌಲಭ್ಯವನ್ನು ಪಡೆದುಕೊಂಡಿ- ದ್ದಾರೆ ಎಂದು ಹೇಳಿದರು.ಜನ ಸಾಮಾನ್ಯರ ಏಳ್ಗೆಗಾಗಿ ರಾಜ್ಯ ಸರ್ಕಾರವು ಶಕ್ತಿ ಯೋಜನೆ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಯುವನಿದಿ, ಈ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ರಾಜ್ಯ ಸರ್ಕಾರದ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳು ಬಡ, ಹಿಂದುಳಿದ ವರ್ಗಗಳ ಹಾಗೂ ಜನ ಸಾಮಾನ್ಯರ ಬದುಕಿಗೆ ಆಸರೆಯಾಗಿವೆ. ಈ ಯೋಜನೆಗಳಡಿ ನಮ್ಮ ಜಿಲ್ಲೆಯಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ ಸಾರ್ವಜನಿಕರಿಗೆ ತಿಳಿಸಬೇಕು. ಈ ಬಗ್ಗೆ ಹೆಚ್ಚಿನ ಪ್ರಚಾರ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು. ಗ್ರಾ.ಪಂ ವ್ಯಾಪ್ತಿಯಲ್ಲಿ ಗ್ಯಾರಂಟಿ ಯೋಜನೆಗಳ ಸಭೆ ನಡೆಯಬೇಕು. ಮೇ 16 ಮತ್ತು 17 ರಂದು ನಡೆಯುವ ಕನಕಗಿರಿ ಉತ್ಸವದಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ಮಳಿಗೆಗಳನ್ನು ಹಮ್ಮಿಕೊಂಡು ಜನರಿಗೆ ಹೆಚ್ಚಿನ ಪ್ರಚಾರ ಮೂಡಿಸಲು ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾರಿಗಳಿಗೆ ಸೂಚನೆ ನೀಡಿದರು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಅರ್ಜಿ ಹಾಕಿದ ಫಲಾನುಭವಿಗಳ ಪೈಕಿ ಕೆಲವರಿಗೆ ಗೃಹಲಕ್ಷ್ಮಿ ಯೋಜನೆ ಸಹಾಯಧನ ಸಿಗುತ್ತಿಲ್ಲ. ಇದಕ್ಕಾಗಿ ಸೂಕ್ತ ಕಾರಣ ಏನು ಮತ್ತು ಅದಕ್ಕೆ ಯಾವ ರೀತಿ ಪರಿಹಾರ ಕಂಡುಕೊಳ್ಳಬಹುದು ಎಂಬುವುದರ ಬಗ್ಗೆ ಫಲಾನುಭವಿಗಳಿಗೆ ತಿಳಿಸಬೇಕು. ಮರಣ ಹೊಂದಿದ ಫಲಾನುಭವಿಗಳ ಮಾಹಿತಿಯನ್ನು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಆಯಾ ಗ್ರಾ.ಪಂ.ಗಳಿಗೆ ತಿಳಿಸುವ ಕೆಲಸ ಆಗಬೇಕು. ಗ್ರಾಮ ಸಭೆಗಳಲ್ಲಿಯೇ ಗ್ಯಾ.ಪಂ ಮಟ್ಟದ ಗ್ಯಾರಂಟಿ ಸಭೆಗಳನ್ನು ನಡೆಸಲು ಎಲ್ಲಾ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಯುವನಿಧಿ ಪ್ಲಸ್ ಕಾರ್ಯಕ್ರಮ ನಿರುದ್ಯೋಗಿ ವಿದ್ಯಾವಂತ ಯುವ ಜನರಿಗೆ ಉದ್ಯೋಗಕ್ಕೆ ಅರ್ಹರನ್ನಾಗಿ ಮಾಡುವ ಉದ್ದೇಶ ಹೊಂದಿದೆ. ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮಕ್ಕೆ ನೋಂದಣಿ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಬಿ ಖಾದ್ರಿ, ಮಂಜುನಾಥ ಗೊಂಡಬಾಳ, ಅಮರೇಶಪ್ಪ ಎಸ್.ಜಿ. ಅವರು ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಯಡಿ ಕೊಪ್ಪಳ ಜಿಲ್ಲೆಯ 3,21,019 ಫಲಾನುಭವಿಗಳಿಗೆ ಆಗಸ್ಟ್-2023 ರಿಂದ ಫೆಬ್ರವರಿ-2026ರವರೆಗೆ ಡಿಬಿಟಿ ಮೂಲಕ ಹಣ ಪಾವತಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಮಾರ್ಚ್-2026ರ ಅಂತ್ಯದವರೆಗೆ 2,89,212 ಗ್ರಾಹಕರಿಗೆ ಉಚಿತ ವಿದ್ಯುತ್ ಸೌಲಭ್ಯ ದೊರೆತಿದ್ದು, ಇದಕ್ಕಾಗಿ ಇಲ್ಲಿಯವರೆಗೆ 388.23 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ 3,63,521 ಪಡಿತರ ಕಾರ್ಡ್ಗಳಿದ್ದು, ಅನ್ನಭಾಗ್ಯ ಯೋಜನೆಯಡಿ ಏಪ್ರಿಲ್-2026ರ ವರೆಗೆ ಪ್ರತಿ ಸದಸ್ಯರಿಗೆ 10 ಕೆ.ಜಿ ಯಂತೆ 12,393 ಮೆ.ಟನ್ ಪಡಿತರ ಆಹಾರ ಪದಾರ್ಥ ಹಂಚಿಕೆ ಮಾಡಲಾಗಿದೆ. ಶಕ್ತಿ ಯೋಜನೆಯಡಿ ಮಾರ್ಚ್-2026ರ ಮಾಹೆಯಲ್ಲಿ 34,84,433 ಮಹಿಳೆಯರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದು, ಈ ಯೋಜನೆಯಡಿ ಜೂನ್-2023 ರಿಂದ ಮಾರ್ಚ್-2026ರ ವರೆಗೆ ಕೊಪ್ಪಳ ಜಿಲ್ಲೆಯಲ್ಲಿ 11,22,17,504 ಮಹಿಳೆಯರು ಸೌಲಭ್ಯ ಪಡೆದುಕೊಂಡಿದ್ದಾರೆ. ಯುವನಿಧಿ ಯೋಜನೆಯಡಿ ಜನವರಿ-2026ರವರೆಗೆ 14,266 ಫಲಾನುಭವಿಗಳು ನೋಂದಣಿಯಾಗಿದ್ದು, ಜನವರಿ ಅಂತ್ಯದವರೆಗೆ ಒಟ್ಟು ಮೊತ್ತ ರೂ. 30,32,02,500 ಪಾವತಿಸಲಾಗಿರುತ್ತದೆ ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

# ರೈತರರಿಗೆ ಹಗಲು ನಿರಂತರ ವಿದ್ಯುತ್, ಟಿಸಿ ಸರಿಪಡಿಸಲು ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ, ಹುಣಸೂರು

ರೈತರ ಪಂಪ್ ಸೆಟ್ ಗಳಿಗೆ ಹಗಲು ವೇಳೆಯಲ್ಲಿ ನಿರಂತರವಾಗಿ 7 ಗಂಟೆಯ ಮೂರು ಪೇಸ್ ಗಳ ವಿದ್ಯುತ್ ಕೊಡಬೇಕೆಂದು ಮತ್ತು ಸುಟ್ಟು ಹೋದ ಟ್ರಾನ್ಸ್ ಪಾರ್ಮ್ (ಟಿಸಿ) ಗಳನ್ನು 72 ಗಂಟೆಯೊಳಗೆ ಸರಿಪಡಿಸಬೇಕೆಂದು ಹಾಗೂ ಜ್ಯೋತು ಬಿದ್ದಿರುವ ವೈರ್ ಗಳನ್ನು ಸರಿಪಡಿಸಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿರುವ ಬಗ್ಗೆ ಹುಣಸೂರು ನಗರ ಚೆಸ್ಕಾಂ ಕಛೇರಿಯ ಮುಂಭಾಗದಲ್ಲಿ(ರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ತಾಲ್ಲೂಕು ಅದ್ಯಕ್ಷ ಬೆಂಕಿಪುರ ಚಿಕ್ಕಣ್ಣ ಹಾಗೂ ತಾಲೂಕು ಪ್ರಧಾನ ಕಾರ್ಯದರ್ಶಿ ಅಗ್ರಹಾರ ರಾಮೇಗೌಡ ನೇತೃತ್ವದಲ್ಲಿ 35 ಜನ ರೈತರು ಬೇಡಿಕೆಗಳಿಗೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದು, ಇಇ ಮಹೇಶ್ ಕುಮಾರ್ ರವರಿಗೆ ಮನವಿ ಪತ್ರವನ್ನು ಸಲ್ಲಿಸಿರುತ್ತಾರೆ.

ನಂತರ ಪತ್ರಿಕಾ ಹೇಳಿಕೆ ನೀಡ:ವಿದ್ಯುತ್ ಚ್ಛಕ್ತಿಯು ಹಗಲಿನ ಸಮಯ ಕನಿಷ್ಠ ಯಾವುದೇ ಕಡಿತ ಇಲ್ಲದೆ 7 ಗಂಟೆಗಳ ಅವಧಿಯಲ್ಲಿ ಪೂರೈಸಬೇಕು. ಹಾಗೂ

ಕೆಟ್ಟುಹೋಗಿರುವ ಟ್ರಾನ್ಸಾರ್ಮರ್ ಗಳನ್ನು 72 ಗಂಟೆಯೊಳಗೆ ರೈತರನ್ನು ಶೋಷಣೆ ಮಾಡದೇ ತುರ್ತಾಗಿ ಟೀಸಿಗಳನ್ನು ಅಳವಡಿಸಬೇಕು. ಎಂದರು

ರೈತರ ಕೃಷಿ ಪಂಪ್ ಸೆಟ್ ಗಳಿಗೆ ಸೋಲಾರ್ ಅಳವಡಿಸಲು ಆದ್ಯತೆ ನೀಡಿ ಈಗ ನೋಂದಾಯಿಸಿರುವ ರೈತರಿಗೆ ಹಣ ಕಟ್ಟಲು ಕಾಲಾವಕಾಶ ನೀಡಿ ಮತ್ತೊಮ್ಮೆ ನೋಂದಾಯಿಸುವ ರೈತರಿಗೆ ಹಣ ಕಟ್ಟಲು ಅವಕಾಶ, ಸೋಲಾರ್ ಸೌಲಭ್ಯವನ್ನು ಪಡೆದುಕೊಳ್ಳಲು ಅವಕಾಶ ಮಾಡಿಕೊಡಬೇಕು.

ವಿದ್ಯುತ್ ಚ್ಛಕ್ತಿಯು ಖಾಸಗಿಕರಣ ಮಾಡಲು ಅವಕಾಶ ಕೊಡದೆ ಸರ್ಕಾರದ ಅಧೀನದಲ್ಲೇ ಮುಂದುವರಿಯಬೇಕು.) ಜೋತು ಬಿದ್ದಿರುವ ವೈರುಗಳಿಂದ ಮತ್ತು ಶಿಥಿಲಗೊಂಡಿರುವ ಕಂಬಗಳಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿದ್ದು ಮತ್ತು ಅನಾಹುತ ಸಂಭವಿಸುತ್ತಿದ್ದು ಕೂಡಲೇ ವಿದ್ಯುತ್ ಚ್ಛಕ್ತಿ ಕಂಬಗಳನ್ನು ದುರಸ್ತಿಗೊಳಿಸಬೇಕು. ಎಂದರು

# 2026ನೇ ಸಾಲಿನ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ

• ಮಲ್ಲಮ್ಮನುಡಿವಾರ್ತೆ, ಕೊಪ್ಪಳ

ಜಿಲ್ಲಾಡಳಿತ ಭವನದ ಆಡಿಟೋರಿಂ ಹಾಲನಲ್ಲಿ ಏಪ್ರೀಲ್ 30ರಂದು ನಡೆದ ಸಮಾರಂಭದಲ್ಲಿ, ಸಾರ್ವಜನಿಕರಿಗೆ ಸರ್ಕಾರಿ ಸೌಲಭ್ಯ ಒದಗಿಸುವಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ 2026ನೇ ಸಾಲಿನ ಜಿಲ್ಲಾಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕೊಪ್ಪಳ ಅಬಕಾರಿ ಉಪ ಆಯುಕ್ತರ ಕಚೇ-ರಿಯ ಅಬಕಾರಿ ಹೆಡ್‌ಕಾನ್‌ಸ್ಟೇಬಲ್ ಹುಸೇನ್ ಬಾಷಾ, ಕುಷ್ಟಗಿಯ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಯ ಭೂಮಾಪಕ ರಾಘವೇಂದ್ರ ಕ.ಹೊಸಳ್ಳಿ, ಕರಮುಡಿಯ ಗ್ರಾಮಾಡಳಿತ ಅಧಿಕಾರಿ ಬಾಲನಗೌಡ್ರ ದೇವರಾಜ್,

ಹನುಮನಾಳ ಸಮುದಾಯ ಆರೋಗ್ಯ ಕೇಂದ್ರದ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಶಾರದಾದೇವಿ ತಿಮ್ಮನಟ್ಟಿ, ಕವಲೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಪರಿಚಾರಕ ನೀಲಪ್ಪ ಹಡಪದ, ನವಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೀರಣ್ಣ ನಾಕರಳ್ಳಿ, ಮುಸಲಾಪುರ ಗ್ರಾಮ ಆಡಳಿತಾಧಿಕಾರಿ ಕುಮಾರ ಗದ್ದಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಯ ಹಿರಿಯ ವಾಹನ ಚಾಲಕ ಅಲ್ಲಾಭಕ್ಷ,

ಹೊಸಕೇರಾ ಪಶು ಚಿಕಿತ್ಸಾಲಯದ ಪರಿಚಾರಕ ಸುಕುಮುನೆಪ್ಪ, ಜಿಲ್ಲಾಧಿಕಾರಿಗಳ ಕಚೇರಿಯ ಶಿರಸ್ತೇದಾರ ಜಯಲಕ್ಷ್ಮಿ ನವಲಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರೆಡ್ಡಿ ಶ್ರೀನಿವಾಸ, ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ ಇಟ್ನಾಳ, ಜಿಲ್ಲಾ ಪಂಚಾಯತ್

ಸಿಇಓ ವರ್ಣಿತ್ ನೇಗಿ, ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ನಾಗರಾಜ ಆರ್.ಜುಮ್ಮನ್ನವರ ಹಾಗೂ ಇನ್ನಿತರರು ಪ್ರಶಸ್ತಿ ಪ್ರದಾನ ಮಾಡಿದರು.






# ಶಿಕ್ಷಕರ ಸಂಘದ ಆಶ್ವಾಸನೆಗಳು

**ಭಾಲ್ಕಿ:** ತಾಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ 13 ನಿರ್ದೇಶಕರ ಸ್ಥಾನಕ್ಕೆ ಇಂದು ಶುಕ್ರವಾರ ಮೇ. 1 ರಂದು ಚುನಾವಣೆ ನಡೆಯಲಿದೆ. ತಾಲೂಕಿನ ಶಿಕ್ಷಕರ ಸಂಘದ 13 ನಿರ್ದೇಶಕರ ಸ್ಥಾನಕ್ಕೆ ಸ್ವಾಭಿಮಾನಿ ಶಿಕ್ಷಕರ ಪೆನಾಲ್‌ನವರು ಚುನಾವಣೆಯಲ್ಲಿ ಧುಮಕಿದ್ದಾರೆ ಎಂದು ಸ್ವಾಭಿಮಾನಿ ಶಿಕ್ಷಕರ ಪೆನಾಲ್ ಮುಖ್ಯಸ್ಥ ಬಸವರಾಜ ದಾನಾ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಶಿಕ್ಷಕರು ಎದುರಿಸುವ ಜ್ವಲಂತ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ದೊರಕಿಸಿ ಕೊಡುವುದೇ ಸ್ವಾಭಿಮಾನಿ ಶಿಕ್ಷಕರ ಪೆನಾಲ್‌ನ ಮುಖ್ಯ ಧ್ಯೇಯವಾಗಿದೆ. ಈ ಹಿಂದಿನ ಶಿಕ್ಷಕರ ಸಂಘಟನೆಯ ಪದಾಧಿಕಾರಿಗಳು ಮತ್ತು ಅಧ್ಯಕ್ಷರು ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿಲ್ಲ.

ಹೀಗಾಗಿ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಶ್ರೇಯೋಭಿವೃದ್ಧಿಗಾಗಿ ಜಾತಿ ರಹಿತ ಸ್ವಾಭಿಮಾನಿ ಶಿಕ್ಷಕರ ಸಂಘದ ಎಲ್ಲಾ ಪದಾಧಿಕಾರಿಗಳಿಗೆ ಆಯ್ಕೆ ಮಾಡುವ ಮೂಲಕ ಶಿಕ್ಷಕರ ಹಿತ ಕಾಪಾಡುವ ಶಿಕ್ಷಕರ ಸಂಘ ಬೇಕಾಗಿದೆ. ಸ್ವಾಭಿಮಾನಿ ಶಿಕ್ಷಕರ ಪೆನಾಲ್‌ನಲ್ಲಿ ಮೀಸಲಾತಿಗನುಗುಣವಾಗಿ ಎಲ್ಲ ಸಮುದಾಯದವರಿಗೆ ಸಮಾನ ಅವಕಾಶ ಕಲ್ಪಿಸಲಾಗಿದೆ. ಸ್ವಾಭಿಮಾನಿ ಶಿಕ್ಷಕರ ಪೆನಾಲ್ ಆಯ್ಕೆಯಾದರೆ ಶಿಕ್ಷಕರಿಗಾಗಿ ಗುರು ಭವನ, ನೌಕರರ ಭವನ ನಿರ್ಮಿಸಲಾಗುವುದು. ಹೆಚ್ಚುವರಿ ಶಿಕ್ಷಕರ ಸಮಸ್ಯೆ ಬಗೆಹರಿಸಲು ಡ್ರೈಸ್‌ಕೋಡ್, ಗುರುಸ್ಪಂದನಾ ಕಾರ್ಯಕ್ರಮ, ಶಿಕ್ಷಕರ ವೇತನ ಬಡ್ತಿ, ಶಾಲಾ ಅಭಿವೃದ್ಧಿಗಾಗಿ ಶೈಕ್ಷಣಿಕ ಕಾರ್ಯಾಗಾರ, ಎಚ್‌ಆರ್‌ಎಮ್‌ಎಸ್ ಸೇವಾ ಪುಸ್ತಕದಲ್ಲಿ ಗಳಿಕೆ ರಜೆ ನಮೂದಿಸುವುದು, ಅನಾವಶ್ಯಕವಾಗಿ ಎಸ್‌ಡಿಎಮ್‌ಸಿಯಿಂದ ಆಗುವ ಕಿರುಕುಳ ತಪ್ಪಿಸುವುದು, ಮಹಿಳಾ ಶಿಕ್ಷಕಿಯರ ಶಿಶು ಪಾಲನಾ ರಜೆ ಸೇರಿದಂತೆ ಇತರೆ ಹಕ್ಕಿನಲ್ಲಿರುವ ರಜೆಗಳನ್ನು ಪಡೆಯುವ ಭಾಗ್ಯ ಕಲ್ಪಿಸಲಾಗುವುದು. ಹೆಚ್ಚುವರಿ ಭಾಷಾ ಅಲ್ಪಸಂಖ್ಯಾತ ಶಿಕ್ಷಕರ ಸಮಸ್ಯೆಯನ್ನು ಹೋಗಲಾಡಿಸುವುದು. ಸಂಘದ ಬೈಲಾ ಪ್ರಕಾರ ವಾರ್ಷಿಕ ಮಹಾಸಭೆ ನಡೆಸಿ ಲೆಕ್ಕ ಪತ್ರ ಸೇರಿದಂತೆ ಇತರೆ ಕಲ್ಯಾಣಕಾರಿ ಯೋಜನೆ ರೂಪಿಸಲಾಗುವುದು ಎಂದು ತಿಳಿಸಲಾಗಿದೆ.

ಸ್ವಾಭಿಮಾನಿ ಶಿಕ್ಷಕರ ಪೆನಾಲ್‌ನಿಂದ ಸಾಮಾನ್ಯ ಕ್ಷೇತ್ರಕ್ಕೆ(09) ಬಸವರಾಜ ದಾನಾ, ದತ್ತು ಮುದಾಳೆ, ಗಣೇಶ ಸ್ವಾಮಿ, ಗಣಪತಿ ಭಕ್ತಾ, ಮೋಹಮ್ಮದ ಮುಜಮೀಲ್, ರಾಜಕುಮಾರ ಬಿರಾದಾರ, ರಾಮರಾವ ಬಾನಾ, ಸತ್ಯವಾನ ಕಾಂಬಳೆ, ಸುಧಾಕರ ಗಾಯಕವಾಡ, ಮತ್ತು ಮಹಿಳಾ ಮೀಸಲು ಕ್ಷೇತ್ರ(04)ದಿಂದ ಅನೀತಾ ಎಸ್ .ಮುಧೋಳೆ, ನಿರ್ಮಲಾ ಚೆಲ್ವಾ, ಸಂಗೀತಾ ನಿಟ್ಟೂರೆ, ವಿಜಯಲಕ್ಷ್ಮಿ ಪೂಜಾರಿ ಸ್ಪರ್ಧಿಸಿದ್ದಾರೆ ಎಂದು ತಿಳಿದು ಬಂದಿದೆ. ಮೇ 1 ರಂದು ಮುಂಜಾನೆ 8.30 ರಿಂದ ಸಾ.4.30 ರ ವರೆಗೆ ಬಸವೇಶ್ವರ ಸರ್ಕಲ್‌ನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಚುನಾವಣೆ ನಡೆಯಲಿದೆ.

# ಬೌರಿಂಗ್ ಆಸ್ಪತ್ರೆ ದುರಂತ ಜಿಬಿಎ ಆಯುಕ್ತರ ಸಭೆ



**ಬೆಂಗಳೂರು:** ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿದು ಏಳು ಜನರ ಸಾವಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್ ಅವರನ್ನು ಅಮಾನತುಗೊಳಿಸಿ, ನೋಟೀಸು ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ಭಾರಿ ಮಳೆಯಿಂದ ಬೌರಿಂಗ್ ಆಸ್ಪತ್ರೆ ದುರಂತದ ಹಿನ್ನೆಲೆಯಲ್ಲಿ ಇಂದು ಅವರ ಅಧ್ಯಕ್ಷತೆಯಲ್ಲಿ ಜಿಬಿಎ ಆಯುಕ್ತರುಗಳ ಸಭೆ ಜರುಗಿತು.

ಬೆಂಗಳೂರಿನಲ್ಲಿ ಮಳೆಯಿಂದ ಉಂಟಾಗಿರುವ ಹಾನಿ ಹಾಗೂ ಬೌರಿಂಗ್ ಆಸ್ಪತ್ರೆಗೋಡೆ ಕುಸಿತದಿಂದ ನಿನ್ನೆ ಏಳು ಜನ ಮೃತಪಟ್ಟಿರುವ ಕುರಿತಂತೆ ಜಿಬಿಎ ಆಯುಕ್ತರೊಂದಿಗೆ ಚರ್ಚಿಸಿದ ಮುಖ್ಯಮಂತ್ರಿಗಳು ಗೋಡೆಗೆ ಹಾನಿ ಆಗಲಿದೆ ಎಂದು ತಿಳಿದಿದ್ದರೂ ಕಾಮಗಾರಿ ನಡೆಯುವಾಗ ಮಣ್ಣು ಸುರಿದದ್ದು ಏಕೆ ಎಂದು ಪ್ರಶ್ನಿಸಿದರು.

ಗೋಡೆಗೆ ಹಾನಿಯಾಗುವಂತೆ ಮಣ್ಣು ಸುರಿದದ್ದು ನೀವು ಏಕೆ ನೋಡಿಕೊಳ್ಳಲಿಲ್ಲ ಎಂದು ಆಸ್ಪತ್ರೆ ಮುಖ್ಯಸ್ಥರನ್ನು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರಿಗೆ ನೋಟಿಸ್ ನೀಡಲು ಸೂಚಿಸಿದ ಮುಖ್ಯಮಂತ್ರಿಗಳು ಬೆಂಗಳೂರಿನಲ್ಲಿ ಗುಂಡಿಗಳನ್ನು ಮುಚ್ಚಲು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದರು.

ನಿನ್ನೆ ಬೆಂಗಳೂರಿನಲ್ಲಿ ಉಂಟಾದ ಮಳೆಯಲ್ಲಿ ಸಾಕಷ್ಟು ಹಾನಿಯಾಗಿದ್ದು, 250 ಕ್ಕೂ ಹೆಚ್ಚು ಮರಗಳು ಬಿದ್ದಿವೆ. ಏಳು ಜನ ಸಾವನ್ನಪ್ಪಿದ್ದಾರೆ. ಈಗಾಗಲೇ ಸತ್ತವರ ಕುಟುಂಬದವರಿಗೆ 5 ಲಕ್ಷ ಪರಿಹಾರ ಘೋಷಣೆ ಮಾಡಲಾಗಿದೆ.

ಗಾಯಗೊಂಡವರಿಗೆ ಉಚಿತ ಚಿಕಿತ್ಸೆ ನೀಡುವಂತೆ ಸೂಚಿಸಿದರು. ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಸಿದ್ಧತೆ ಕೈಗೊಳ್ಳಿ ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಬೆಂಗಳೂರಿನ ಐದೂ ವಲಯಗಳ ಆಯುಕ್ತರು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಒಣಗಿರುವ ಅಪಾಯಕಾರಿ ಮರಗಳ ರೆಂಬೆಗಳನ್ನು ಕತ್ತರಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು.

ಮುಂದಿನ ದಿನಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಗಳಿದ್ದು ರಾಜಕಾಲುವೆಗಳಲ್ಲಿ ಹೂಳು ತೆಗೆಯುವುದು, ಪ್ರವಾಹ ಉಂಟಾಗದಂತೆ ಕ್ರಮ ತೆಗೆದುಕೊಳ್ಳಬೇಕು ಎಂದರು. ಮಳೆಯಿಂದ ರಸ್ತೆಯಲ್ಲಿ ಬಿದ್ದಿರುವ ಕಸ, ರೆಂಬೆಗಳನ್ನು ಕೂಡಲೇ ತೆರವು ಮಾಡಲು ಸೂಚಿಸಿದರು.

ಅಂಡರ್ ಪಾಸ್ ಗಳಲ್ಲಿ ಮಳೆ ನೀರು ನಿಲ್ಲದಂತೆ ಹಾಗೂ ಜನ ಅಂಡರ್ ಪಾಸ್ ಬಳಸದಂತೆ ಕೂಡಲೇ ಬ್ಯಾರಿಕೇಡ್ ಹಾಕಿ ಎಂದು ಅವರು ಸೂಚಿಸಿದರು.

ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಶಾಸಕ ರಿಜ್ವಾನ್ ಅರ್ಷದ್, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಆಯುಕ್ತ ಮಹೇಶ್ವರ ರಾವ್ , ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಅಂಜುಮ್ ಪರ್ವೇಜ್, ಮೊದಲಾದವರು ಉಪಸ್ಥಿತರಿದ್ದರು.

# ವೈದ್ಯಕೀಯ ವೃತ್ತಿಯಲ್ಲಿ ಸೇವಾ ಮನೋಭಾವ ಬಹುಮುಖ್ಯ

• ಮಲ್ಲಮ್ಮ ನುಡಿ ವಾರ್ತೆ ದೇವನಹಳ್ಳಿ



ರೋಗಿ ಮತ್ತು ವೈದ್ಯರ ಸಂಬಂಧ ಹಾಗೂ ಸಂವಹನ ಆರೋಗ್ಯಕರವಾಗಿರಬೇಕು, ಅನುಕಂಪ ಮಾನವೀಯ ಮೌಲ್ಯಗಳಭರಿತ ಒತ್ತಡಮುಕ್ತ ಸೇವೆ ನಿಮ್ಮದಾಗಲಿ ,ವೈದ್ಯಕೀಯ ಪ್ರಾರಂಭಿಸುವ ವಿದ್ಯಾರ್ಥಿಗಳಲ್ಲಿ ಪ್ರತಿಯೊಬ್ಬರನ್ನು ಸಮನಾಗಿ ಕಾಣುವಂತಹ ಮತ್ತು ಅವರಿಗೆ ಸೇವಾ ಮನೋಭಾವದಿಂದ ಚಿಕಿತ್ಸೆ ಕೊಡುವ ಗುಣವನ್ನು ಮೊದಲು ಬೆಳೆಸಿಕೊಳ್ಳುವುದು ಬಹು ಮುಖ್ಯ ಆರೋಗ್ಯದ ಹಿತದೃಷ್ಠಿಯಿಂದ ನಿಮ್ಮ ಸೇವೆ ಎಲ್ಲಾ ವರ್ಗದ ಜನರಿಗೂ ಲಭಿಸಬೇಕು ಎಂದು ಶ್ರೀ ಜಯದೇವ ಸಂಸ್ಥೆಯ ಮಾಜಿ ನಿರ್ದೇಶಕರು ಮತ್ತು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಉಪಕುಲಪತಿ ಡಾ. ರವೀಂದ್ರನಾಥ್ ಕೆ. ಎಸ್ ತಿಳಿಸಿದರು.

ದೇವನಹಳ್ಳಿ ಪಟ್ಟಣದ ಪ್ರಸನ್ನಹಳ್ಳಿ ರಸ್ತೆಯಲ್ಲಿರುವ ಆಕಾಶ್ ಸಮೂಹ ಸಂಸ್ಥೆಯ ಸಭಾಂಗಣದಲ್ಲಿ 5ನೇ ಘಟಿಕೋತ್ಸವ ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಮಾಡಿ ನಂತರ ಮಾತನಾಡಿ ತಂದೆ-ತಾಯಿಗಳ ಶ್ರಮ ಮತ್ತು ಶಿಕ್ಷಣ ಸಂಸ್ಥೆಯ ಭೋದಕರ ವೈದ್ಯರ ವರ್ಗವೂ ಸಹ ಅವಿರತ ಶ್ರಮದ ಫಲವಾಗಿ ನೀವಿ ಇಂದು ಇಲ್ಲಿರುವುದು ಅದಕ್ಕೆ ಅವರಿಗೆ ಅಭಿನಂದನೆಗಳನ್ನು ತಿಳಿಸಿದರು, ಓದಿದ ನಂತರ ಮುಗಿದಿದೆ ಎಂಬುದಲ್ಲ ನಿಮ್ಮ ಕಲಿಕೆ ತಾಂತ್ರಿಕ ಜ್ಞಾನ ಮತ್ತು ವೈಜ್ಞಾನಿಕವಾಗಿ ನಿರಂತರವಾಗಿರಬೇಕು ಎಂದು ಸಲಹೆ ನೀಡಿದರು.

ಒಂದು ದೊಡ್ಡ ಮೆಡಿಕಲ್ ಸಂಸ್ಥೆ ನಿರ್ಮಿಸುವುದು ಸುಲಭದ ಮಾತಲ್ಲ ಆಕಾಶ್ ಸಂಸ್ಥೆಯ ನಿರ್ಮಾತೃ ಮುನಿರಾಜು ಅವರ ಪರಿಶ್ರಮದಿಂದ ರಾಜ್ಯದ ಅತ್ಯುನ್ನತ ಮೆಡಿಕಲ್ ಸಂಸ್ಥೆಗಳಲ್ಲಿ ಆಕಾಶ್ ಸಂಸ್ಥೆ ಒಂದಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಅಭಿವೃದ್ಧಿ ಹೊಂದಿ ಸಾಕಷ್ಟು ಪ್ರತಿಭಾವಂತ ವಿದ್ಯಾರ್ಥಿಗಳನ್ನು ದೇಶ ಮತ್ತು ಸಮಾಜದ ಸೇವೆಗೆ ಸನ್ನದ್ದಗೊಳಿಸುವಂತಾಗಲಿ ಉತ್ತೀರ್ಣರಾಗಿ ಸಂಸ್ಥೆಯಿಂದ ಹೊರ ನಡೆದಾಗ ನಿಜವಾದ ಕಲಿಕೆ ಪ್ರಾರಂಭವಾಗುತ್ತದೆ ಹಾಗಾಗಿ ನಿಮ್ಮ ವೃತ್ತಿಯಲ್ಲಿ ಪ್ರಾವಿಣ್ಯತೆ ,ಸೇವಾಮನೋಭಾವ ಮತ್ತು ವೃತ್ತಿಪರತೆಯನ್ನು ಸಾಧಿಸುವಂತಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ಆಕಾಶ್ ಸಮೂಹ ಸಂಸ್ಥೆಗಳ ಸಂಸ್ಥಾಪಕ ಡಾ.ಮುನಿರಾಜ್ ಮಾತನಾಡಿ ಸಮಾಜದ ಸ್ವಾಸ್ಥ್ಯ ಕಾಪಾಡಲು ವೈದ್ಯಕೀಯ ಕ್ಷೇತ್ರ ಬಹು ಪರಿಣಾಮಕಾರಿಯಾದ ವೃತ್ತಿಯಾಗಿದ್ದು ,ಜ್ಞಾನವೇ ಒಂದು ದೊಡ್ಡ ಆಸ್ತಿಯಾಗಿದೆ. ಉತ್ತಮ ಶಿಕ್ಷಣವನ್ನು ಪಡೆದು ವೈದಿಕ ವೃತ್ತಿಯಲ್ಲಿ ಪರಿಣಿತಿಯನ್ನು ಪಡೆದು ನಿಮ್ಮ ಬಳಿ ಬರುವ ರೋಗಿಗಳಿಗೆ ಉತ್ತಮ ಸೇವೆಯನ್ನು ಚಿಕಿತ್ಸೆಯನ್ನು ನೀಡುವುದರ ಮೂಲಕ ಗುಣಪಡಿಸಿ ಒಳ್ಳೆಯ ವೈದ್ಯರಾಗುವಂತೆ ಶುಭಹಾರೈಸಿದರು. ಸಮಾರಂಭದಲ್ಲಿ ವಿದ್ಯಾರ್ಥಿಗಳು ಮಹರ್ಷಿ ಚರಕ ಸಂಹಿತೆ ಓದುವುದರ ಮೂಲಕ ವೈದ್ಯ ವೃತ್ತಿಗೆ ಪಾದಾರ್ಪಣೆ ಮಾಡಿದರು. ಇದೇ ಸಂದರ್ಭದಲ್ಲಿ ಆಕಾಶ್ ಸಮೂಹ ಸಂಸ್ಥೆಗಳ ಉಪಾಧ್ಯಕ್ಷ ಅಮರ್‌ಗೌಡ, ಆಕಾಶ್ ಆಸ್ಪತ್ರೆಯ ಆಡಳಿತ ಅಧಿಕಾರಿ ಪುಷ್ಪ ಮುನಿರಾಜ್, ನಿರ್ದೇಶಕರಾದ ಅಕಾಶ್, ಕೃತಿಕ ಅಮರ್‌ಗೌಡ, ಕೀರ್ತನ ಆಕಾಶ್, ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಶಿವುಪ್ರಕಾಶ್, ನರೇಶ್ ಶೆಟ್ಟಿ, ಮೆಡಿಕಲ್ ಡಾ.ಬ್ರಿಜೇಶ್.ಕೆ, ವಿದ್ಯಾರ್ಥಿಗಳು, ಪೋಷಕರು ಇದ್ದರು.

# ಬಡ ವಿದ್ಯಾರ್ಥಿಗಳಿಗೆ ಲ್ಯಾಪ್ಟಾಪ್ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರದ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಅಳಿವಿನಂಚಿನಲ್ಲಿರುವ ಆದಿವಾಸಿ ಬಡ ವಿದ್ಯಾರ್ಥಿಗಳಿಗೆ ಲ್ಯಾಪ್ಟಾಪ್ ವಿತರಣೆ ಕಾರ್ಯಕ್ರಮ ಹಾಗೂ ಬಾಲ್ಯ ವಿವಾಹ ಹಾಗೂ ಪೋಕ್ಸೋ ವಿಚಾರದ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಕರ್ನಾಟಕ ರಾಜ್ಯ ಅರಣ್ಯಧಾರಿತ ಆದಿವಾಸಿ ಅಭಿವೃದ್ಧಿ ಸಂಸ್ಥೆಯು ಹಮ್ಮಿಕೊಂಡು ಈ ಕಾರ್ಯಕ್ರಮದ ಉದ್ಘಾಟನೆಯನ್ನು ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಮಾನ್ಯ ಶ್ರೀ ಮಲ್ಲಿಕ್ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಹುಣಸೂರು ವನ್ಯಜೀವಿ ವಿಭಾಗದ ಶ್ರೀ ಲಕ್ಷ್ಮಿಕಾಂತ್ ರವರು ಉದ್ಘಾಟಿಸಿದರು.



ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮಾತನಾಡಿ ವಿದ್ಯಾರ್ಥಿಗಳು ವಿತರಿಸಲಾಗಿರುವ ಲ್ಯಾಪ್ಟಾಪ್ ಅನ್ನು ಸದುಪಯೋಗಪಡಿಸಿಕೊಂಡು ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಿ. ಯುವ ಜನರು ಪೋಕ್ಸೋದಿಂದಾಗುವ ಕಠಿಣ ಕಾನೂನು ಕ್ರಮಗಳ ಬಗ್ಗೆ ಅರಿತುಕೊಂಡು ಜಾಗೃತರಾಗಿ ಯಾವುದೇ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗದೆ, ಬಾಲ್ಯ ವಿವಾಹ ಪದ್ಧತಿಗಳನ್ನು ಖಂಡಿಸಿ ಸಮಾಜಮುಖಿ ಕೆಲಸಗಳನ್ನು ಮಾಡುವಂತಾಗಬೇಕು ಎಂದು ಕಿವಿಮಾತು ಹೇಳಿದರು.

ವನ್ಯಜೀವಿ ವಿಭಾಗದ ಶ್ರೀ ಲಕ್ಷ್ಮಿಕಾಂತ್‌ರವರು ಮಾತನಾಡಿ ಆದಿವಾಸಿ ವಿದ್ಯಾರ್ಥಿಗಳು ಉತ್ತಮ ಜೀವನವನ್ನು ರೂಪಿಸಿಕೊಳ್ಳುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಅರಣ್ಯಧಾರಿತ ಆದಿವಾಸಿ ಅಭಿವೃದ್ಧಿ ಸಂಸ್ಥೆಯು ವಿತರಿಸುತ್ತಿರುವ ಲ್ಯಾಪ್ಟಾಪ್ ಅನ್ನು ಬಳಸಿಕೊಂಡು ಉನ್ನತ ವಿದ್ಯಾಭ್ಯಾಸವನ್ನು ಪಡೆದುಕೊಂಡು ಉಳಿದ ವಿದ್ಯಾರ್ಥಿಗಳಿಗೆ ಮಾದರಿಯಾಗಿ ಬದುಕಬೇಕು ಎಂದರು.

# ಪೊಲೀಸ್ ಕಚೇರಿ ಗೂಂಡಾಗಳ ಅಡ್ಡ

• ಮಲ್ಲಮ್ಮ ನುಡಿ ವಾರ್ತೆ ಧಾರವಾಡ

ಹುಬ್ಬಳ್ಳಿ-ಧಾರವಾಡದಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿವೆ. ಹು-ಧಾ ಪೊಲೀಸ್ ಆಯುಕ್ತರ ಕಚೇರಿ ಗೂಂಡಾಗಳ ಅಡ್ಡೆಯಾಗಿದೆ. ಆಯುಕ್ತರ ಎದುರೇ ಡೀಲ್‌ಗಳು ನಡೆಯುತ್ತಿವೆ ಎಂದು ಶಾಸಕ ಅರವಿಂದ ಬೆಲ್ಲದ ಗಂಭೀರ ಆರೋಪ ಮಾಡಿದರು.



ಗುರುವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಅಪರಾಧ ಚಟುವಟಿಕೆಗಳಲ್ಲಿ ತೊಡಗಿದವರು, ಗೂಂಡಾಗಳು ಆಯುಕ್ತರ ಕಚೇರಿ ಖುರ್ಚಿಗಳಲ್ಲಿ ಕೂರುತ್ತಿದ್ದು, ಪೊಲೀಸ್ ಅಧಿಕಾರಿಗಳ ಗುಂಡಾಗಳ ಎದುರಿಗೆ ಎದ್ದು ನಿಲ್ಲುವ ಸ್ಥಿತಿ ಇದೆ ಎಂದು ದೂರಿದರು.

ಇಸ್ಪೀಟ್ ಕ್ಲಬ್‌ಗೆ ಪೊಲೀಸ್ ಆಯುಕ್ತರೇ ಅನುಮತಿ ನೀಡಿದ್ದು, ಗೂಂಡಾಗಳ ಜೊತೆ ಫೋಟೋ ತೆಗೆಸಿಕೊಳ್ಳುವ ಕಾರ್ಯ ನಾಚಿಗೇಡು. ಅಪರಾಧ ಚಟುವಟಿಕೆ ಮಟ್ಟಹಾಕಬೇಕಾದ ಪೊಲೀಸರು ದಲ್ಲಾಳಿಗಳಾಗಿ ಕೆಲಸ ಮಾಡುತ್ತಿರುವುದಾಗಿ ಆಪಾದಿಸಿದರು.

ಆಯುಕ್ತರ ಕಚೇರಿ ದಲ್ಲಾಳಿಗಳ ಕೇಂದ್ರವಾದ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಗೃಹ ಸಚಿವರ ಗಮನಕ್ಕೆ ಇದ್ದರೂ ಸಹ ನಿರ್ಲಕ್ಷ ವಹಿಸಿದ್ದಾರೆ ಎಂದು ಆರೋಪಿಸಿದ ಬೆಲ್ಲದ, ರಕ್ಷಕರೇ ಭಕ್ಷರಾಗಿ ಲೂಟಿ ಮಾಡುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಡ್ರಗ್ಸ್ ಪೆಡ್ಲರ್ ಮೂಲಕ ವಿದ್ಯಾರ್ಥಿಗಳಿಗೆ ಗಾಂಜಾ, ಡ್ರಗ್ಸ್ ಪೂರೈಸಿದ ನಂತರ ಅವರ ಪಾಲಕರಿಂದ ಹಣ ಮಾಡುವ ಕಾರ್ಯಕ್ಕೂ ಪೊಲೀಸರು ಕೈ ಹಾಕಿದ್ದು, ಇಂತಹ ಕೃತ್ಯದಲ್ಲಿ ಆಗಲೇ ಬಡಪಾಯಿ ವಿದ್ಯಾರ್ಥಿ ಬಲಿಯಾದ ಬಗ್ಗೆ ಕಳವಳ ವ್ಯಕ್ತಪಡಿಸಿದರು.

ಮೃತಪಟ್ಟ ವಿದ್ಯಾರ್ಥಿ ಆದಿತ್ಯ ಮ್ಯಾಗೇರಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರಾಜಕೀಯ ಮರುಜನ್ಮ ನೀಡಿದ ಬದಾಮಿ ತಾಲೂಕಿನ ಹುಡುಗ. ಆತನ ಸಾವಿಗೆ ನ್ಯಾಯ ಬೇಕು. ತಪಿತಸ್ಥರಿಗೆ ಕಠಿಣ ಶಿಕ್ಷೆಗೂ ಸಹ ಗುರಿಪಡಿಸಲು ಆಗ್ರಹ ಮಾಡಿದರು.

# ಸಮಸ್ಯೆಗೆ ಸ್ಪಂದಿಸಿದ ನಗರ ಸಭೆ: ಶೌಚಾಲಯ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಯಾದಗಿರಿ ನಗರದ ಬಂಡಗೇರಿ ವಾರ್ಡ್ ಸಂಖ್ಯೆ 7 ರಲ್ಲಿ ಸುಮಾರು ದಿನಗಳಿಂದ ಶೌಚಾಲಯ ಆಳು ಬಿದ್ದು ದುರ್ವಾಸನೆಯಿಂದ ಕೂಡಿ ಹಲವು ರೋಗಗಳಿಗೆ ಎಡೆ ಮಾಡಿಕೊಟ್ಟಿದೆ, ಪುರುಷರಿಗೆ ಮತ್ತು ಮಹಿಳೆಯರಿಗೆ ಎಂದು ಪ್ರತ್ಯೇಕ ಶೌಚಾಲಯಗಳನ್ನು ನಿರ್ಮಾಣ ಮಾಡಿದ್ದು, ಅದನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡದೆ ಉದ್ಘಾಟನೆಗೊಳ್ಳದೆ ಹಸ್ತವ್ಯಸ್ತಗೊಂಡಿಂದೆ.

ದಿ. ಏಪ್ರಿಲ್ 28 ರಂದು ಮಲ್ಲಮ ನುಡಿ ಪತ್ರಿಕೆಯಲ್ಲಿ ವಿಶೇಷ ವರದಿಯ ಬೆನ್ನಲೆ ನಗರ ಸಭೆಯ ಪೌರಾಯುಕ್ತ ಉಮೇಶ ಚವ್ಹಾಣ ಮತ್ತು ಸಿಬ್ಬಂದಿಗಳೊಂದಿಗೆ ಆಗಮಿಸಿ ವ್ಯವಸ್ಥೆಯನ್ನು ನೋಡಿ ಸ್ಥಳೀಯ ಜನರೊಂದಿಗೆ ಮಾಹಿತಿ ಪಡೆದುಕೊಂಡು ಮತ್ತು ಮುಂದಿನ ಕ್ರಮ ಬಗ್ಗೆ ವಿಚಾರ ಮಾಡಿ ಸ್ಥಳೀಯ ಶಾಸಕ ಚೆನ್ನರೆಡ್ಡಿ ಪಾಟೀಲ್ ತುನ್ನೂರ್ ರವರಿಗೆ ತಿಳಿಸಿ ಶೌಚಾಲಯಕ್ಕೆ ಅಗತ್ಯವಿರುವ ಕ್ರಮಗಳನ್ನು ಕೈಗೊಂಡು ಉದ್ಘಾಟನೆ ಮಾಡಲು ಮುಂದಾಗಿದ್ದಾರೆ. ದಿ. ಏಪ್ರಿಲ್ 30 ರಂದು ಶೌಚಾಲಯವನ್ನು ನವೀಕರಣಗೊಳಿಸಿ, ಸ್ಥಳೀಯರಿಗೆ ಉಪಯೋಗ ಆಗುವ ರೀತಿಯಲ್ಲಿ ಶೌಚಾಲಯವನ್ನು ನಿರ್ಮಿಸಿ ಉದ್ಘಾಟನೆ ನೆರವೇರಿಸಿದರು ನಂತರ ಸ್ಥಳೀಯರೇ ಸಮಸ್ಯೆಗಳ ಬಗ್ಗೆ ಆಲಿಸಿದರು. ಈ ಸಂದರ್ಭದಲ್ಲಿ ನಗರ ಸಭೆಪೌರಾಯುಕ್ತ ಉಮೇಶ ಚವ್ಹಾಣ, ಕಾಂಗ್ರೆಸ್ ಪಕ್ಷದ ಮುಖಂಡರಾದ

ನಿಂಗಪ್ಪ ಜಾಲಗಾರ, ಸಾಯಿಬಣ್ಣ ಕೆ-ಂಗೂರಿ, ತಿಮ್ಮಣ್ಣ ನಾಯಕ್, ಸುರೇಶ್ ಮಡ್ಡಿ, ಬೀರಲಿಂಗಪ್ಪ ಪೂಜಾರಿ, ನಗರ ಸಭೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಹಾಗೂ ನಗರದ ಮುಂತಾದವರು ಇದ್ದರು.


ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

ಮಲ್ಲಮ್ಮ ನುಡಿ

ಸಂಪಾದಕರು: ರಮೇಶ ರೆಡ್ಡಿ | Mallammanudi Regional News Paper | ಪ್ರಾದೇಶಿಕ ಕನ್ನಡ ದೈನಿಕ

28 Apr 2026 - Page 8

ದುರ್ವಾಸನೆಯಿಂದ ಕೂಡಿದ ಬಂಡಗೇರಿ ವಾರ್ಡ್: ನಿರ್ಲಕ್ಷ್ಯ

• ವಿಶೇಷ ವರದಿ: ಡಿ.ಕೆ. ದೇವಿಂದ್ರ, ಯಾದಗಿರಿ

-ನಿಂಗಪ್ಪ ಎಂ ಜಾಲಗರ್, ಮಾಜಿ ನಗರಸಭೆ ಸದಸ್ಯರು ಬಂಡಗೇರಿ ವಾರ್ಡ್ 07 ಯಾದಗಿರಿ

ವರದಿ MN ಫಲಶ್ರುತಿ

ಈ ಸಮಸ್ಯೆ ಪ್ರತಿದಿನ ಜನರಲ್ಲಿ ಕಾಡುತ್ತಿತ್ತು ಎಷ್ಟೋ ಬಾರಿ ನಗರದಲ್ಲಿರುವ ಜನರಿಗೆ ರೋಗ ಬಂದಿರುವುದು ನೋಡಿದ್ದೇವೆ, ಎಷ್ಟೋ ಬಾರಿ ನಾವು ಅಧಿಕಾರಿಗಳ ಗಮನಕ್ಕೂ ತಂದರು ಫೋನ್ ಮಾಡಿದರು ಸರಿಯಾದ ರೀತಿಯಲ್ಲಿ ರೆಸ್ಪಾನ್ಸ್ ಮಾಡುತ್ತಿಲ್ಲ ಆದರೆ ಮಲ್ಲಮ್ಮ ನುಡಿ ಪತ್ರಿಕೆಯಲ್ಲಿ ಸುದ್ದಿ ಬಂದ ಕೂಡಲೇ ಅಧಿಕಾರಿಗಳು ಮತ್ತು ತಮ್ಮ ಸಿಬ್ಬಂದಿಗಳೊಂದಿಗೆ ಮುಂಜಾನೆ ಬಂದು ಸಮಸ್ಯೆಯ ಬಗ್ಗೆ ಸಂಪೂರ್ಣವಾದ ವಿವರಣೆ ತೆಗೆದುಕೊಂಡು ಬಗೆಹರಿಸಿ ಉದ್ಘಾಟನೆ ಮಾಡಿದರೆ, ಇದರ ಕೀರ್ತಿ ಈ ಮಲ್ಲಮ್ಮ ನುಡಿ ಪತ್ರಿಕೆಗೆ ದೊರೆಯುತ್ತದೆ ಎಂದು ಹರ್ಷ ವ್ಯಕ್ತಪಡಿಸಿದರು.

-ನಿಂಗಪ್ಪ ಎಂ ಜಾಲಗರ್, ಮಾಜಿ ನಗರಸಭೆ ಸದಸ್ಯರು ಬಂಡಗೇರಿ ವಾರ್ಡ್

# ಶರಣರ ಭಕ್ತಿ ಹಾಗೂ ಸೂಫಿಗಳ ಖವ್ವಾಲಿಗಳಲ್ಲಿನ ಶಕ್ತಿ



**ಧರ್ಮ-ಮರ್ಮ**

● ಡಾ.ಎಂ.ಮಹ್ಮದ್ ಬಾಷ ಗೂಳ್ಯಂ

ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**

ಬಹಮನಿ ಆಳ್ವಿಕೆಯ ಕಾಲದಲ್ಲಿ, ಗುಲಬರ್ಗಾಕ್ಕೆ ಸಂಬಂಧಿಸಿದಂತೆ ಜುನೈದಿ ಸೂಫಿ ಪರಂಪರೆಯ ಸೂಫಿಗಳಲ್ಲಿ ಅನೇಕ ಕಾರಣಗಳಿಗಾಗಿ ಖ್ಯಾತರಾಗಿದ್ದರು. ಅಬು-ಅಲ್-ಮುಜಫ್ಫರ್, ಮಹ್ಮದ್ ರುಕ್ನುದ್ದೀನ್, ಸಯ್ಯದ್ ಅಲ್ಲಾವುದ್ದೀನ್ ಖುಂದಮೇರಿ ಜವೇರಿ, ಶೇಖ್ ಮಿನಾಹಜುದ್ದೀನ್ ತಮೀಮ್ ಅನ್ಸಾರಿ ಸೇರಿ ಅನೇಕರು ಜುನೈದಿ ಸೂಫಿ ಪರಂಪರೆಯಲ್ಲಿ ತಮ್ಮ ಸದ್ವಿಚಾರಗಳಿಂದಾಗಿ ಅಗ್ರಮಾನ್ಯರೆನಿಸಿದ್ದರು.

ರಫೀವುದ್ದೀನ್ ಶಿರಾಜಿಯವರ ಪ್ರಕಾರ, ಕೊಡಚಿಯಲ್ಲಿ, ಬಹಮನಿ ಸಾಮ್ರಾಜ್ಯದ ಭವಿಷ್ಯತ್ತಿನ ಸಂಸ್ಥಾನ ಸ್ಥಾಪಕನಾಗುವವನಾಗಿದ್ದ ಅಲ್ಲಾವುದ್ದೀನ್ ಹಸನ್ ಬಹಮನಿ ಹಾಗೂ ಅವರ ತಾಯಿ ಇವರ ಅನುಯಾಯಿಗಳಾಗಿದ್ದರು. ಈ ಸಂತರು ಅಲ್ಲಾವುದೀನ್ ಹಸನ್‌ಅನ್ನು ಬಾದಶಹಾನಾಗುವ ಭವಿಷ್ಯವಾಣಿ ನುಡಿದಿದ್ದರು. ಬಳಿಕ ಈ ಭವಿಷ್ಯವಾಣಿ ನಿಜವಾಗಿ, ಅಲ್ಲಾವುದ್ದೀನ್ ಹಸನ್ ಬಾದಶಹಾನಾದಾಗ, ಒಮ್ಮೆ ಸಗರದಲ್ಲಿ ಸೈನಿಕ ಶಿಬಿರ ಹಾಕಿ ನೆಲಸಿದ್ದಾಗ ಒಂದು ಸಮಾರೋಪವನ್ನು ಏರ್ಪಡಿಸಿ ಅದರಲ್ಲಿ ಕೊಡಚಿಯನ್ನು ಶೇಖ್ ರುಕ್ನುದ್ದೀನ್, ಜುನೈದಿಯವರಿಗೆ ಜಾಗೀರ್ ಆಗಿ ನೀಡಿದ್ದನು. ರುಕ್ನುದ್ದೀನ್ ಜುನೈದಿ ಸೂಫಿಗಳು ಗುಲಬರ್ಗಾಕ್ಕೆ ಆಗಮಿಸಿ, ಇಲ್ಲೇ ನೆಲೆನಿಂತು, ಒಂದನೇ ಮಹ್ಮದ್‌ಶಾಹ್‌ನ ಕಾಲದಲ್ಲಿ ನಿಧನರಾದರು. ಇವರ ಸಮಾಧಿ ಭವ್ಯ ದರ್ಗಾವು ಗುಲಬರ್ಗಾ-ಆಳಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಶೇಖ್ ರೋಜಾ ಎಂಬ ಹೆಸರಿನಿಂದ ಪ್ರಸಿದ್ದವಾಗಿದೆ. ಸಂಕ್ಷಪ್ತವಾಗಿ ಹೇಳುವುದಾದರೆ; ಉತ್ತರದಿಂದ ಇಲ್ಲಿಗೆ ಬಂದ ಹಲವಾರು ಸೂಫಿಗಳು, ಜನರ ಕಲ್ಯಾಣಕ್ಕೆ ಶ್ರಮಿಸಿದ್ದರು. ಡಾಂಭಿಕತೆ ವಿರುದ್ಧ ದನಿಯಾಗಿದ್ದರು. ಬಹಮನಿ ಸಾಮ್ರಾಜಕ್ಕೂ ಧಾರ್ಮಿಕ, ನೈತಿಕ ನೆಲೆಯಾಗಿದ್ದರು.



**ಇಸ್ಲಾಮ್‌ನ ಈಮಾನ್ ಹಾಗೂ ಸೂಫಿಗಳ ವಿಶ್ವಾಸ**

ಈಗಾಗಲೇ ಹೇಳಿದಂತೆ ತಸವ್ವುಫ್ ಎಂದರೆ ಅನುಭಾವ. 'ಈಮಾನ್' ಅಥವಾ ದೃಢವಿಶ್ವಾಸ. ಈ 'ಈಮಾನ್' ಇಸ್ಲಾಮ್ ಧರ್ಮದ ಆರು ಮೂಲ ತತ್ವಗಳ ಪಾಲನೆಯಲ್ಲಿ ಅಡಗಿರುತ್ತದೆ.

1. (ಆಮನ್ತು ಬಿಲ್ಲಾಹಿ) ಅಲ್ಲಾಹನ ಮೇಲೆ ನಂಬುಗೆ, 2. ದೇವರ ದೂತರ (ವಮಲಾಯಿಖಿಹಿ) ಮೇಲೆ ವಿಶ್ವಾಸ 3. ದೇವರ ಗ್ರಂಥದ (ವ ಕುತುಬಿಹಿ) ಮೇಲೆ ವಿಶ್ವಾಸ 4. (ವ ರುಸುಲಿ) ದೇವರ ಪ್ರವಾದಿಗಳ ಮೇಲೆ ವಿಶ್ವಾಸ 5. (ವಲ್ ಯೌಮಿಲ್ ಆಖ್‌ರಿ) ಅಂತಿಮ ದಿನದ (ಕಿಯಾಮತ್) ಮೇಲಿನ ವಿಶ್ವಾಸ, 6. (ವಲ್ ಖದ್ರಿ ಖೈರಿಹಿ, ವ ಶರ್‍ರಿಹಿ) ಒಳಿತು ಕೆಡುಕುಗಳ ದೇವರ ತೀರ್ಮಾನದ ಬಗ್ಗೆ ವಿಶ್ವಾಸ.

ಈಮಾನ್ ಮೇಲಿನ ಮೂಲತತ್ತ್ವಗಳನ್ನು ಹೇಳುವುದು ಮಾತ್ರವಲ್ಲ ಹೃತ್ಪೂರ್ವಕವಾಗಿ ಪಾಲಿಸುವುದು ಸೂಫಿಯ ಕರ್ತವ್ಯ. ಸೂಫಿ ಮತ್ತು ಸಾಮಾನ್ಯ ಮುಸ್ಲಿಮರ ಮಧ್ಯೆ ಇರುವ ವ್ಯತ್ಯಾಸ, ಸಾಮಾನ್ಯರಿಗೆ ಇರುವ ಜ್ಞಾನವೆಂದರೆ 'ಈಮಾನ್-ಎ-ತಖ್‌ಲೀದಿ' ಅಥವಾ ತನ್ನ ನಾಯಕನನ್ನು ಹಿಂಬಾಲಿಸುವ ಮೂಲದ ವಿಶ್ವಾಸ. ಇಲ್ಲಿ ಸೂಫಿಗಳಿಗೆ ಇರಬೇಕಾದದ್ದು ಈಮಾನ್-ಎ-ತಹ್‌ಖೀಖಿ, ಸಹಜವಾದ ಸತ್ಯ ವಿಶ್ವಾಸ. ಪ್ರವಾದಿ ಮಹಮ್ಮದ್ ಅವರ ಮರಣೋತ್ತರದಲ್ಲಿ ಇಸ್ಲಾಮ್ ಧರ್ಮವು ಅನೇಕ ಪಂಗಡ, ವಿಭಾಗಗಳಾಗಿ ವಿಭಜನೆಗೊಂಡಿದೆ. ಶಿಯಾ, ಸುನ್ನೀ, ಶಾಫೀ, ಹನಫೀ, ಹಂಬಲಿ, ಮಾಲಿಕಿ ಇತ್ಯಾದಿ ಎಲ್ಲವೂ ಅಲ್ಲಲ್ಲಿನ ಪ್ರಾದೇಶಿಕ, ವೈವಿಧ್ಯಮಯ ಸಾಂಸ್ಕೃತಿಕ ಅಗತ್ಯಕ್ಕೆಗನುಗುಣವಾಗಿ, ಭೌಗೋಳಿಕ ಕಾರಣಗಳಿಗಾಗಿ ಆಚರಣಾ ಕ್ರಮದಲ್ಲಿ ಬದಲಾವಣೆಗಳಾಗಿದ್ದರೂ, ಮೂಲ ಕರ್ತವ್ಯ, ವಿಶ್ವಾಸದಲ್ಲಿ ವ್ಯತ್ಯಾಸವು ಆಗಿರದಿರುವುದು ಉಲ್ಲೇಖನೀಯ. ಈ ಸಾಂಸ್ಕೃತಿಕ ಹೊಂದಾಣಿಕೆಯ ಗುಣದಿಂದಾಗಿ, ಇಸ್ಲಾಮ್ ವೈವಿಧ್ಯ ಮಯವಾಗಿ, ವಿಶ್ವವ್ಯಾಪಿಯಾಗಿ ಹರಡಲು ಸಾಧ್ಯವಾಯಿತು. ವಿಶೇಷವೆಂದರೆ ಶರಣರ ಭಕ್ತಿ ಹಾಗೂ ಸೂಫಿಗಳ ಖವ್ವಾಲಿಗಳಲ್ಲಿ ಸಾಕಷ್ಟು ಸಾಮ್ಯತೆ ಇರುವುದು ತುಲನಾತ್ಮಕವಾಗಿ ವಿಶ್ಲೇಷಿಸಿದಾಗ ಗಮನಕ್ಕೆ ಬರುತ್ತದೆ.

ಮುಂದುವರೆಯುವುದು...

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927 (RNINO:KARKAN/2011/48371)